VOLUME: 16 | 09 JUNE 2026 | ಮಂಗಳವಾರ | RS: 2 | PAGE: 06 ISSUE: 119 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಿರ್ದೇಶಕ ಬುಚಿ ಬಾಬು ಅವರ ಕ್ರೀಡಾ ಆಕ್ಷನ್ ನಾಟಕ 'ಪೆದ್ದಿ'ಯಲ್ಲಿ ಜಾಹ್ನವಿ ಕಪೂರ್ ಅವರ ಉಡುಪು ಈಗ ತೀವ್ರ ಚರ್ಚೆಗೆ ಕಾರಣವಾಗಿದೆ. ಕನ್ನಡ, ತೆಲುಗು ಮತ್ತು ತಮಿಳು ಚಿತ್ರಗಳಲ್ಲಿ ನಟಿಸಿರುವ ನಟಿ ಆಶಿಕಾ ರಂಗನಾಥ್, ಜಾಹ್ನವಿ ಅವರ ಬೆಂಬಲಕ್ಕೆ ನಿಂತಿದ್ದು ನೀವು ಚಿತ್ರತಂಡವನ್ನು ಪ್ರಶ್ನಿಸಬೇಕು ಎಂದು ಒತ್ತಾಯಿಸಿದ್ದಾರೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ವೀರ ಯೋಧರಿಗೆ ರಾಷ್ಟ್ರಪತಿಗಳಿಂದ ಶೌರ್ಯ ಗೌರವ

ನವದೆಹಲಿ: ದೇಶಕ್ಕಾಗಿ ಅಪ್ರತಿಮ ಧೈರ್ಯ ಮತ್ತು ತ್ಯಾಗ ತೋರಿದ ಭಾರತೀಯ ಸಶಸ್ತ್ರ ಪಡೆಗಳ ವೀರ ಯೋಧರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಷ್ಟ್ರದ ಅತ್ಯುನ್ನತ ಶೌರ್ಯ ಗೌರವಗಳನ್ನು ಪ್ರದಾನ ಮಾಡಿದರು. ರಾಷ್ಟ್ರಪತಿ ಭವನದಲ್ಲಿ ನಡೆದ 2026ರ ರಕ್ಷಣಾ ಗೌರವ ಸಮಾರಂಭದಲ್ಲಿ ವೀರ ಚಕ್ರ, ಕೀರ್ತಿ ಚಕ್ರ ಹಾಗೂ ಶೌರ್ಯ ಚಕ್ರ ಪುರಸ್ಕಾರಗಳನ್ನು ಪ್ರದಾನಿಸಲಾಯಿತು.

ಸಮಾರಂಭದಲ್ಲಿ ಯುದ್ಧ ಕಾಲದ ಅತ್ಯುನ್ನತ ಶೌರ್ಯಕ್ಕಾಗಿ ನೀಡುವ ವೀರ ಚಕ್ರ, ಶಾಂತಿ ಕಾಲದ ಅಸಾಧಾರಣ ಸಾಹಸಕ್ಕಾಗಿ ನೀಡುವ ಕೀರ್ತಿ ಚಕ್ರ ಹಾಗೂ ಧೈರ್ಯ ಮತ್ತು ಸಾಹಸಕ್ಕಾಗಿ ನೀಡುವ ಶೌರ್ಯ ಚಕ್ರ ಸೇರಿದಂತೆ ಒಟ್ಟು ಹಲವು ಗೌರವಗಳನ್ನು ರಾಷ್ಟ್ರಪತಿ ಅವರು ಯೋಧರಿಗೆ ನೀಡಿದರು.



ಯುದ್ಧ ಮತ್ತು ಕಾರ್ಯಾಚರಣೆಗಳ ಸಂದರ್ಭದಲ್ಲಿ ತಮ್ಮ ಪ್ರಾಣವನ್ನು ಪಣಕ್ಕಿಟ್ಟು ಶತ್ರುಗಳನ್ನು ಹಿಮ್ಮೆಟ್ಟಿಸಿದ ವಾಯುಪಡೆ, ಸೇನೆ ಮತ್ತು ನೌಕಾಪಡೆಯ ಅಧಿಕಾರಿಗಳಿಗೆ ವೀರ ಚಕ್ರ ಪ್ರಶಸ್ತಿ ಪ್ರದಾನ ಮಾಡಲಾಯಿತು. ಗಡಿ ಪ್ರದೇಶಗಳಲ್ಲಿ ಮತ್ತು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳಲ್ಲಿ ತೋರಿದ ಶೌರ್ಯಕ್ಕಾಗಿ ಹಲವು ಯೋಧರು ಈ ಗೌರವಕ್ಕೆ ಪಾತ್ರರಾದರು.

ಶಾಂತಿ ಸಮಯದಲ್ಲಿ ಅತ್ಯುನ್ನತ ಸಾಹಸ ತೋರಿದ ಯೋಧರಿಗೆ ನೀಡುವ ಕೀರ್ತಿ ಚಕ್ರ ಪ್ರಶಸ್ತಿಯನ್ನು ಸಹ ಈ ಸಂದರ್ಭದಲ್ಲಿ ಪ್ರದಾನಿಸಲಾಯಿತು. ಸಿಯಾಚಿನ್ ಸೇರಿದಂತೆ ಅತ್ಯಂತ ಕಠಿಣ ಪರಿಸ್ಥಿತಿಗಳಲ್ಲಿ ಸಹಯೋಧರನ್ನು ರಕ್ಷಿಸಿ ಪ್ರಾಣತ್ಯಾಗ ಮಾಡಿದ ವೀರ ಯೋಧರ ಕುಟುಂಬಸ್ಥರು ಈ ಗೌರವವನ್ನು ಸ್ವೀಕರಿಸಿದ್ದು ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾಯಿತು.

ಅದೇ ರೀತಿ ಭಯೋತ್ಪಾದನೆ ನಿಗ್ರಹ ಕಾರ್ಯಾಚರಣೆಗಳು, ಗಡಿ ರಕ್ಷಣೆ ಹಾಗೂ ಅಪಾಯಕಾರಿ ರಕ್ಷಣಾ ಕಾರ್ಯಗಳಲ್ಲಿ ಅಸಾಧಾರಣ ಧೈರ್ಯ ತೋರಿದ ಸೇನೆ, ವಾಯುಪಡೆ ಮತ್ತು ಅರೆಸೇನಾ ಪಡೆಗಳ ಯೋಧರಿಗೆ ಶೌರ್ಯ ಚಕ್ರ ನೀಡಿ ಗೌರವಿಸಲಾಯಿತು.

ಮರಣೋತ್ತರ ಗೌರವ ಪಡೆದ ಯೋಧರ ಕುಟುಂಬಗಳು ಕಣ್ಣೀರಿನ ನಡುವೆ ಪ್ರಶಸ್ತಿಗಳನ್ನು ಸ್ವೀಕರಿಸಿದ ದೃಶ್ಯಗಳು ರಾಷ್ಟ್ರದ ಮನಸನ್ನು ಮುಟ್ಟಿದವು. ಅವರ ತ್ಯಾಗ ಮತ್ತು ಶೌರ್ಯ ದೇಶದ ಭದ್ರತೆಯ ಬಲಿಷ್ಠ ಅಡಿಪಾಯವಾಗಿವೆ ಎಂದು ಸಮಾರಂಭದಲ್ಲಿ ಒತ್ತಿಹೇಳಲಾಯಿತು.

ರಕ್ಷಣಾ ಪಡೆಗಳ ಈ ಶೌರ್ಯ ಗೌರವಗಳು ದೇಶದ ಸೈನಿಕರ ಅಸಾಧಾರಣ ಬದ್ಧತೆ, ಧೈರ್ಯ ಮತ್ತು ತ್ಯಾಗವನ್ನು ಮತ್ತೊಮ್ಮೆ ದೇಶದ ಮುಂದೆ ತಂದು ನಿಲ್ಲಿಸಿವೆ.

## ಮಮತಾ ಬ್ಯಾನರ್ಜಿಗೆ ಬಿಗ್ ಶಾಕ್..!

ನವದೆಹಲಿ: ಪಶ್ಚಿಮ ಬಂಗಾಳದ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆಗಳು ನಡೆಯುತ್ತಿರುವ ನಡುವೆಯೇ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷದೊಳಗಿನ ಅಸಮಾಧಾನ ಮತ್ತಷ್ಟು ತೀವ್ರಗೊಂಡಿರುವ ಲಕ್ಷಣಗಳು ಗೋಚರಿಸುತ್ತಿವೆ. ವಿಧಾನಸಭಾ ಚುನಾವಣೆಯ ನಂತರ ಶಾಸಕಾಂಗ ಪಕ್ಷದಲ್ಲಿ ಉಂಟಾಗಿದ್ದ ಭಿನ್ನಾಭಿಪ್ರಾಯಗಳ ಬೆನ್ನಲ್ಲೇ ಇದೀಗ ಸಂಸದೀಯ ಪಕ್ಷದಲ್ಲೂ ವಿಭಜನೆಯ ಸಾಧ್ಯತೆಗಳು ಚರ್ಚೆಗೆ ಗ್ರಾಸವಾಗಿವೆ.

ಬಂಡಾಯ ಮನೋಭಾವ ಹೊಂದಿರುವ ಟಿಎಂಸಿ ಸಂಸದರ ಒಂದು ಗುಂಪು ಕೇಂದ್ರ ಸಚಿವ ಹಾಗೂ ಪಕ್ಷದ ವೀಕ್ಷಕರಾದ ಭೂಪೇಂದ್ರ ಯಾದವ್ ಅವರ ನಿವಾಸದಲ್ಲಿ ಸಭೆ ನಡೆಸಿರುವುದು ರಾಜಕೀಯ ವಲಯದಲ್ಲಿ ಕುತೂಹಲಕ್ಕೆ ಕಾರಣವಾಗಿದೆ. ಸಭೆಯ ಬಳಿಕ ಹಿರಿಯ ಸಂಸದೆ ಕಾಕೋಲಿ ಘೋಷ್ ದಸ್ತಿದಾರ್ ಅವರು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ 20 ಟಿಎಂಸಿ ಸಂಸದರ ಸಹಿಯಿರುವ ಪತ್ರವನ್ನು ಸಲ್ಲಿಸಿರುವುದಾಗಿ ತಿಳಿದುಬಂದಿದೆ.

ಈ ಪತ್ರದಲ್ಲಿ ಲೋಕಸಭೆಯಲ್ಲಿ ಪ್ರತ್ಯೇಕ ಬಣ ರಚಿಸುವ ಉದ್ದೇಶವನ್ನು ವ್ಯಕ್ತಪಡಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ರಾಜಕೀಯ ವಿಶ್ಲೇಷಕರ ಪ್ರಕಾರ, ಈ ಸಂಸದರ ಗುಂಪು ಮುಂದಿನ ಹಂತದಲ್ಲಿ ಟಿಎಂಸಿಯಿಂದ ಸಂಪೂರ್ಣವಾಗಿ ಹೊರಬಂದು ಹೊಸ ರಾಜಕೀಯ ಪಕ್ಷ ರಚಿಸುವ ಸಾಧ್ಯತೆಯನ್ನೂ ಪರಿಶೀಲಿಸುತ್ತಿದೆ. ಪಕ್ಷಾಂತರ ವಿರೋಧಿ ಕಾನೂನುಗಳಿಂದ ತಮ್ಮ ಸದಸ್ಯತ್ವಕ್ಕೆ ಧಕ್ಕೆಯಾಗದಂತೆ ಅಗತ್ಯ ಸಂಖ್ಯಾಬಲವನ್ನು ಒಗ್ಗೂಡಿಸಲು ಪ್ರಯತ್ನ ನಡೆಸಲಾಗುತ್ತಿದೆ ಎನ್ನಲಾಗಿದೆ.

ಮಮತಾ ಬ್ಯಾನರ್ಜಿ ಇಂಡಿಯಾ ಒಕ್ಕೂಟದ ಸಭೆಯಲ್ಲಿ ಭಾಗವಹಿಸಿದ್ದ ವೇಳೆ, ಬಂಡಾಯ ಸಂಸದರು ಪ್ರತ್ಯೇಕ ಬಣ ರಚನೆಗೆ ಸಂಬಂಧಿಸಿದ ಪತ್ರವನ್ನು ಸ್ಪೀಕರ್ ಕಚೇರಿಗೆ ಸಲ್ಲಿಸಿರುವುದು ವಿಶೇಷ ಗಮನ ಸೆಳೆದಿದೆ. ಮಧ್ಯಾಹ್ನ 12.53ಕ್ಕೆ ಈ ಪತ್ರ ಸಲ್ಲಿಕೆಯಾಗಿರುವುದಾಗಿ ವರದಿಯಾಗಿದೆ.

ಪತ್ರದಲ್ಲಿ ತಾವು ನೇರವಾಗಿ ಬಿಜೆಪಿಗೆ ಸೇರುವುದಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ. ಬದಲಾಗಿ ರಾಷ್ಟ್ರೀಯ ಜನತಾಂತ್ರಿಕ ಮೈತ್ರಿಕೂಟ (ಎನ್‌ಡಿಎ) ಜತೆ ಕೈಜೋಡಿಸುವ ಉದ್ದೇಶವಿದೆ ಎಂದು ತಿಳಿಸಲಾಗಿದೆ. ಇದರಿಂದ ಟಿಎಂಸಿಯಿಂದ ಪ್ರತ್ಯೇಕ ಗುಂಪಾಗಿ ಎನ್‌ಡಿಎ ಮೈತ್ರಿಕೂಟದ ಭಾಗವಾಗುವ ಸಾಧ್ಯತೆಗಳ ಬಗ್ಗೆ ಚರ್ಚೆಗಳು ಜೋರಾಗಿವೆ.

ಈ ಬೆಳವಣಿಗೆಗೆ ಸ್ಪೀಕರ್ ಕಚೇರಿಯಿಂದ ಇನ್ನೂ ಯಾವುದೇ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ. ಓಂ ಬಿರ್ಲಾ ಅವರು ಹೊರರಾಜ್ಯದ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಕಾರಣ ಪತ್ರವನ್ನು ಅವರ ಕಚೇರಿಗೆ ಸಲ್ಲಿಸಲಾಗಿದೆ.

## ಇರಾನ್ ತೊರೆಯಲು ಸೂಚನೆ

ನವದೆಹಲಿ: ಇರಾನ್ ಮತ್ತು ಇಸ್ರೇಲ್ ನಡುವೆ ಹೆಚ್ಚುತ್ತಿರುವ ಮಿಲಿಟರಿ ಸಂಘರ್ಷ ಹಾಗೂ ಉದ್ವಿಗ್ನ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ಭಾರತ ಸರ್ಕಾರವು ತನ್ನ ನಾಗರಿಕರಿಗಾಗಿ ಹೊಸ ಎಚ್ಚರಿಕೆಗಳನ್ನು ನೀಡಿದೆ.

ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯವು ಭಾರತೀಯ ನಾಗರಿಕರಿಗೆ ಇರಾನ್‌ಗೆ ಪ್ರಯಾಣಿಸದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಎರಡೂ ದೇಶಗಳ ನಡುವೆ ಮಿಲಿಟರಿ ದಾಳಿ ನಿಲ್ಲುವ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಇರಾನ್ ಮತ್ತು ಇಸ್ರೇಲ್ ನಡುವೆ ಕದನ ವಿರಾಮದ ಮಾತುಕತೆಗಳು ನಡೆಯುತ್ತಿದ್ದರೂ ಪರಸ್ಪರ ಇಂಧನ ಹಾಗೂ ಮಿಲಿಟರಿ ನೆಲೆಗಳ ಮೇಲೆ ದಾಳಿಗಳು ಮುಂದುವರಿದಿರುವುದೇ ಇದಕ್ಕೆ ಪ್ರಮುಖ ಕಾರಣವಾಗಿದೆ.

ಪ್ರಸ್ತುತ ಇರಾನ್‌ನಲ್ಲಿ ವಾಸಿಸುತ್ತಿರುವ ಅಥವಾ ಉದ್ಯೋಗ, ಶಿಕ್ಷಣ ಹಾಗೂ ಪ್ರವಾಸಕ್ಕಾಗಿ ಅಲ್ಲಿಗೆ ಹೋಗಿರುವ ಎಲ್ಲಾ ಭಾರತೀಯ ನಾಗರಿಕರು ತಕ್ಷಣವೇ ಇರಾನ್ ತೊರೆದು ಸುರಕ್ಷಿತವಾಗಿ ಭಾರತಕ್ಕೆ ಮರಳುವಂತೆ ಕೇಂದ್ರ ಸರ್ಕಾರ ಒತ್ತಾಯಿಸಿದೆ.



ಕರ್ನಾಟಕ ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ ಚುನಾವಣೆಗೆ ಕೊನೆಯ ದಿನವಾದ ಸೋಮವಾರ ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿ ರಘು.ಆರ್ ಮತ್ತು ಅಂಗರಾಜ್ ಪಾಟೀಲ್, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ವಿನಯ್ ಕಾರ್ತಿಕ್ ಪ್ರಕಾಶ್ ಹಾಗೂ ಜಾತ್ಯತೀತ ಜನತಾದಳ ಪಕ್ಷದ ಅಭ್ಯರ್ಥಿಯಾಗಿ ಗೋವಿಂದರಾಜು ಅವರುಗಳು ವಿಧಾನಸೌಧದಲ್ಲಿ ವಿಧಾನ ಸಭೆಯ ಕಾರ್ಯದರ್ಶಿ ಹಾಗೂ ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರು.

## ಶಕ್ತಿ ಯೋಜನೆಗೆ ಸ್ಮಾರ್ಟ್ ಕಾರ್ಡ್ ವಿತರಣೆ

ಬೆಂಗಳೂರು: ರಾಜ್ಯದ ನೂತನ ಸಾರಿಗೆ ಸಚಿವರಾಗಿ ಬೈರತಿ ಸುರೇಶ್ ಅವರು ಸೋಮವಾರ ವಿಧಾನಸೌಧದಲ್ಲಿ ಅಧಿಕಾರ ಸ್ವೀಕರಿಸಿ, ತಕ್ಷಣವೇ ಸಾರಿಗೆ ಇಲಾಖೆಯ ವಿವಿಧ ನಿಗಮಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಹತ್ವದ ಘೋಷಣೆಗಳನ್ನು ಮಾಡಿದರು.

ಅಧಿಕಾರ ಸ್ವೀಕಾರದ ಬಳಿಕ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿಗೆ ಭೇಟಿ ನೀಡಿದ ಸಚಿವರು, ಕೆಎಸ್ಆರ್ಟಿಸಿ, ಬಿಎಂಟಿಸಿ, ಕೆಕೆಆರ್‌ಟಿಸಿ ಹಾಗೂ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಮುಖ್ಯಸ್ಥರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಇಲಾಖೆಯ ಕಾರ್ಯವೈಖರಿ ಕುರಿತು ಮಾಹಿತಿ ಪಡೆದರು.

ಈ ವೇಳೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಜನರ ಬದುಕಿಗೆ ನೆರವಾಗಿದ್ದು, ಅದರಲ್ಲೂ ಶಕ್ತಿ ಯೋಜನೆಯನ್ನು ರಾಜ್ಯದ ಕೋಟ್ಯಂತರ ಮಹಿಳೆಯರು ಸದುಪಯೋಗಪ ‘ಡಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು. ಶಕ್ತಿ ಯೋಜನೆ ಜಾರಿಯಾದ ನಂತರ ರಾಜ್ಯದಲ್ಲಿ ಬಸ್ ಪ್ರಯಾಣಿಕರ ಸಂಖ್ಯೆಯಲ್ಲಿ ಸುಮಾರು 40 ಶೇಕಡಾ ಏರಿಕೆಯಾಗಿದೆ ಎಂದು ತಿಳಿಸಿದರು.

### ಮಹಿಳೆಯರಿಗೆ ಉಚಿತ ಸ್ಮಾರ್ಟ್ ಕಾರ್ಡ್

ಶಕ್ತಿ ಯೋಜನೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೆ ತರಲು ಮಹಿಳೆಯರಿಗೆ ಉಚಿತ ಪ್ರಯಾಣಕ್ಕಾಗಿ ವಿಶೇಷ ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಲು ಸರ್ಕಾರ ನಿರ್ಧರಿಸಿದೆ ಎಂದು ಸಚಿವರು ಘೋಷಿಸಿದರು. ರಾಜ್ಯದ ಮೂರು ಕೋಟಿಗೂ ಅಧಿಕ ಮಹಿಳೆಯರಿಗೆ ಈ ಸ್ಮಾರ್ಟ್ ಕಾರ್ಡ್ ವಿತರಿಸುವ ಗುರಿ ಹೊಂದಲಾಗಿದೆ ಎಂದರು.

ಮಹಿಳೆಯರಿಗೆ ಉಚಿತವಾಗಿ ಕಾರ್ಡ್ ನೀಡಲಾಗುತ್ತದೆ. ಪುರುಷರು ಮೆಟ್ರೋ ಕಾರ್ಡ್ ಮಾದರಿಯಲ್ಲಿ ಹಣ ಪಾವತಿಸಿ ಸ್ಮಾರ್ಟ್ ಕಾರ್ಡ್ ಪಡೆದುಕೊಳ್ಳಬಹುದಾಗಿದೆ. ಹಣ ಖಾಲಿಯಾದ ಬಳಿಕ ಕಾರ್ಡ್ ಅನ್ನು ಮರುಭರ್ತಿ ಮಾಡಿಕೊಳ್ಳುವ ವ್ಯವಸ್ಥೆ ಇರಲಿದೆ ಎಂದು ವಿವರಿಸಿದರು.

ಸುಮಾರು ಮೂರು ಕೋಟಿ ಸ್ಮಾರ್ಟ್ ಕಾರ್ಡ್ ತಯಾರಿಕೆ ಅಗತ್ಯವಿರುವುದರಿಂದ ಜಾಗತಿಕ ಟೆಂಡರ್ ಕರೆಯಲಾಗುವುದು. ಪೈಲಟ್ ಯೋಜನೆಯಡಿ ಶೀಘ್ರದಲ್ಲೇ ಕಾರ್ಡ್ ವಿತರಣೆ ಪ್ರಕ್ರಿಯೆ ಆರಂಭಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

### 1000 ಹೊಸ ಬಸ್ ಖರೀದಿ

ರಾಜ್ಯ ಸರ್ಕಾರದ ಅನುದಾನದಲ್ಲಿ 1000 ಹೊಸ ಬಸ್‌ಗಳನ್ನು ಖರೀದಿಸಲಾಗುತ್ತದೆ. ಜೊತೆಗೆ ಕೇಂದ್ರ ಸರ್ಕಾರದ ನೆರವಿನಿಂದ 4000 ಎಲೆಕ್ಟ್ರಿಕ್ ಬಸ್‌ಗಳನ್ನು ಖರೀದಿಸುವ ಯೋಜನೆಯೂ ಇದೆ. ಹಂತ ಹಂತವಾಗಿ ಈ ಬಸ್‌ಗಳನ್ನು ನಾಲ್ಕೂ ಸಾರಿಗೆ ನಿಗಮಗಳಿಗೆ ಹಂಚಿಕೆ ಮಾಡಲಾಗುತ್ತದೆ ಎಂದು ಸಚಿವರು ತಿಳಿಸಿದರು.

## ಖಾಸಗಿ ಆಸ್ಪತ್ರೆಗಳಿಗೆ ಯು.ಟಿ.ಖಾದರ್ ವಾರ್ನಿಂಗ್..!

ಮಂಗಳೂರು: ಆರೋಗ್ಯ ಸಚಿವ ಯು.ಟಿ. ಖಾದರ್ ಅವರು ಅಧಿಕಾರ ಸ್ವೀಕರಿಸಿದ ಬಳಿಕ ಆರೋಗ್ಯ ಇಲಾಖೆಯಲ್ಲಿ ವ್ಯಾಪಕ ಸುಧಾರಣೆಗೆ ಮುಂದಾಗಿದ್ದು, ಸರ್ಕಾರಿ ಆರೋಗ್ಯ ಸೇವೆಗಳನ್ನು ಬಲಪಡಿಸುವ ಹಾಗೂ ಖಾಸಗಿ ಆಸ್ಪತ್ರೆಗಳ ಮೇಲಿನ ನಿಯಂತ್ರಣವನ್ನು ಕಠಿಣಗೊಳಿಸುವ ನಿಟ್ಟಿನಲ್ಲಿ ಮಹತ್ವದ ಕ್ರಮಗಳನ್ನು ಘೋಷಿಸಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನೆಗಾಗಿ ಮಂಗಳೂರಿನಲ್ಲಿ ಆರೋಗ್ಯ ಇಲಾಖೆಯ ಉನ್ನತ ಅಧಿಕಾರಿಗಳು ಮತ್ತು ವೈದ್ಯಕೀಯ ತಂಡದ ಪ್ರಮುಖರೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರಿ ಆಸ್ಪತ್ರೆಗಳ ಸಾಮರ್ಥ್ಯ ಹೆಚ್ಚಿಸುವ ಜೊತೆಗೆ ಸಾರ್ವಜನಿಕರ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುವ ಖಾಸಗಿ ಆಸ್ಪತ್ರೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಚಿಕಿತ್ಸೆ ಪಡೆಯುವ ಬಿಪಿಎಲ್ ಕಾರ್ಡ್ ಹೊಂದಿರುವ ರೋಗಿಗಳಿಂದ ಯಾವುದೇ ಖಾಸಗಿ ಆಸ್ಪತ್ರೆಯು ಹೆಚ್ಚುವರಿ ಹಣ ವಸೂಲಿ ಮಾಡುವಂತಿಲ್ಲ ಎಂದು ಸ್ಪಷ್ಟಪಡಿಸಿದ ಸಚಿವರು, ಯೋಜನೆಯ ಪರಿಣಾಮಕಾರಿ ಅನುಷ್ಠಾನದಲ್ಲಿ ‘ಆರೋಗ್ಯ ಮಿತ್ರ’ರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ರೋಗಿಗಳಿಗೆ ಅಗತ್ಯ ನೆರವು ನೀಡುವಲ್ಲಿ ಆರೋಗ್ಯ ಮಿತ್ರರು ನಿರ್ಲಕ್ಷ್ಯ ತೋರಿದರೆ ಅಥವಾ ಕರ್ತವ್ಯ ಲೋಪ ಎಸಗಿದರೆ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

ಇದಲ್ಲದೆ, ಸರ್ಕಾರದ ಉಚಿತ ಆರೋಗ್ಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ನಿರಾಕರಿಸುವ ಖಾಸಗಿ ಆಸ್ಪತ್ರೆಗಳ ಪರವಾನಗಿಯನ್ನು ಯಾವುದೇ ಮುಲಾಜಿಲ್ಲದೆ ರದ್ದುಗೊಳಿಸಲಾಗುವುದು ಎಂದು ಖಾದರ್ ಕಠಿಣ ಸಂದೇಶ ನೀಡಿದರು. ಎಪಿಎಲ್ ಕಾರ್ಡ್‌ದಾರರಿಗೆ ಅನ್ವಯವಾಗಿರುವ 30–70 ಅನುಪಾತದ ಯೋಜನೆಯ ಬಗ್ಗೆಯೂ ಮರುಪರಿಶೀಲನೆ ನಡೆಸಿ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ರಾಜ್ಯದಲ್ಲಿ ತೀವ್ರವಾಗಿ ಕಾಡುತ್ತಿರುವ ಸರ್ಕಾರಿ ವೈದ್ಯರ ಕೊರತೆಯ ವಿಷಯವೂ ಸಭೆಯಲ್ಲಿ ಪ್ರಮುಖ ಚರ್ಚೆಯ ವಿಷಯವಾಗಿತ್ತು.

ಗ್ರಾಮೀಣ ಹಾಗೂ ದುರ್ಗಮ ಪ್ರದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವ ವೈದ್ಯರನ್ನು ಉತ್ತೇಜಿಸಲು ಅವರ ವೇತನ ಹೆಚ್ಚಿಸುವ ಕುರಿತು ಇಲಾಖೆ ಚಿಂತನೆ ನಡೆಸುತ್ತಿದೆ ಎಂದು ಸಚಿವರು ತಿಳಿಸಿದರು.

ಸಾರಿಗೆ ನೌಕರರ ಸಮಸ್ಯೆಗಳೂ ಹಾಗೆಯೇ ಇದ್ದವು. ನಾನು ಬಂದ ಮೇಲೆ ಹಂತ ಹಂತವಾಗಿ ಪರಿಷ್ಕಾರ ಮಾಡಿದ್ದೇನೆ. ಶಕ್ತಿ ಯೋಜನೆಯಡಿ ಇದುವರೆಗೆ 750 ಕೋಟಿ ಮಹಿಳೆಯರು ರಾಜ್ಯದಾದ್ಯಂತ ಸಂಚರಿಸಿದ್ದಾರೆ. ಇಲಾಖೆಯನ್ನು ಸಾದ್ಯಂತವಾಗಿ ನಿರ್ವಹಿಸಿರುವ ಹೆಮ್ಮೆ ನನಗಿದೆ. ಸಾರಿಗೆ ಇಲಾಖೆಗೆ ಸಚಿವನಾದ ಮೇಲೆ ಮಾಡಿದ ಜನಪರ ಯೋಜನೆಗಳ ಅನುಷ್ಠಾನಗಳಿಗೆ 425 ಪ್ರಶಸ್ತಿಗಳು ಲಭಿಸಿದ್ದೇ ಇದಕ್ಕೆ ಸಾಕ್ಷಿ ಎಂದರು. ನನಗೀಗ ನೀಡಿರುವ ಖಾತೆಯನ್ನು ಇನ್ನೂ ಎರಡು-ಮೂರು ತಿಂಗಳೊಳಗೆ ಸರಿಯಾದ ಕ್ರಮದಲ್ಲಿ ನಿಭಾಯಿಸಲು ತೊಡಗುತ್ತೇನೆ. ಇದೇ ಖಾತೆ ನನಗೆ ಮುಂದುವರಿಯುತ್ತದೆ.

## ‘ನಾನು ಎಲ್ಲೂ ಕೆಟ್ಟ ಹೆಸರು ಪಡೆದುಕೊಂಡಿಲ್ಲ’

ಬೆಂಗಳೂರು: ಯಾವುದೇ ಖಾತೆಗಳನ್ನು ನೀಡಿದರೂ ನಾನು ಸಮರ್ಥವಾಗಿ ನಿಭಾಯಿಸಿಕೊಂಡು ಬರುತ್ತಿದ್ದೇನೆ. ಈಗ ಕೊಟ್ಟಿರುವ ಖಾತೆಯನ್ನೂ ನಾಡಿನ ಹಿತಕ್ಕಾಗಿಯೇ ನಿರ್ವಹಿಸುತ್ತೇನೆ.

ಈಗಾಗಲೇ ವಿವಿಧ ಇಲಾಖೆಗಳ ಸಚಿವನಾಗಿ ಕೆಲಸ ಮಾಡಿರುವ ನಾನು ಯಾವುದೇ ಇಲಾಖೆಯಲ್ಲೂ ಕಳಂಕ ಅಂಟಿಸಿಕೊಂಡಿಲ್ಲ ಎಂದು ಭಾರೀ ಮತ್ತು ಮಧ್ಯಮ ನೀರಾವರಿ ಇಲಾಖೆಯ ನೂತನ ಸಚಿವರಾದ ರಾಮಲಿಂಗಾರೆಡ್ಡಿ ಹೇಳಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂಪುಟದ ಸಚಿವರಾದ ಬಳಿಕ ಇದೇ ಮೊದಲ ಬಾರಿಗೆ ವಿಧಾನಸೌಧದಲ್ಲಿ ಜಲ ಸಂಪನ್ಮೂಲ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಬಳಿಕ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಈ ಹಿಂದೆ ಇದ್ದ ಬಿಜೆಪಿ ಸರ್ಕಾರ ಸಾರಿಗೆ ಇಲಾಖೆಯಲ್ಲಿ 4 ಸಾವಿರ ಕೋಟಿ ಸಾಲ ಬಿಟ್ಟು ಹೋಗಿತ್ತು.

ಸಾರಿಗೆ ನೌಕರರ ಸಮಸ್ಯೆಗಳೂ ಹಾಗೆಯೇ ಇದ್ದವು. ನಾನು ಬಂದ ಮೇಲೆ ಹಂತ ಹಂತವಾಗಿ ಪರಿಷ್ಕಾರ ಮಾಡಿದ್ದೇನೆ. ಶಕ್ತಿ ಯೋಜನೆಯಡಿ ಇದುವರೆಗೆ 750 ಕೋಟಿ ಮಹಿಳೆಯರು ರಾಜ್ಯದಾದ್ಯಂತ ಸಂಚರಿಸಿದ್ದಾರೆ. ಇಲಾಖೆಯನ್ನು ಸಾದ್ಯಂತವಾಗಿ ನಿರ್ವಹಿಸಿರುವ ಹೆಮ್ಮೆ ನನಗಿದೆ. ಸಾರಿಗೆ ಇಲಾಖೆಗೆ ಸಚಿವನಾದ ಮೇಲೆ ಮಾಡಿದ ಜನಪರ ಯೋಜನೆಗಳ ಅನುಷ್ಠಾನಗಳಿಗೆ 425 ಪ್ರಶಸ್ತಿಗಳು ಲಭಿಸಿದ್ದೇ ಇದಕ್ಕೆ ಸಾಕ್ಷಿ ಎಂದರು.

ನನಗೀಗ ನೀಡಿರುವ ಖಾತೆಯನ್ನು ಇನ್ನೂ ಎರಡು–ಮೂರು ತಿಂಗಳೊಳಗೆ ಸರಿಯಾದ ಕ್ರಮದಲ್ಲಿ ನಿಭಾಯಿಸಲು ತೊಡಗುತ್ತೇನೆ. ಇದೇ ಖಾತೆ ನನಗೆ ಮುಂದುವರಿಯುತ್ತದೆ. ನಾನು ಬೇರೆ ಖಾತೆ ಕೇಳುವುದಿಲ್ಲ. ಇನ್ನೂ 20 ಜನ ಮಂತ್ರಿಗಳಿದ್ದಾರೆ. ಅವರಿಗೂ ಅವಕಾಶಗಳು ಲಭಿಸಲಿ. ಸಿಎಂ ಬದಲಾದ ಬಳಿಕ ನಡೆದ ವಿದ್ಯಮಾನದಲ್ಲಿ ನನ್ನ ರಾಜೀನಾಮೆ ವಾಪಸ್ಸು ತೆಗೆದುಕೊಂಡಿದ್ದಾಯಿತು, ಆಗ ಇಶ್ಯೂ ಕೂಡ ಆಯಿತು. ಈಗ ಬೇರೆ ಖಾತೆ ಕೊಡುತ್ತೇನೆ ಎಂದರೂ ನನಗೇನೂ ಬೇಡ ಎಂದರು. ರಾಮಲಿಂಗಾರೆಡ್ಡಿ ಅವರ ನೋವು, ಅಂತರಾತ್ಮ ಅರ್ಥ ಆಗಿದೆಯಾ ನಿಮ್ಮವರಿಗೆ? ಅಂತ ಕೇಳಿದ ಪ್ರಶ್ನೆಗೆ



ಉತ್ತರಿಸಿದ ಅವರು, ನೋ ಕಾಮೆಂಟ್ಸ್ ಅಂತ ಅಷ್ಟೇ ಹೇಳಿದರು.

ನಾನು ಯಾವತ್ತೂ ಪೋರ್ಟ್ ಪೋಲಿಯೋ ಕೇಳಿಲ್ಲ. ನನಗಿದು ಹೊಸ ಖಾತೆ. 37 ವರ್ಷಗಳಲ್ಲಿ ವಿವಿಧ ಇಲಾಖೆಗಳ ಹೊಣೆಗಾರಿಕೆ ಅರಿತಿದ್ದೇನೆ. ಇಂಥದ್ದೇ ಇಲಾಖೆಗೆ ನನ್ನನ್ನು ಮಂತ್ರಿಯನ್ನಾಗಿ ಮಾಡಿ ಎಂದು ನಾನು ಎಂದೂ ಕೇಳಿಲ್ಲ. ಇದುವರೆಗೆ ದೆಹಲಿ ಭೇಟಿಗಳು ಕೇವಲ ನನ್ನ ಇಲಾಖೆಗೆ ಸಂಬಂಧಿಸಿದ ವಿಷಯಗಳ ಬಗೆಗಿನ ಚರ್ಚೆಗಾಗಿ ಮಾತ್ರ ಸೀಮಿತವಾಗಿತ್ತೇ ವಿನಾ ಬೇರೆ ಕಾರಣಗಳಿಗೆ ಅಲ್ಲ. ಕಳೆದ ಬಾರಿ ನನಗೆ ಎರಡು ಖಾತೆಗಳನ್ನು ನೀಡಲಾಗಿತ್ತು.

ಮುಜರಾಯಿ ಇಲಾಖೆ ಸಾಮಾನ್ಯವಾಗಿ ಯಾರೂ ಕೇಳುವುದಿಲ್ಲ. ಇದು ನನಗೆ ಬಂದ ಭಾಗ್ಯವೆಂದು ಪರಿಗಣಿಸಿ ಇಲಾಖೆಗೆ ಸೇವೆ ಮಾಡಿದ್ದೇನೆನ್ನುವ ತೃಪ್ತಿ ಇದೆ ಎಂದರು. ನಾನು ಯಾವತ್ತೂ ಪೋರ್ಟ್ ಪೋಲಿಯೋ ಕೇಳಿಲ್ಲ. ನನಗಿದು ಹೊಸ ಖಾತೆ. 37 ವರ್ಷಗಳಲ್ಲಿ ವಿವಿಧ ಇಲಾಖೆಗಳ ಹೊಣೆಗಾರಿಕೆ ಅರಿತಿದ್ದೇನೆ. ಇಂಥದ್ದೇ ಇಲಾಖೆಗೆ ನನ್ನನ್ನು ಮಂತ್ರಿಯನ್ನಾಗಿ ಮಾಡಿ ಎಂದು ನಾನು ಎಂದೂ ಕೇಳಿಲ್ಲ. ಇದುವರೆಗೆ ದೆಹಲಿ ಭೇಟಿಗಳು ಕೇವಲ ನನ್ನ ಇಲಾಖೆಗೆ ಸಂಬಂಧಿಸಿದ ವಿಷಯಗಳ ಬಗೆಗಿನ ಚರ್ಚೆಗಾಗಿ ಮಾತ್ರ ಸೀಮಿತವಾಗಿತ್ತೇ ವಿನಾ ಬೇರೆ ಕಾರಣಗಳಿಗೆ ಅಲ್ಲ. ಕಳೆದ ಬಾರಿ ನನಗೆ ಎರಡು ಖಾತೆಗಳನ್ನು ನೀಡಲಾಗಿತ್ತು.

ಮುಜರಾಯಿ ಇಲಾಖೆ ಸಾಮಾನ್ಯವಾಗಿ ಯಾರೂ ಕೇಳುವುದಿಲ್ಲ. ಇದು ನನಗೆ ಬಂದ ಭಾಗ್ಯವೆಂದು ಪರಿಗಣಿಸಿ ಇಲಾಖೆಗೆ ಸೇವೆ ಮಾಡಿದ್ದೇನೆನ್ನುವ ತೃಪ್ತಿ ಇದೆ

ಜಲಸಂಪನ್ಮೂಲ ಇಲಾಖೆ ನನಗೆ ಹೊಸದು. ಕಳಸಾ ಬಂಡೂರಿ ಯೋಜನೆ ಸೇರಿದಂತೆ ಹಲವಾರು ಅಭಿವೃದ್ಧಿ ಯೋಜನೆಗಳ ಪಟ್ಟಿಯೇ ಇದೆ. ರಾಜ್ಯದ ಯೋಜನೆಗಳ ಅನುಷ್ಠಾನಗಳಿಗೆ ಪೂರಕವಾಗಿ ಕೆಲಸ ಮಾಡಲು ನಿಮ್ಮೆಲ್ಲರ ಸಹಕಾರ ಅಗತ್ಯ.

ಪತ್ರಕರ್ತರು ಈ ಹಿಂದೆಯೂ ನೀಡಿದ್ದೀರಿ. ಮುಂದೆಯೂ ನಿಮ್ಮಗಳ ಸಹಕಾರ ಅಗತ್ಯವಿದೆ. ಮುಂದಿನ ದಿನಗಳಲ್ಲಿ ಕೇಂದ್ರದೊಂದಿಗೆ ಚರ್ಚಿಸಿ ಜಲಸಂಪನ್ಮೂಲ ಇಲಾಖೆಯನ್ನು ಸದೃಢಗೊಳಿಸಿ, ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತದೆ ಎಂದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಪ್ರಕರಣ ಇತ್ಯರ್ಥ



ಬೆಂಗಳೂರುರಾಮನಗರದ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯದ ನ್ಯಾಯಾಧೀಶರಾದ ಅವಿನಾಶ್ ಚಿಂದು ಎಚ್ ಅವರು 11 ವರ್ಷಗಳಿಂದ ವಿಲೇ ಇದ್ದ ಅಸಲು ದಾವೆ ಸಂಖ್ಯೆ.307/2015 ಪ್ರಕರಣವನ್ನು ಪ್ರತಿ ದಿನದ ಲೋಕ್ ಅದಾಲತ್‌ನಲ್ಲಿ ಬಗೆಹರಿಸಿದ್ದು, ಈ ಪ್ರಕರಣವು ಮುಕ್ತಾಯಗೊಳ್ಳುವಲ್ಲಿ ಮತ್ತು ಬಗೆಹರಿಸುವಲ್ಲಿ ಪಕ್ಷಗಾರರ ಪರ ಹಾಜರಾಗಿದ್ದ ವಕೀಲರುಗಳಾದ ಶಿವಸ್ವಾಮಿ, ಜಿ.ವಿ. ಶ್ರೀನಿವಾಸ್, ಆನಂದ ಭೈರವ, ಶಿವಣ್ಣಗೌಡ ಅವರು ಪಕ್ಷಗಾರರನ್ನು ಮನ ಒಲಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುತ್ತಾರೆ.

ಈ ಕೇಸಿನ 5ನೇ ಪ್ರತಿವಾದಿಯಾಗಿದ್ದ 82 ವರ್ಷದ ಸಿಂಗಮ್ಮ ಅವರು ನ್ಯಾಯಾಲಯದ ಒಳಗೆ ಬರಲು ಸಾಧ್ಯವಿಲ್ಲದೇ ನ್ಯಾಯಾಲಯದ ಹೊರಗೆ ಕಾರಿನಲ್ಲಿ ಕುಳಿತಿದ್ದು, ನ್ಯಾಯಾಧೀಶರು ಸ್ವತಃ ಅಲ್ಲಿಗೆ ಹೋಗಿ ವಿಚಾರಣೆ ಮಾಡಿ ಆಕೆಯ ಒಪ್ಪಿಗೆಯನ್ನು ವಕೀಲರ ಸಮಕ್ಷಮ ಪಡೆದು ಪ್ರಕರಣವನ್ನು ಇತ್ಯರ್ಥಪಡಿಸಿರುತ್ತಾರೆ.

ಈ ಕೇಸಿನಲ್ಲಿ ಐದು ಜನ ಹಿರಿಯ ನಾಗರಿಕರಿದ್ದು, ಪ್ರಕರಣವನ್ನು ಪ್ರತಿ ದಿನದ ಲೋಕ್ ಆದಾಲತ್‌ನಲ್ಲಿ ಬಗೆಹರಿಸಲಾಯಿತು ಮತ್ತು ನ್ಯಾಯಾಲಯದ ಆದೇಶದ ಮೇಲೆ ಯಾವುದೇ ಮೇಲ್ಮನವಿ ಇಲ್ಲ ಎಂದು ಪಕ್ಷಗಾರರಿಗೆ ತಿಳಿಸಲಾಗಿರುತ್ತದೆ. ಈ ರೀತಿ ಸದರಿ ಪ್ರಕರಣವು ಇಬ್ಬರು ಪಕ್ಷಗಾರರಿಗೂ ಅನುಕೂಲವಾಗುವಂತೆ ನ್ಯಾಯಾಲಯದಲ್ಲಿ ಸುಖಾಂತ್ಯವನ್ನು ಕಂಡಿರುತ್ತದೆ.

# ಆರೋಗ್ಯ ವಿಮೆ ಬಗ್ಗೆ ಬೆಂಗಳೂರಿನ ಯುವಕರಲ್ಲಿ ಹೆಚ್ಚಿದ ಜಾಗೃತಿ

ಬೆಂಗಳೂರು: ಯುವ ಭಾರತೀಯರ ಆರೋಗ್ಯ ವಿಮೆ ಕುರಿತ ಮನೋಭಾವ ಮತ್ತು ಸಿದ್ಧತೆಯನ್ನು ವಿಶ್ಲೇಷಿಸುವ ಉದ್ದೇಶದಿಂದ ನಿವಾ ಬೂಪಾ ಆರೋಗ್ಯ ವಿಮೆ ಸಂಸ್ಥೆ ಬಿಡುಗಡೆ ಮಾಡಿರುವ

niva Bupa
Health Insurance

"ಯಂಗ್ ಇಂಡಿಯಾ ಹೆಲ್ತ್ ಇನ್ಶುರೆನ್ಸ್ ವರದಿ" ಬೆಂಗಳೂರಿನ ಯುವಕರಲ್ಲಿ ಆರೋಗ್ಯ ವಿಮೆ ಕುರಿತು ಉತ್ತಮ ಅರಿವು ಮತ್ತು ಸ್ವೀಕಾರವಿದ್ದರೂ, ಹೆಚ್ಚುತ್ತಿರುವ ಆರ್ಥಿಕ ಒತ್ತಡಗಳು ಮತ್ತು ಹಣಕಾಸಿನ ಬದ್ಧತೆಗಳು ದೀರ್ಘಕಾಲಿಕ ವಿಮಾ ರಕ್ಷಣೆಯ ನಿರಂತರತೆಗೆ ಸವಾಲಾಗಿವೆ ಎಂದು ತಿಳಿಸಿದೆ.

ದೇಶದ 35ಕ್ಕೂ ಹೆಚ್ಚು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ 2,400ಕ್ಕೂ ಹೆಚ್ಚು ಪ್ರತಿಕ್ರಿಯೆಗಳ ಆಧಾರದ ಮೇಲೆ ಸಿದ್ಧಪಡಿಸಲಾದ ಈ ವರದಿಯಲ್ಲಿ "ಹೆಲ್ತ್ ಪ್ರೊಟೆಕ್ಷನ್ ಸ್ಕೋರ್" ಎಂಬ ವಿಶಿಷ್ಟ ಸೂಚ್ಯಂಕವನ್ನು ಪರಿಚಯಿಸಲಾಗಿದೆ. ವೈದ್ಯಕೀಯ ತುರ್ತು ಪರಿಸ್ಥಿತಿಗಳನ್ನು ಎದುರಿಸಲು ವ್ಯಕ್ತಿಗಳು ಎಷ್ಟು ಸಿದ್ಧರಾಗಿದ್ದಾರೆ ಎಂಬುದನ್ನು ಈ ಸೂಚ್ಯಂಕ ಅಳೆಯುತ್ತದೆ.

# ಓವಿಸ್ ಬೇಸಿಗೆ ಶಿಬಿರದಲ್ಲಿ 200ಕ್ಕೂ ಹೆಚ್ಚು ವಿದ್ಯಾರ್ಥಿಗಳ ಸಂಭ್ರಮ

ಬೆಂಗಳೂರು

ಒನ್ ವರ್ಲ್ಡ್ ಇಂಟರ್ನ್ಯಾಷನಲ್ ಸ್ಕೂಲ್ ವತಿಯಿಂದ ಆಯೋಜಿಸಲಾಗಿದ್ದ ಓವಿಸ್ ಬೇಸಿಗೆ ಶಿಬಿರ 2026 ಯಶಸ್ವಿಯಾಗಿ ಸಮಾಪ್ತಿಗೊಂಡಿದ್ದು, ಸರ್ಜಾಪುರ ಹಾಗೂ ವೈಟ್‌ಫೀಲ್ಡ್ ಕ್ಯಾಂಪಸ್‌ಗಳಲ್ಲಿ ನಡೆದ ಈ ಶಿಬಿರದಲ್ಲಿ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ಕಲಿಕೆ, ಸೃಜನಶೀಲತೆ ಮತ್ತು ಮನರಂಜನೆಯ ಸಂಭ್ರಮವನ್ನು ಅನುಭವಿಸಿದರು.



ಬೇಸಿಗೆ ರಜೆಯನ್ನು ಮಕ್ಕಳಿಗೆ ಅರ್ಥಪೂರ್ಣ ಹಾಗೂ ಮನರಂಜನಾತ್ಮಕವಾಗಿಸಲು ರೂಪಿಸಲಾಗಿದ್ದ ಈ ಶಿಬಿರದಲ್ಲಿ ವಿದ್ಯಾರ್ಥಿಗಳು ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದರು. ಹೊಸ ಆಸಕ್ತಿಗಳನ್ನು ಅನ್ವೇಷಿಸುವುದರ ಜೊತೆಗೆ ಆತ್ಮವಿಶ್ವಾಸ ಬೆಳೆಸಿಕೊಂಡು ಸ್ನೇಹವನ್ನು ಗಟ್ಟಿಗೊಳಿಸುವ ಅವಕಾಶವೂ ಮಕ್ಕಳಿಗೆ ಲಭಿಸಿತು. ವಿವಿಧ ವಯೋಮಾನದ ವಿದ್ಯಾರ್ಥಿಗಳಿಗಾಗಿ ವಿಶೇಷವಾಗಿ ರೂಪಿಸಲಾದ ಈ ಶಿಬಿರದಲ್ಲಿ ಕ್ರೀಡೆ, ಆರೋಗ್ಯ, ಪ್ರದರ್ಶನ ಕಲೆಗಳು ಹಾಗೂ ಸೃಜನಾತ್ಮಕ ಚಟುವಟಿಕೆಗಳಿಗೆ ಆದ್ಯತೆ ನೀಡಲಾಗಿತ್ತು. ಫುಟ್ಬಾಲ್, ಬ್ಯಾಸ್ಕೆಟ್‌ಬಾಲ್, ಈಜು, ಸ್ಕೇಟಿಂಗ್, ಯೋಗ, ಕಲೆ ಮತ್ತು ಕರಕುಶಲತೆ, ಅಥ್ಲೆಟಿಕ್ಸ್, ಚೆಸ್, ಕ್ರಿಕೆಟ್, ನೃತ್ಯ, ಸಂಗೀತ ಹಾಗೂ ಸಮರ ಕಲೆಗಳಂತಹ ಹಲವು ಚಟುವಟಿಕೆಗಳು ವಿದ್ಯಾರ್ಥಿಗಳನ್ನು ಆಕರ್ಷಿಸಿವೆ. ವಿದ್ಯಾರ್ಥಿಗಳು ತಮ್ಮ ಆಸಕ್ತಿಗೆ ಅನುಗುಣವಾಗಿ ಎರಡು ಚಟುವಟಿಕೆಗಳನ್ನು ಆಯ್ಕೆ ಮಾಡಿಕೊಂಡು ಭಾಗವಹಿಸುವ ಅವಕಾಶ ಪಡೆದಿದ್ದು, ಇದರಿಂದ ವೈಯಕ್ತಿಕ ಕಲಿಕೆ ಮತ್ತು ಸ್ವಯಂ ಅನ್ವೇಷಣೆಗೆ ಉತ್ತೇಜನ ದೊರೆಯಿತು.



ಮಧುಗಿರಿ ಪಟ್ಟಣದ ಶ್ರೀ ಶಂಕರ ಮಠದಲ್ಲಿ ಶ್ರೀ ನರಸಿಂಹಸ್ವಾಮಿಯವರ ಜಯಂತಿ ನಡಸಲಾಯಿತು. ಈ ಸಂಧರ್ಭದಲ್ಲಿ ವೇದ ಬ್ರಹ್ಮ ಶ್ರೀ ಕೆ.ನಾಗರಾಜ್ ಶಾಸ್ತ್ರೀ, ಶಂಕರ ಸೇವಾ ಸಮಿತಿ ಅಧ್ಯಕ್ಷ ಬಿ. ಸತ್ಯನಾರಾಯಣ್, ಬ್ರಾಹ್ಮಣ ಸಂಘದ ತಾಲ್ಲೂಕು ಅಧ್ಯಕ್ಷ ದತ್ತಾತ್ರೇಯ ಖಂಜಾಚಿ ಕೆ.ಲಕ್ಷ್ಮೀ ಪ್ರಸಾದ್, ನಿರ್ದೇಶಕರುಗಳಾದ ಕೆ.ನಾರಾಯಣ್, ಭೀಮೇಶ್ ಶರ್ಮಾ, ವಿಪ್ರ ಸಮುದಾಯದ ಮುಖಂಡರಾದ ನಾಗೇಶ್ವರ್ ರಾವ್, ಅಶ್ವತ್, ಕಿರಣ್, ಚೇತನ್, ಪುರಸಭೆ ಮಾಜಿ ಅಧ್ಯಕ್ಷ ಲಾಲಾಪೇಟೆ ಮಂಜುನಾಥ್, ಅನಂತಕೃಷ್ಣ ರಾಜು, ಭಾಸ್ಕರ್ ಇದ್ದರು.

# ರೈತರ ಮೇಲೆ ಪೋಲಿಸರ ಹಲ್ಲೆ ಖಂಡಿಸಿ ಪ್ರತಿಭಟನೆ

ಬೆಂಗಳೂರು

ಚಿಕ್ಕಬಳ್ಳಾಪುರದ ಜಿಲ್ಲಾ ಕಚೇರಿಯ ಬಳಿ ನ್ಯಾಯಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ರೈತರ ಮೇಲೆ ದರ್ಪ ತೋರಿಸಿ ಹಲ್ಲೆ ಮಾಡಿದ ಪೋಲಿಸರನ್ನು ಕೂಡಲೇ ಅಮಾನತ್ತು ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ್ ಬಣ) ವತಿಯಿಂದ ಪಟ್ಟಣದ ಪೊಲೀಸ್ ಠಾಣೆಯ ಮುಂಭಾಗ ಪ್ರತಿಭಟನೆ ನಡೆಸಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮುತ್ತುರಾಜ್ ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಮಯದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಹೆಚ್.ಪಿ.ರಾಮನಾಥ್, ಸುಮಾರು ದಿನಗಳಿಂದ ನಮ್ಮ ರೈತರು ಕೆಐಡಿಬಿ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದೇವೆ.

ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ ರೈತರು ಸೇರಿದಂತೆ ಜಿಲ್ಲೆಯ ರೈತರು ಹಾಗೂ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಶಾಂತಿಯುತ ಚಳುವಳಿ ಮಾಡಲಾಗುತ್ತಿದೆ. ಕಳೆದೆರಡು ದಿನಗಳ ಹಿಂದೆ ಚಿಕ್ಕಬಳ್ಳಾಪುರದಲ್ಲಿ ನಡೆಯುತ್ತಿದ್ದ ಕೆಡಿಪಿ ಸಭೆಯಲ್ಲಿ ಸಚಿವರನ್ನು ಭೇಟಿ ಮಾಡಲು ಹೋದಾಗ ಅಲ್ಲಿದ್ದ ಪೊಲೀಸರು ರೈತರ ಮೇಲೆ ದರ್ಪ ತೋರಿಸಿ ಹಲ್ಲೆ ನಡೆಸಿದ್ದಾರೆ.



ಸುಮಾರು 2823 ಎಕರೆಯಷ್ಟು ಜಮೀನನ್ನು ಕೆಐಡಿಬಿ ರವರು ಭೂ ಸ್ವಾಧೀನ ಪ್ರಕ್ರಿಯೆಯನ್ನು ನಡೆಸುತ್ತಿದ್ದಾರೆ. ಆದರೆ ನಮ್ಮ ರೈತರು ಕೃಷಿ ಯೋಗ್ಯ ಭೂಮಿಯನ್ನು ನಾವು ಕೊಡುವುದಿಲ್ಲ ಎಂದು ಧರಣಿ ಮಾಡುತ್ತಿದ್ದಾರೆ.

ಈ ಧರಣಿಯನ್ನು ಹತ್ತಿಕ್ಕಲು ಪೊಲೀಸರನ್ನು ಬಳಸಿಕೊಂಡು ರೈತರ ಮೇಲೆ ಹಲ್ಲೆ ಮಾಡಿರುವುದು ಖಂಡನಾರ್ಹ ಎಂದರು.

ಇನ್ನೂ ನಾವು ಕೃಷಿಗೆ ಯೋಗ್ಯವಲ್ಲದ ಭೂಮಿಯಲ್ಲಿ ಕೈಗಾರಿಕಾ ಪ್ರದೇಶ ಮಾಡಿದರೇ ನಾವು ವಿರೋಧ ಮಾಡಲ್ಲ. ಆದರೆ ಕೃಷಿ ಯೋಗ್ಯ ಭೂಮಿಯನ್ನು ಸ್ವಾಧೀನ ಪ್ರಕ್ರಿಯೆ ಮಾಡುತ್ತಿರುವ ಕಾರಣದಿಂದ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ.

ಪ್ರತಿಭಟನಾ ನಿರತ ರೈತರಿಗೆ ರಕ್ಷಣೆ ಕೊಡುವಲ್ಲ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿದೆ. ರಕ್ಷಣೆ ಕೊಡಲು ವಿಫಲವಾಗುವುದರ ಜೊತೆಗೆ ಪ್ರತಿಭಟನಾ ನಿರತ ರೈತರ ಮೇಲೆಯೇ ಹಲ್ಲೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ಪೊಲೀಸ್ ಠಾಣೆಗಳ ಮುಂಭಾಗ ಪ್ರತಿಭಟನೆ ನಡೆಸಿ ಮನವಿ ಪತ್ರ ಸಲ್ಲಿಸಲಾಗಿದೆ. ಕೂಡಲೇ ರೈತರ ಮೇಲೆ ಹಲ್ಲೆ ನಡೆಸಿದ ಎಲ್ಲಾ ಪೊಲೀಸರನ್ನು ಅಮಾನತ್ತು ಮಾಡಬೇಕು ಇಲ್ಲವಾದಲ್ಲಿ ಮತ್ತಷ್ಟು ಉಗ್ರ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಮಯದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಅಧ್ಯಕ್ಷ ಸೋಮಶೇಖರ್, ಉಪಾಧ್ಯಕ್ಷ ರವೀಂದ್ರರೆಡ್ಡಿ, ಗೌರವಾಧ್ಯಕ್ಷ ವೆಂಕಟರೋಣಪ್ಪ, ಮುಖಂಡರಾದ ರಾಮರೆಡ್ಡಿ, ಶ್ರೀನಿವಾಸ್, ಶಿವಪ್ಪ, ಚೌಡರೆಡ್ಡಿ, ವೆಂಕಟರೆಡ್ಡಿ, ದೇವರಾಜು ಸೇರಿದಂತೆ ಹಲವರು ಇದ್ದರು.

# ಓಂಕಾರ್ ಸ್ಪೆಷಾಲಿಟಿ ಕೆಮಿಕಲ್ಸ್ ಸ್ವಾಧೀನ ಪಾವತಿ ಪೂರ್ಣಗೊಳಿಸಿದ ಕ್ಷಿತಿಜ್ ಪಾಲಿಲೈನ್

ಬೆಂಗಳೂರು: ಪ್ಲಾಸ್ಟಿಕ್ ಹಾಳೆಗಳು, ಫಿಲ್ಮ್‌ಗಳು ಹಾಗೂ ಸಂಬಂಧಿತ ಪಾಲಿಮರ್ ಉತ್ಪನ್ನಗಳ ಪ್ರಮುಖ ತಯಾರಿಕಾ ಸಂಸ್ಥೆಯಾದ ಕ್ಷಿತಿಜ್ ಪಾಲಿಲೈನ್ ಲಿಮಿಟೆಡ್, ಬಲವಾದ ಆರ್ಥಿಕ ಸಾಧನೆ, ಕಾರ್ಯತಂತ್ರದ ವಿಸ್ತರಣಾ ಯೋಜನೆಗಳು ಮತ್ತು ಮೌಲ್ಯವರ್ಧಿತ ಸ್ವಾಧೀನಗಳ ಮೂಲಕ ಪರಿವರ್ತನಾ ವರ್ಷವನ್ನು ಸಾಧಿಸಿರುವುದಾಗಿ ಘೋಷಿಸಿದೆ.

KSHITIJ Polyline Ltd.
WORLD CLASS PRODUCTS

ಕಂಪನಿಯು 2025–26ನೇ ಸಾಲಿನಲ್ಲಿ ಎಲ್ಲಾ ಪ್ರಮುಖ ಹಣಕಾಸು ಮಾನದಂಡಗಳಲ್ಲಿ ಗಮನಾರ್ಹ ಸುಧಾರಣೆ ದಾಖಲಿಸಿದೆ. ಕಾರ್ಯಾಚರಣೆಗಳಿಂದ ಬಂದ ಆದಾಯವು 2024–25ರಲ್ಲಿ ಇದ್ದ 30.58 ಕೋಟಿ ರೂಪಾಯಿಯಿಂದ 44.75 ಕೋಟಿ ರೂಪಾಯಿಗೆ ಏರಿಕೆಯಾಗಿ, 46.3 ಶೇಕಡಾ ವೃದ್ಧಿ ಕಂಡಿದೆ. ಒಟ್ಟು ಆದಾಯವು 32.38 ಕೋಟಿ ರೂಪಾಯಿಯಿಂದ 46.92 ಕೋಟಿ ರೂಪಾಯಿಗೆ ಏರಿಕೆಯಾಗಿದೆ. ತೆರಿಗೆಗೆ ಮುಂಚಿನ ಲಾಭವು 2024–25ರಲ್ಲಿ 9.47 ಕೋಟಿ ರೂಪಾಯಿ ನಷ್ಟದಲ್ಲಿದ್ದರೆ, 2025–26ರಲ್ಲಿ 3.97 ಕೋಟಿ ರೂಪಾಯಿ ಲಾಭ ದಾಖಲಿಸಿದೆ. ತೆರಿಗೆ ನಂತರದ ಲಾಭವು ಸಹ 9.30 ಕೋಟಿ ರೂಪಾಯಿ ನಷ್ಟದಿಂದ 3.55 ಕೋಟಿ ರೂಪಾಯಿ ಲಾಭಕ್ಕೆ ತಿರುಗಿದೆ. ಸುಧಾರಿತ ಕಾರ್ಯಾಚರಣಾ ದಕ್ಷತೆ, ಉತ್ತಮ ಸಾಮರ್ಥ್ಯ ಬಳಕೆ, ಮಾರುಕಟ್ಟೆ ವ್ಯಾಪ್ತಿಯ ವಿಸ್ತರಣೆ ಮತ್ತು ಶಿಸ್ತುಬದ್ಧ ಹಣಕಾಸು ನಿರ್ವಹಣೆ ಈ ಸಾಧನೆಗೆ ಪ್ರಮುಖ ಕಾರಣಗಳಾಗಿವೆ ಎಂದು ಕಂಪನಿ ತಿಳಿಸಿದೆ. ಇದೇ ವೇಳೆ, ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿ ಮುಂಬೈ ಪೀಠದಿಂದ ಅನುಮೋದನೆ ಪಡೆದ ನಿರ್ಧಾರ ಯೋಜನೆಯ ಪ್ರಕಾರ ಓಂಕಾರ್ ಸ್ಪೆಷಾಲಿಟಿ ಕೆಮಿಕಲ್ಸ್ ಲಿಮಿಟೆಡ್ ಸ್ವಾಧೀನಕ್ಕೆ ಸಂಬಂಧಿಸಿದ ಎಲ್ಲಾ ಅಂತಿಮ ಪಾವತಿ ಬಾಧ್ಯತೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿರುವುದಾಗಿ ಕಂಪನಿ ಘೋಷಿಸಿದೆ.

# ಬೆಂಗಳೂರು ಮಳೆ: ಸಾವಿನ ಸಂಖ್ಯೆ 10ಕ್ಕೆ ಏರಿಕೆ

ಬೆಂಗಳೂರು

ಮಳೆಯ ಅವಾಂತರಕ್ಕೆ ಬೆಂಗಳೂರಿನಲ್ಲಿ ಮೃತಪಟ್ಟವರ ಸಂಖ್ಯೆ 10ಕ್ಕೆ ಏರಿಕೆಯಾಗಿದೆ. ಮನೆಯ ಮೇಲ್ಛಾವಣಿ, ಸಿಮೆಂಟ್ ಇಟ್ಟಿಗೆ ಬಿದ್ದು ವ್ಯಕ್ತಿಯೋರ್ವ ಮೃತಪಟ್ಟಿರುವ ಘಟನೆ ಚಾಮರಾಜಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ವ್ಯಕ್ತಿಯನ್ನು ಮಂಜುನಾಥ್ ಎಂದು ಗುರುತಿಸಲಾಗಿದ್ದು, ವಿಕ್ಟೋರಿಯಾ ಆಸ್ಪತ್ರೆಗೆ ಮಂಜುನಾಥ್ ಮೃತದೇಹ ಶಿಫ್ಟ್ ಮಾಡಲಾಗಿದೆ. ಮನೆಯ ಮೇಲಿನ ಶೀಟ್ ಹಾರದಂತೆ ಕಲ್ಲು ಇಡಲಾಗಿತ್ತು. ಗಾಳಿ ಮಳೆಗೆ ಶೀಟ್ ಬಿದ್ದಿದ್ದು ಈ ವೇಳೆ ಶೀಟ್ ಮೇಲಿಟ್ಟಿದ್ದ ಕಲ್ಲು ಮನೆಯಲ್ಲಿ ಮಲಗಿದ್ದ ಮಂಜುನಾಥ್ ಮೇಲೆ ಬಿದ್ದ ಪರಿಣಾಮ ಸಾವು ಸಂಭವಿಸಿದೆ.

ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದು ಸಂಭವಿಸಿದ ಘೋರ ದುರಂತದಲ್ಲಿ ಮಗು ಸೇರಿ ಒಟ್ಟು 7 ಜನ ದಾರುಣವಾಗಿ ಮೃತಪಟ್ಟಿದ್ದರು. ಬೆಂಗಳೂರಿನ ಜೆಸಿ ನಗರದ ಮೊಹಮ್ಮದ್ ಅಬ್ದುಲ್ (52), ಡಿ.ಜೆ. ಹಳ್ಳಿಯ ಫಯಾಜ್ ಅಹ್ಮದ್ (39), ಕೆ.ಜೆ.ಹಳ್ಳಿಯ ಮುಸಾವಿರ್ ಬೇಗಂ (6), ಕೇರಳದ ಎರ್ನಾಕುಲಂನ ಸ್ಮಿತಾ (47) ಹಾಗೂ ಲತಾ (57), ಕಾರ್ ಸ್ಟಿಕ್ಕರಿಂಗ್ ಕೆಲಸ ಮಾಡುತ್ತಿದ್ದ ಅಸ್ಸಾಂನ ನಸೀಮುಲ್ಲಾ (19) ಮತ್ತು ಉತ್ತರ ಪ್ರದೇಶದ ವ್ಯಾಪಾರಿ ಸಲಾವುದ್ದೀನ್ ಅನ್ಸಾರಿ (36) ಅವಘಡದಲ್ಲಿ ಪ್ರಾಣಬಿಟ್ಟಿದ್ದರು. ಗಾಳಿ ಮಳೆಯ ಕಾರಣಕ್ಕೆ ಪಾದಚಾರಿಗಳು ಮತ್ತು ಬೀದಿ ಬದಿಯ ವ್ಯಾಪಾರಿಗಳು ಬೌರಿಂಗ್ ಆಸ್ಪತ್ರೆಯ ಹಳೆಯ ಕಾಂಪೌಂಡ್ ಗೋಡೆಯ ಕೆಳಗೆ ಆಶ್ರಯ ಪಡೆದಿದ್ದರು. ಮಳೆಯ ತೀವ್ರತೆಗೆ ದುರ್ಬಲವಾಗಿದ್ದ ಗೋಡೆ ಏಕಾಏಕಿ ಕುಸಿದ ಪರಿಣಾಮ ಅವಶೇಷಗಳಡಿ ಸಿಲುಕಿದವರ ಪೈಕಿ 7 ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದರು.

# ಹೊಸ ರೀಟೇಲ್ ಫಾರ್ಮ್ಯಾಟ್ ಮಳಿಗೆ ಉದ್ಘಾಟನೆ; ಗ್ರಾಹಕ ಅನುಭವಕ್ಕೆ ಹೊಸ ಆಯಾಮ

ದಾವಣಗೆರೆ: ಭಾರತದ ಪ್ರಮುಖ ಪಾದರಕ್ಷೆ ಬ್ರಾಂಡ್‌ಗಳಲ್ಲಿ ಒಂದಾದ ಪಾರಾಗಾನ್ ಫುಟ್‌ವೇರ್ ದಾವಣಗೆರೆಯಲ್ಲಿ ತನ್ನ ನೂತನ ತಲೆಮಾರಿನ ರೀಟೇಲ್ ಮಳಿಗೆಯನ್ನು ಉದ್ಘಾಟಿಸುವ ಮೂಲಕ ಗ್ರಾಹಕ ಅನುಭವಾಧಾರಿತ ಖರೀದಿ ಸಂಸ್ಕೃತಿಗೆ ಹೊಸ ಅಧ್ಯಾಯವನ್ನು ಆರಂಭಿಸಿದೆ. ಈ ಹೊಸ ಮಳಿಗೆ ಮಾದರಿಯು ಗ್ರಾಹಕರೊಂದಿಗೆ ನೇರ ಸಂಪರ್ಕವನ್ನು ಬಲಪಡಿಸುವುದು ಹಾಗೂ ಯುವ ಪೀಳಿಗೆ ಮತ್ತು ಜೆನ್ ಜಿ ಗ್ರಾಹಕರನ್ನು ಗುರಿಯಾಗಿಸಿಕೊಂಡು ವಿನ್ಯಾಸಗೊಳಿಸಲಾಗಿದೆ.




ಕಂಪನಿಯ ಪ್ರೀಮಿಯಮೈಸೇಶನ್ ಮತ್ತು ಮಾರುಕಟ್ಟೆ ವಿಸ್ತರಣಾ ಕಾರ್ಯತಂತ್ರದ ಭಾಗವಾಗಿ ಈ ಮಳಿಗೆಗಳನ್ನು ಅಭಿವೃದ್ಧಿಪಡಿಸಲಾಗಿದ್ದು, ಪ್ರತಿಯೊಂದು ಮಳಿಗೆಯ ವ್ಯವಹಾರ ಸಾಮರ್ಥ್ಯವನ್ನು ಹೆಚ್ಚಿಸುವ ಜೊತೆಗೆ ಬ್ರಾಂಡ್ ಮೌಲ್ಯವನ್ನು ವೃದ್ಧಿಸುವುದು ಮುಖ್ಯ ಉದ್ದೇಶವಾಗಿದೆ. ಈ ಹೊಸ ಪರಿಕಲ್ಪನೆಯಡಿ ಮಳಿಗೆಗಳನ್ನು ಕೇವಲ ಮಾರಾಟ ಕೇಂದ್ರಗಳಾಗಿ ಅಲ್ಲ, ಜೀವನಶೈಲಿ ಅನುಭವ ಕೇಂದ್ರಗಳಾಗಿ ರೂಪಿಸಲಾಗಿದೆ.

ಒಂದು ಸಾವಿರ ಚದರ ಅಡಿಗೂ ಹೆಚ್ಚಿನ ವಿಸ್ತೀರ್ಣ ಹೊಂದಿರುವ ಈ ಮಳಿಗೆಯಲ್ಲಿ ಆರಾಮದಾಯಕ ಹಾಗೂ ಆಳವಾದ ಖರೀದಿ ಅನುಭವಕ್ಕೆ ಅವಕಾಶ ಕಲ್ಪಿಸಲಾಗಿದೆ. ಆಧುನಿಕ ಒಳಾಂಗಣ ವಿನ್ಯಾಸ, ಆಯ್ದ ಉತ್ಪನ್ನ ಪ್ರದರ್ಶನಗಳು ಹಾಗೂ ಯುವ ಗ್ರಾಹಕರ ರುಚಿಗೆ ತಕ್ಕ ಬಣ್ಣ ಸಂಯೋಜನೆಗಳು ಮಳಿಗೆಯ ಪ್ರಮುಖ ಆಕರ್ಷಣೆಯಾಗಿದೆ.

ಲೆದರ್ ಪಾದರಕ್ಷೆಗಳ ವಿಶೇಷ ಶ್ರೇಣಿ ಸೇರಿದಂತೆ ದೈನಂದಿನ ಬಳಕೆಯ ಶೂಗಳಿಂದ ಹಿಡಿದು ಟ್ರೆಂಡಿ ಸ್ನೀಕರ್ಸ್‌ವರೆಗೆ ವಿಭಿನ್ನ ಉತ್ಪನ್ನಗಳ ಆಯ್ಕೆಯನ್ನು ಒಂದೇ ಸೂರಿನಡಿ ಒದಗಿಸಲಾಗಿದೆ. ಗ್ರಾಹಕರ ಅನ್ವೇಷಣೆ ಮತ್ತು ಖರೀದಿ ಆಸಕ್ತಿಯನ್ನು ಹೆಚ್ಚಿಸುವ ರೀತಿಯಲ್ಲಿ ಮಳಿಗೆಯನ್ನು ವಿನ್ಯಾಸಗೊಳಿಸಲಾಗಿದೆ.

ಉದ್ಘಾಟನೆ ಸಂದರ್ಭದಲ್ಲಿ ಮಾತನಾಡಿದ ನಖಿಲ್ ಜೋಸೆಫ್, "ನಮ್ಮ ಹೊಸ ಮಳಿಗೆಗಳು ಕೇವಲ ಮಾರಾಟ ಕೇಂದ್ರಗಳಲ್ಲ. ಅವು ಯುವಜನರ ಉತ್ಸಾಹ, ವೈಶಿಷ್ಟ್ಯತೆ ಮತ್ತು ಜೀವನಶೈಲಿಯನ್ನು ಪ್ರತಿಬಿಂಬಿಸುವ ಅನುಭವದ ತಾಣಗಳು. ಗ್ರಾಹಕರಿಗೆ ವಿಶಾಲ ಆಯ್ಕೆಯನ್ನು ಒಂದೇ ಸೂರಿನಡಿ ಒದಗಿಸುವ ಮೂಲಕ ನಾವು ಬ್ರಾಂಡ್ ಅನುಭವವನ್ನು ಇನ್ನಷ್ಟು ಬಲಪಡಿಸುತ್ತಿದ್ದೇವೆ" ಎಂದು ಹೇಳಿದರು.

## ಸಬ್ ಇನ್ಸ್‌ಪೆಕ್ಟರ್ ಸಿ.ನಾರಾಯಣಸ್ವಾಮಿರಿಗೆ

# ಬೀಳ್ಕೊಡುಗೆ

ಬೆಂಗಳೂರು



ಬೆಂಗಳೂರು

ಪೊಲೀಸ್ ಇಲಾಖೆಯಲ್ಲಿ ಸುಮಾರು 36 ವರ್ಷಗಳ ಕಾಲ ಕರ್ತವ್ಯನಿಷ್ಠೆಯಿಂದ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಸಿ.ನಾರಾಯಣಸ್ವಾಮಿ ಅವರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಗೌರವಪೂರ್ಣವಾಗಿ ಬೀಳ್ಕೊಡುಗೆ ನೀಡಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಆಡಳಿತಾಧಿಕಾರಿ ಎಸ್. ಅಶೋಕ್, "ವಿಭಾಗದಲ್ಲಿ ಸೇವೆ ಸಲ್ಲಿಸಿದವರನ್ನು ಇಲಾಖೆ ಎಂದಿಗೂ ಮರೆಯುವುದಿಲ್ಲ. ತಮ್ಮ ಕರ್ತವ್ಯವನ್ನು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಿಸಿದ ಸಿ. ನಾರಾಯಣಸ್ವಾಮಿ ಅವರು ಅಧಿಕಾರಿಗಳು ಮತ್ತು ಸಾರ್ವಜನಿಕರ ವಿಶ್ವಾಸ ಗಳಿಸಿದ್ದಾರೆ. ಅವರ ಸೇವೆ ಇಲಾಖೆಗೆ ಹೆಮ್ಮೆಯಾಗಿದೆ. ನಿವೃತ್ತಿ ಜೀವನ ಸುಖಕರ ಹಾಗೂ ಆರೋಗ್ಯಕರವಾಗಿರಲಿ" ಎಂದು ಶುಭ ಹಾರೈಸಿದರು.

ಬಳಿಕ ಸನ್ಮಾನ ಸ್ವೀಕರಿಸಿ ಮಾತನಾಡಿದ ಸಿ. ನಾರಾಯಣಸ್ವಾಮಿ, "ನನ್ನ ಸೇವಾ ಅವಧಿಯಲ್ಲಿ ಯಾವುದೇ ಕಪ್ಪು ಚುಕ್ಕೆ ಬಾರದಂತೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕೆಲಸ ಮಾಡಿದ್ದೇನೆ ಎಂಬ ಆತ್ಮತೃಪ್ತಿ ಇದೆ. ಕರ್ತವ್ಯವನ್ನು ಮೊದಲಿಗೆಯಾಗಿ ಕಂಡು ಕುಟುಂಬದ ಹಲವು ಕಾರ್ಯಕ್ರಮಗಳಲ್ಲಿ ಭಾಗಿಯಾಗಲು ಸಾಧ್ಯವಾಗಲಿಲ್ಲ ಎಂಬ ನೋವು ಇದೆ. ಆದರೂ ನನಗೆ ನೀಡಿದ ಎಲ್ಲಾ ಜವಾಬ್ದಾರಿಗಳನ್ನು ನಿಷ್ಠೆಯಿಂದ ನಿರ್ವಹಿಸಿದ್ದೇನೆ. ಈ ಸೇವೆ ಅವಕಾಶ ನೀಡಿದ ಪೊಲೀಸ್ ಇಲಾಖೆಗೆ ನಾನು ಸದಾ ಋಣಿ" ಎಂದು ಹೇಳಿದರು.

ತಮ್ಮ ವೃತ್ತಿಜೀವನವನ್ನು ಚಿಕ್ಕಬಳ್ಳಾಪುರ ನಗರ ಪೊಲೀಸ್ ಠಾಣೆಯಲ್ಲಿ ಆರಂಭಿಸಿದ ಅವರು, ಬಳಿಕ ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಗ್ರಾಮಾಂತರ, ಶಿಡ್ಲಘಟ್ಟ ನಗರ, ಮಂಚೇನಹಳ್ಳಿ ಹಾಗೂ ಚಿಂತಾಮಣಿ ಗ್ರಾಮಾಂತರ ಠಾಣೆಗಳಲ್ಲಿ ಸೇವೆ ಸಲ್ಲಿಸಿ 36 ವರ್ಷಗಳಿಗೂ ಅಧಿಕ ಅವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

ಸಮಾರಂಭದಲ್ಲಿ ಅವರಿಗೆ ಶಾಲು ಹೊದಿಸಿ, ಹಣ್ಣು-ಹಂಪಲು, ಸ್ಮರಣಿಕೆ ಹಾಗೂ ಸೇವಾ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಅವರ ಪತ್ನಿ ಲಕ್ಷ್ಮಿ ನಾರಾಯಣಸ್ವಾಮಿ, ಪುತ್ರರಾದ ಮಂಜುನಾಥ್ ಮತ್ತು ಚಂದನ್ ಸೇರಿದಂತೆ ಶಾಖಾ ಅಧೀಕ್ಷಕರಾದ ಶ್ರೀನಿವಾಸರೆಡ್ಡಿ, ಮಹದೇವ್, ಆಪ್ತ ಸಹಾಯಕಿ ಶಹತಾಜ್ ಹಾಗೂ ಸಿಬ್ಬಂದಿ ರವಿಶಂಕರ್ ನಾಯಕ್ ಮತ್ತು ಇತರರು ಉಪಸ್ಥಿತರಿದ್ದರು.

# ಪಕ್ಷದ ಸಂಘಟನೆಗೆ ಶ್ರಮಿಸಲು ಜಿಲ್ಲಾಧ್ಯಕ್ಷ ಹೆಚ್.ನಿಂಗಪ್ಪ ಮನವಿ

ಬೆಂಗಳೂರು

ನಗರಸಭೆ ಮಾಜಿ ಅಧ್ಯಕ್ಷ ಟಿ.ಹೆಚ್. ಜಯರಾಮ್ ಅವರು ತುಮಕೂರು ನಗರ ಜೆಡಿಎಸ್ ಅಧ್ಯಕ್ಷರಾಗಿ ನೂತನವಾಗಿ ನೇಮಕವಾದರು.

ಗುರುವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಹೆಚ್. ನಿಂಗಪ್ಪ ಅವರು ಟಿ.ಹೆಚ್. ಜಯರಾಮ್ ಅವರನ್ನು ನಗರ ಅಧ್ಯಕ್ಷರನ್ನಾಗಿ ನೇಮಕ ಮಾಡಿ, ನೇಮಕಾತಿ ಪತ್ರ ವಿತರಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಹೆಚ್. ನಿಂಗಪ್ಪ, ವಿವಿಧ ಘಟಕಗಳ ಪದಾಧಿಕಾರಿಗಳನ್ನು ಮುಂದಿನ ದಿನಗಳಲ್ಲಿ ನೇಮಕ ಮಾಡಲಾಗುವುದು. ಪಕ್ಷದಲ್ಲಿ ಹಲವಾರು ವರ್ಷಗಳಿಂದ ದುಡಿದ ಬಹಳಷ್ಟು ಹಿರಿಯರಿದ್ದಾರೆ. ಎಲ್ಲರಿಗೂ ಅಧಿಕಾರ ನೀಡಲು ಅವಕಾಶವಾಗುವುದಿಲ್ಲ. ಆದರೆ ನೇಮಕವಾದ ಪದಾಧಿಕಾರಿಗಳೊಂದಿಗೆ ಉಳಿದವರು ಸಹಕರಿಸಿ ಪಕ್ಷ ಸಂಘಟನೆಗೆ ಕಾಳಜಿವಹಿಸಬೇಕು ಎಂದು ಮನವಿ ಮಾಡಿದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಜೆಡಿಎಸ್ ಅನ್ನು ಬಲಪಡಿಸಿ ಅಧಿಕಾರ ಹಿಡಿಯಲು ಎಲ್ಲಾ ಮುಖಂಡರು, ಕಾರ್ಯಕರ್ತರು ಶ್ರಮಿಸಬೇಕು. ಮುಂದಿನ ವಿಧಾನಭಾ ಚುನಾವಣೆಯಲ್ಲಿ ಮೈತ್ರಿ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರಬೇಕು. ಹೆಚ್.ಡಿ. ಕುಮಾರಸ್ವಾಮಿಯವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬೇಕು ಎಂಬ ಕಾರ್ಯಕರ್ತರ ಅಪೇಕ್ಷೆ ಈಡೇರಲಿ ಎಂದು ಹೇಳಿದರು.

ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಟಿ.ಆರ್. ನಾಗರಾಜು, ಮುಖಂಡರಾದ ಟಿ.ಎಲ್. ಕುಂಭಯ್ಯ, ಎಸ್. ಪುಟ್ಟೀರಪ್ಪ, ರಾಜ್ಯ ಹಿರಿಯ ಉಪಾಧ್ಯಕ್ಷ ಗಂಗಣ್ಣ, ರಾಜ್ಯ ಎಸ್ಸಿ ಘಟಕ ಕಾರ್ಯದರ್ಶಿ ಸೋಲಾರ್ ಕೃಷ್ಣಮೂರ್ತಿ, ನಿಕಟಪೂರ್ವ ನಗರ ಅಧ್ಯಕ್ಷ ವಿಜಯ್‌ಗೌಡ, ನಗರಸಭೆ ಮಾಜಿ ಉಪಾಧ್ಯಕ್ಷ ಶ್ರೀನಿವಾಸ್‌ಪ್ರಸಾದ್, ಮಾಜಿ ಸದಸ್ಯರಾದ ಟಿ.ಜಿ. ನರಸಿಂಹರಾಜು, ಟಿ.ಎ. ಬಾಲಕೃಷ್ಣ, ಮೋಹನ್‌ಕುಮಾರ್, ಶ್ರೀನಿವಾಸ್, ಮುಖಂಡರಾದ ಯೋಗಾನಂದಕುಮಾರ್,

# ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಣೆ

ಕನಕಪುರ

ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿಯ ವತಿಯಿಂದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮದಿನವನ್ನು ನಗರ ತಾಲೂಕು ಕಚೇರಿ ಸಭಾಂಗಣದಲ್ಲಿ ಆಚರಿಸಲಾಯಿತು.

ಸಮಾರಂಭದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಕನಕಪುರ ಧರ್ಮ ದೀವಿಗೆ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನ್, ದೇಶದಲ್ಲಿದ್ದ ಸುಮಾರು 694 ಸಂಸ್ಥಾನಗಳ ಪೈಕಿ ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಳ್ವಿಕೆಯ ಕಾಲವನ್ನು ಕರ್ನಾಟಕದ ಸುವರ್ಣ ಯುಗವೆಂದು ಪರಿಗಣಿಸಲಾಗಿದೆ ಎಂದು ಹೇಳಿದರು.

ಪಾಶ್ಚಾತ್ಯ ರಾಷ್ಟ್ರಗಳ ಲೇಖಕರು ಮತ್ತು ಇತಿಹಾಸಕಾರರು ಸಹ ಪ್ರಜಾಬ್ಯುದಯಕ್ಕಾಗಿ ತನ್ನ ರಾಜಸಿಂಹಾಸನವನ್ನೇ ಮುಡುಪಾಗಿಟ್ಟು ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿದ ಆಡಳಿತಗಾರರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಮುಖರು ಎಂದು ದಾಖಲಿಸಿದ್ದಾರೆ ಎಂದು ತಿಳಿಸಿದರು.

ಕರ್ನಾಟಕದ ಇತಿಹಾಸಕಾರರು ನಾಲ್ವಡಿ ಅವರ ಮಹೋನ್ನತ ಸಾಧನೆಗಳನ್ನು ಸಮರ್ಪಕವಾಗಿ ದಾಖಲಿಸದೇ ಚಾರಿತ್ರಿಕ ಅನ್ಯಾಯ ಮಾಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ಕೃಷ್ಣರಾಜಸಾಗರ, ಮಾರ್ಕೋನಹಳ್ಳಿ, ತಿಪ್ಪಗೊಂಡನಹಳ್ಳಿ, ಮಾರಿಕಣಿವೆ, ಕಣ್ವ ಜಲಾಶಯ ಸೇರಿದಂತೆ ಸಾವಿರಾರು ಕೆರೆ–ಕಟ್ಟೆಗಳನ್ನು ನಿರ್ಮಿಸಿ ರೈತರ ಬದುಕಿಗೆ ಬಲ ತುಂಬಿದ ಮಹಾನ್ ದಾರ್ಶನಿಕ ಆಡಳಿತಗಾರ ನಾಲ್ವಡಿ ಎಂದು ಬಣ್ಣಿಸಿದರು.

ಕೋಲಾರ ಹಾಗೂ ಚಿಂತಾಮಣಿ ಭಾಗಗಳಲ್ಲಿ ಸಾವಿರಾರು ಕೆರೆಗಳನ್ನು ನಿರ್ಮಿಸುವ ಮೂಲಕ ಬರಡು ಭೂಮಿಯನ್ನು ಹಸಿರು ವಲಯವನ್ನಾಗಿ ರೂಪಿಸಿದ ಕೀರ್ತಿ ಅವರದ್ದು ಎಂದರು. ಮೈಸೂರು ಮತ್ತು ಬೆಂಗಳೂರಿನಲ್ಲಿ ಕೆಆರ್ ಆಸ್ಪತ್ರೆ, ವಾಣಿವಿಲಾಸ್ ಆಸ್ಪತ್ರೆ, ವಿಕ್ಟೋರಿಯಾ ಆಸ್ಪತ್ರೆ, ನಿಮಾನ್ಸ್, ಮಿಂಟೋ ಕಣ್ಣಾಸ್ಪತ್ರೆ ಸೇರಿದಂತೆ ಅನೇಕ ಆಸ್ಪತ್ರೆಗಳನ್ನು ಸ್ಥಾಪಿಸಿ ಜನಸೇವೆಗೆ ಮುನ್ನುಡಿ ಬರೆದರು ಎಂದು ಹೇಳಿದರು.

ಮೈಸೂರು ವಿಶ್ವವಿದ್ಯಾಲಯ, ಹೆಬ್ಬಾಳ ಕೃಷಿ ವಿಶ್ವವಿದ್ಯಾಲಯ, ಎಚ್‌ಎಎಲ್, ಭದ್ರಾವತಿ ಕಾಗದ ಮತ್ತು ಕಬ್ಬಿಣ ಕಾರ್ಖಾನೆ, ಕೆಎಸ್‌ಐಸಿ, ಮೈಸೂರು ಸ್ಯಾಂಡಲ್ ಸಾಬೂನು ಕಾರ್ಖಾನೆ ಮೊದಲಾದ ಕೈಗಾರಿಕೆಗಳು ಹಾಗೂ ಜಲವಿದ್ಯುತ್ ಯೋಜನೆಗಳ ಮೂಲಕ ನಾಡಿನ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಶ್ಲಾಘಿಸಿದರು.

ನಗರದ ಎಕ್ಸ್ ಮುನ್ಸಿಪಲ್ ಕಾಲೇಜಿನ ಪ್ರಾಂಶುಪಾಲ ದೊಡ್ಡಬೋರೇಗೌಡ ಮಾತನಾಡಿ, ಪ್ರಜೆಗಳ ಏಳಿಗೆಗಾಗಿ ದುಡಿದ ನಿಜವಾದ ಪ್ರಜಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಎಂದು ಅಭಿಪ್ರಾಯಪಟ್ಟರು.



ವೈ.ಎನ್.ಹೊಸಕೋಟೆ: ಕೋಟಗುಡ್ಡ ಗ್ರಾಮದ ಸಹನಾ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಮಕ್ಕಳಿಗೆ ಚಿತ್ರಕಲೆ, ಪ್ರಬಂಧ ಸ್ಪರ್ಧೆ, ಲೀಫ್ ಆರ್ಟ್ ಮತ್ತು ಭಿತ್ತಿ ಪತ್ರ ರಚನೆ ಮುಂತಾದ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಮುಖ್ಯಶಿಕ್ಷಕರಾದ ನರಸಿಂಹಪ್ಪ ಎಸ್, ಶಿಕ್ಷಕರಾದ ಜಿನೀಶ್ ಎಂ,ಲೀಲಾವತಿ ಸಿ.ನಾಗೇಂದ್ರ, ವಿಜ್ಞಾನ ಶಿಕ್ಷಕರಾದ ಮರಿಯಾ, ಜೋಬಿನ್ ಮತ್ತು ಹೇಮಲತಾ ರವರು ಇದ್ದಾರೆ.

# ಪರಿಸರ ದಿನದಂದೇ ಮರಗಳಿಗೆ ಕೊಡಲಿ..!

ಕನಕಪುರ

ವಿಶ್ವ ಪರಿಸರ ದಿನಾಚರಣೆಯಂದು ಒಂದು ಕಡೆ "ಪ್ರಕೃತಿ ಉಳಿಸಿ, ಪರಿಸರ ಬೆಳೆಸಿ" ಎಂಬ ಘೋಷಣೆಗಳು ಮೊಳಗುತ್ತಿದ್ದರೆ, ಮತ್ತೊಂದು ಕಡೆ ಮರಗಳ ಮಾರಣಹೋಮ ನಡೆಯುತ್ತಿರುವುದು ಪರಿಸರ ಪ್ರೇಮಿಗಳ ಆಕ್ರೋಶಕ್ಕೆ ಕಾರಣವಾಗಿದೆ.

ಕನಕಪುರ ಪಟ್ಟಣದ ಅಂಚೆ ಇಲಾಖೆಯ ಆವರಣದಲ್ಲಿ ಇದ್ದ ಬೇವಿನ ಮರವನ್ನು ಪರಿಸರ ದಿನಾಚರಣೆಯಂದೇ ತೆರವುಗೊಳಿಸಿರುವ ಘಟನೆ ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ವಿಶೇಷವೆಂದರೆ, ಅಂಚೆ ಕಚೇರಿಯ ಪಕ್ಕದಲ್ಲೇ ಅರಣ್ಯ ಇಲಾಖೆ ಕಚೇರಿ ಇದ್ದರೂ ಅಧಿಕಾರಿಗಳು ಮೌನ ವಹಿಸಿರುವುದು ಪರಿಸರ ರಕ್ಷಕರೇ ಭಕ್ಷಕರಾದಂತಾಗಿದೆ ಎಂಬ ಟೀಕೆ ಕೇಳಿಬಂದಿದೆ.

ಸುಮಾರು ಹದಿನೈದು ವರ್ಷಗಳ ಹಿಂದೆ ನಗರದ ಮುಖ್ಯರಸ್ತೆಯ ಎರಡೂ ಬದಿಗಳಲ್ಲಿ ಹಸಿರಾಗಿ ಬೆಳೆದಿದ್ದ ಮರಗಳನ್ನು ರಸ್ತೆ ವಿಸ್ತರಣೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ ತೆರವುಗೊಳಿಸಲಾಗಿತ್ತು. ಆಗಿನಿಂದಲೇ ನಗರದಲ್ಲಿ ಉಷ್ಣಾಂಶ ಹೆಚ್ಚಳವಾಗಿದ್ದು, ಬೇಸಿಗೆ ಸಮಯದಲ್ಲಿ ಸಾರ್ವಜನಿಕರು



ರಸ್ತೆಯಲ್ಲಿ ಸಂಚರಿಸಲು ತೀವ್ರ ಬಿಸಿಲಿನ ತಾಪ ಅನುಭವಿಸುವಂತಾಗಿದೆ ಎಂದು ನಾಗರಿಕರು ಬೇಸರ ವ್ಯಕ್ತಪಡಿಸಿದ್ದಾರೆ.

ಇದೀಗ ಉಳಿದಿರುವ ಮರಗಳನ್ನೂ ಅಭಿವೃದ್ಧಿಯ ಹೆಸರಿನಲ್ಲಿ ತೆರವುಗೊಳಿಸಲಾಗುತ್ತಿರುವುದನ್ನ ಪರಿಸರ ಪ್ರೇಮಿಗಳು ತೀವ್ರವಾಗಿ ಖಂಡಿಸಿದ್ದಾರೆ. ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಬೇಕಾದ ದಿನದಲ್ಲೇ ಮರ ಕಡಿಯುವ ಕಾರ್ಯ ನಡೆದಿರುವುದು ವಿಪರ್ಯಾಸ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಅಂಚೆ ಕಚೇರಿ ಆವರಣದಲ್ಲಿದ್ದ ಮರವನ್ನು ತೆರವುಗೊಳಿಸಿದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ನಗರದಲ್ಲಿ ಉಳಿದಿರುವ ಮರಗಳನ್ನು ಸಂರಕ್ಷಿಸಲು ಅರಣ್ಯ ಇಲಾಖೆ ತಕ್ಷಣ ಕ್ರಮವಹಿಸಬೇಕು ಎಂದು ಪರಿಸರ ಹೋರಾಟಗಾರರು ಆಗ್ರಹಿಸಿದ್ದಾರೆ.

# ರಾಮಲಿಂಗಾರೆಡ್ಡಿ ಅವರಿಗೆ ಸೂಕ್ತ ಸ್ಥಾನಮಾನ ನೀಡಲು ಆಗ್ರಹ



ಬಂಗಾರಪೇಟೆ

ಎಂಟು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಹಿರಿಯ ರಾಜಕಾರಣಿ ಹಾಗೂ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಅವರ ಅನುಭವ ಮತ್ತು ಹಿರಿಯತೆಗೆ ತಕ್ಕ ಮಹತ್ವದ ಸಚಿವ ಸ್ಥಾನ ನೀಡದಿರುವುದು ಬೇಸರದ ಸಂಗತಿಯಾಗಿದೆ ಎಂದು ಬಂಗಾರಪೇಟೆ ರೆಡ್ಡಿ ಜನಸಂಘದ ಮುಖಂಡ ಹಾಗೂ ಮಾಜಿ ಪೌರಾಧ್ಯಕ್ಷ ಕೆ. ಚಂದ್ರಾರೆಡ್ಡಿ ತಿಳಿಸಿದ್ದಾರೆ.

ತಮ್ಮ ಖಾಸಗಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವು ದಶಕಗಳಿಂದ ಪಕ್ಷದ ಸಂಘಟನೆ ಮತ್ತು ಸರ್ಕಾರದಲ್ಲಿ ಮಹತ್ವದ ಕೊಡುಗೆ ನೀಡಿರುವ ರಾಮಲಿಂಗಾರೆಡ್ಡಿ ಅವರು ಪಕ್ಷದ ನಿಷ್ಠಾವಂತ ನಾಯಕರಾಗಿದ್ದಾರೆ. ಇಂತಹ ಹಿರಿಯ ನಾಯಕನಿಗೆ ಸೂಕ್ತ ಸ್ಥಾನಮಾನ ದೊರೆಯದಿರುವುದು ಅವರ ಬೆಂಬಲಿಗರು ಹಾಗೂ ಸಮುದಾಯದ ಜನರಲ್ಲಿ ಅಸಮಾಧಾನ ಉಂಟುಮಾಡಿದೆ ಎಂದು ಹೇಳಿದರು.

ರಾಜಕೀಯ ಅನುಭವ, ಆಡಳಿತಾತ್ಮಕ ಸಾಮರ್ಥ್ಯ ಮತ್ತು ಜನಸೇವೆಯನ್ನು ಪರಿಗಣಿಸಿ ರಾಮಲಿಂಗಾರೆಡ್ಡಿ ಅವರಿಗೆ ಗೌರವಯುತ ಹಾಗೂ ಜವಾಬ್ದಾರಿಯುತ ಹುದ್ದೆ ನೀಡಬೇಕಿತ್ತು. ಆದರೆ ಅವರಿಗೆ ನಿರೀಕ್ಷಿತ ಸ್ಥಾನಮಾನ ದೊರೆಯದಿರುವುದು ಸಮುದಾಯದ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ಅಭಿಪ್ರಾಯಪಟ್ಟರು.

ಪಕ್ಷದ ಹೈಕಮಾಂಡ್ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಹಿರಿಯ ನಾಯಕ ರಾಮಲಿಂಗಾರೆಡ್ಡಿ ಅವರಿಗೆ ಅವರ ಅನುಭವಕ್ಕೆ ತಕ್ಕಂತಹ ಸೂಕ್ತ ಸಚಿವ ಸ್ಥಾನ ಅಥವಾ ಮಹತ್ವದ ಜವಾಬ್ದಾರಿ ನೀಡುವ ಮೂಲಕ ಉಂಟಾಗಿರುವ ಅಸಮಾಧಾನವನ್ನು ನಿವಾರಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾಜಿ ಪುರಸಭೆ ಸದಸ್ಯ ವಸಂತ್ ಉಪಸ್ಥಿತರಿದ್ದರು.

# ಪರಮೇಶ್ವರ್ ಅಭಿನಂದನೆ ಕಾರ್ಯಕ್ರಮಕ್ಕೆ ಸಜ್ಜು

ತುಮಕೂರು

ರಾಜ್ಯದ ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರು ಆಗಿರುವ ಡಾ.ಜಿ.ಪರಮೇಶ್ವರ್, ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಇದೇ ಮೊದಲ ಬಾರಿಗೆ ಜೂನ್ 06ರ ಶನಿವಾರ ತುಮಕೂರು ನಗರಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅವರ ಸ್ವಾಗತಕ್ಕಾಗಿ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಚಂದ್ರಶೇಖರಗೌಡ ಅವರ ಅಧ್ಯಕ್ಷತೆಯಲ್ಲಿ ಪೂರ್ವ ಭಾವಿ ಸಭೆಯನ್ನು ಆಯೋಜಿಸಲಾಗಿತ್ತು.

ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಚಂದ್ರಶೇಖರ್‌ಗೌಡ, ನಮ್ಮ ಜಿಲ್ಲೆಗೆ ಮುಖ್ಯಮಂತ್ರಿ ಸ್ಥಾನ ಸಿಗಬೇಕಾಗಿತ್ತು.ಸ್ವಲ್ಪದರಲ್ಲಿಯೇ ಕೈತಪ್ಪಿ ಉಪಮುಖ್ಯಮಂತ್ರಿ ಸ್ಥಾನ ಸಿಕ್ಕಿದೆ.

ಸಜ್ಜನರು, ಕಾಂಗ್ರೆಸ್ ಪಕ್ಷದ ಕಟ್ಟಾಳಾಗಿರುವ ಡಾ.ಜಿ.ಪರಮೇಶ್ವರ್ ಅವರು ಜೂನ್.06ರ ಬೆಳಗ್ಗೆ 9:30ಕ್ಕೆ ಮಾಜಿ ಸಹಕಾರ ಸಚಿವರು, ಮಧುಗಿರಿ ಕ್ಷೇತ್ರದ ಶಾಸಕರು,ಡಿಸಿಸಿ ಬ್ಯಾಂಕ್ ಅಧ್ಯಕ್ಷರು ಆಗಿರುವ ಕೆ.ಎನ್. ರಾಜಣ್ಣ ಅವರ ಮನೆಗೆ ಆಗಮಿಸಲಿದೆ.

ಉಪಹಾರದ ನಂತರ ಅವರು ಬಟವಾಡಿಯ ಅಂಜನೇಯಸ್ವಾಮಿ ದೇವಾಲಯದ ಬಳಿ ಆಗಮಿಸಲಿದ್ದು,ಅಲ್ಲಿ ಅಂಜನೇಯಸ್ವಾಮಿಗೆ ಪೂಜೆ ಸಲ್ಲಿಸಿ, ತದನಂತರ ತೆರದ ಜೀಪಿನಲ್ಲಿ ತಮಟೆ,ಕಹಳೆಯೊಂದಿಗೆ,ಯುವ ಕಾಂಗ್ರೆಸ್ ಬೈಕ್ ರ‍್ಯಾಲಿಯ ಮೂಲಕ ಮರವಣಿಗೆಯಲ್ಲಿ ಟೌನ್‌ಹಾಲ್ ಮುಂಭಾಗದಲ್ಲಿರುವ ಡಾ.ಬಿ.ಆರ್.



ಅಂಬೇಡ್ಕರ್ ಪ್ರತಿಮೆಯ ಬಳಿಗೆ ಕರೆ ತರಲಾಗುವುದು. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ,ಅಲ್ಲಿಯೇ ಸಿದ್ದಪಡಿಸಿರುವ ವೇದಿಕೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಸಾರ್ವಜನಿಕರನ್ನು ಉದ್ದೇಶಿಸಿ, ಡಾ.ಜಿ.ಪರಮೇಶ್ವರ್, ಶಾಸಕರಾದ ಕೆ.ಎನ್.ರಾಜಣ್ಣ, ಎಂ.ಎಲ್.ಸಿ. ಆರ್.ರಾಜೇಂದ್ರ, ಎಲ್ಲಾ ಶಾಸಕರುಗಳು, ಮಾಜಿ ಸಂಸದ ಎಸ್.ಪಿ.ಮುದ್ದಹನುಮೇಗೌಡ ಅವರುಗಳು ಮಾತನಾಡಲಿದ್ದಾರೆ ಎಂದರು.

ಉಪಮುಖ್ಯಮಂತ್ರಿಯಾಗಿ ಮೊದಲ ಬಾರಿಗೆ ತವರು ಜಿಲ್ಲೆಗೆ ಆಗಮಿಸುತ್ತಿರುವ ಅವರನ್ನು ಅದ್ದೂರಿಯಾಗಿ ಸ್ವಾಗತಿಸುವ ನಿಟ್ಟಿನಲ್ಲಿ ನಾವೆಲ್ಲರೂ ಕೆಲಸ ಮಾಡಬೇಕಾಗಿದೆ. ತುಮಕೂರು ನಗರದಲ್ಲಿಯೇ ಹಬ್ಬದ ವಾತಾವರಣ ನಿರ್ಮಾಣ ವಾಗಬೇಕಾಗಿದೆ.

ಮೆರವಣಿಗೆ ಸಾಗುವ ದಾರಿಯಲ್ಲಿ ಫ್ಲೆಕ್ಸ್, ಬ್ಯಾನರ್‌ಗಳನ್ನು ಕಟ್ಟಲು ಈಗಾಗಲೇ ನಗರಪಾಲಿಕೆಯಿಂದ ಅನುಮತಿ ಪಡೆಯಲಾಗಿದೆ.ಅಲ್ಲದೆ ಜಿಲ್ಲಾಧಿಕಾರಿಗಳು,ಜಿಲ್ಲಾ ಪಂಚಾಯಿತಿ ಸಿಇಓ ಹಾಗೂ ಎಸ್ಪಿ ಅವರುಗಳಿಗೆ ಮಾಹಿತಿ ನೀಡಲಾಗಿದೆ. ಕಾರ್ಯಕರ್ತರು ಹುಮ್ಮಸ್ಸಿನಿಂದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕೋರಿದರು. ತುಮಕೂರು ಜಿಲ್ಲೆಯ 11 ವಿಧಾನಸಭಾ ಕ್ಷೇತ್ರದ ಪಕ್ಷದ ಬ್ಲಾಕ್‌ಅಧ್ಯಕ್ಷರುಗಳು, ಪದಾಧಿಕಾರಿಗಳು, ಎಲ್ಲಾ ಮಂಚೂಣಿ ಘಟಕಗಳ ಮುಖಂಡರು, ಬೂತ್ ಮಟ್ಟದ ಮುಖಂಡರುಗಳು ತಾವುಗಳು ಕಾರ್ಯಕ್ರಮವನ್ನು ಅದ್ದೂರಿ ಮತ್ತು ಅರ್ಥಪೂರ್ಣ ವಾಗಿ ಸಂಘಟಿಸುವ ನಿಟ್ಟಿನಲ್ಲಿ ಸಲಹೆ,ಸೂಚನೆಗಳನ್ನು ನೀಡುವುದರ ಜೊತೆಗೆ, ಕಾರ್ಯಕ್ರಮಕ್ಕೆ ತಮ್ಮ ಜೊತೆಗೆ,ಹೆಚ್ಚಿನ ಕಾರ್ಯಕರ್ತರನ್ನು ಕರೆ ತಂದು, ಕಾರ್ಯಕ್ರಮದ ಸ್ಥಳದಲ್ಲಿ ಹಾಗೂ ಮೆರವಣಿಗೆ ಸಾಗುವ ದಾರಿಯ ಇಕ್ಕೆಲಗಳಲ್ಲಿಯೂ ನಿಂತು ಕಾಂಗ್ರೆಸ್ ಪಕ್ಷದ ಬಾವುಟ ಹಾಗೂ ಹೂ ನೀಡುವ ಮೂಲಕ ಸ್ವಾಗತಿಸಿ,ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಚಂದ್ರಶೇಖರಗೌಡ ಮನವಿ ಮಾಡಿದರು.

ಮಾಜಿ ಶಾಸಕ ಡಾ.ಎಸ್.ಷಫಿಅಹಮದ ಮಾತನಾಡಿ, ಡಾ.ಜಿ.ಪರಮೇಶ್ವರ್ ಮುಖ್ಯಮಂತ್ರಿಯಾಗಬೇಕಾಗಿತ್ತು. ಮುಂದೆ ಅವರಿಗೆ ಅವಕಾಶವಿದೆ.ಹಾಗಾಗಿ ಉಪಮುಖ್ಯಮಂತ್ರಿಯಾಗಿರುವ ಅವರನ್ನು ನಾವೆಲ್ಲರೂ ಸಂಭ್ರಮದಿಂದ ಸ್ವಾಗತಿಸಲು ಅಗತ್ಯವಿರುವ ಎಲ್ಲಾ ರೀತಿಯ ಸಹಕಾರವನ್ನು ನೀಡುತ್ತೇವೆ. ಹಾಗೆಯೇ ತುಮಕೂರು ನಗರದಿಂದ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಆಗಮಿಸುವಂತೆ ಮಾಡುವುದಾಗಿ



ಮಾಜಿ ಸಚಿವ, ಶಾಸಕ ಜಮೀರ್ ಅಹ್ಮದ್ ಖಾನ್ ಅವರಿಗೆ ನೂತನ ಸರ್ಕಾರದಲ್ಲಿ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಶುಕ್ರವಾರ ರಾಜ್ಯದ ಹಲವೆಡೆ ಪ್ರತಿಭಟನೆಗಳು ನಡೆದವು. ಧಾರವಾಡದಲ್ಲೂ ಸ್ಥಳೀಯ ಕಾಂಗ್ರೆಸ್ ಮುಖಂಡರ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು.

# ಕಾರಹಳ್ಳಿ ಕಾಲುವೆ ಒತ್ತುವರಿ ವಿವಾದ: ಮರು ಸರ್ವೆಗೆ ಒತ್ತಾಯ

ಬಂಗಾರಪೇಟೆ

ಕಾರಹಳ್ಳಿ ಗ್ರಾಮದ ಸರ್ಕಾರಿ ಕಾಲುವೆ ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಭೂಮಾಪಕರು ನಡೆಸಿರುವ ಸರ್ವೆ ಕಾರ್ಯದಲ್ಲಿ ಗಂಭೀರ ಲೋಪಗಳು ನಡೆದಿವೆ ಎಂದು ಆರೋಪಿಸಿ ರೈತ ರಘುಪತಿ ಗೌಡ ಅವರು ತಹಸೀಲ್ದಾರರಿಗೆ ದೂರು ಸಲ್ಲಿಸಿ ಮರು ಸರ್ವೆ ನಡೆಸುವಂತೆ ಒತ್ತಾಯಿಸಿದ್ದಾರೆ.

ಲೋಕಾಯುಕ್ತರ ಆದೇಶದ ಮೇರೆಗೆ ಭೂಮಾಪಕರು ಕಾಲುವೆ ಹಾದುಹೋಗುವ ವಿವಿಧ ಸರ್ವೆ ನಂಬರುಗಳ ಜಮೀನುಗಳನ್ನು ಸರ್ವೆ ಮಾಡಬೇಕಾಗಿದ್ದರೂ, ಎಲ್ಲ ಜಮೀನುಗಳನ್ನು ಅಳತೆ ಮಾಡದೆ ಕೆಲವೇ ಸರ್ವೆ ನಂಬರುಗಳನ್ನು ಪರಿಶೀಲಿಸಿ ಅಪೂರ್ಣ ವರದಿ ಸಲ್ಲಿಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಅರ್ಜಿದಾರರ ಪ್ರಕಾರ, ಯಾವುದೇ ಜಮೀನಿನ ಗಡಿ ಮತ್ತು ಗುರುತುಕಲ್ಲುಗಳನ್ನು



ನಿಖರವಾಗಿ ಗುರುತಿಸಲು ಹಾಜುಬಾಜು ಸರ್ವೆ ನಂಬರುಗಳನ್ನು ಸಹ ಜಂಟಿಯಾಗಿ ಅಳತೆ ಮಾಡುವುದು ಕಡ್ಡಾಯ. ಆದರೆ ಬಂಗಾರಪೇಟೆ ಗ್ರಾಮದ ಸರ್ವೆ ನಂ.5 ಸೇರಿದಂತೆ ಪ್ರಮುಖ ಜಮೀನುಗಳನ್ನು ಸರ್ವೆ ಮಾಡದೇ, ಸಂಬಂಧಪಟ್ಟ ಭೂಮಾಲೀಕರಿಗೆ ಪೂರ್ವ ನೋಟಿಸ್ ನೀಡದೇ ಏಕಪಕ್ಷೀಯವಾಗಿ ವರದಿ ಸಲ್ಲಿಸಲಾಗಿದೆ ಎಂದು ಆರೋಪಿಸಲಾಗಿದೆ.

ಕಾರಹಳ್ಳಿ ಗ್ರಾಮದ ಸರ್ವೆ ನಂ.187/1, 187/2ಬಿ ಹಾಗೂ ಹೊಸ ಸರ್ವೆ ನಂ.245 (ಹಳೆಯ ಸರ್ವೆ ನಂ.197) ಜಮೀನುಗಳಲ್ಲಿ ತಮ್ಮ ಕುಟುಂಬದ ಹಿಡುವಳಿ ಜಮೀನುಗಳಿದ್ದು, ಸರ್ವೆ ನಂ.245ರಲ್ಲಿ ಇರುವ 14 ಗುಂಟೆ ಖರಾಬು ಜಾಗವೇ ಸರ್ಕಾರಿ ಕಾಲುವೆಗೆ ಸಂಬಂಧಪಟ್ಟಿದೆ.

ಈ ಪ್ರದೇಶದಲ್ಲಿ ಯಾವುದೇ ಅತಿಕ್ರಮಣ ಅಥವಾ ಅನಧಿಕೃತ ಕಟ್ಟಡ ನಿರ್ಮಾಣ ನಡೆದಿಲ್ಲ. ಆದಾಗ್ಯೂ ಮೂಲ ಟಿಪ್ಪಣಿ, ಆಕಾರಬಂದ್ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸದೆ ಭೂಮಾಪಕರು ಒತ್ತುವರಿ ಎಂದು ವರದಿಯಲ್ಲಿ ನಮೂದಿಸಿದ್ದಾರೆ ಎಂದು ರಘುಪತಿ ಗೌಡ ಆರೋಪಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಈಗಾಗಲೇ ಸಲ್ಲಿಸಲಾಗಿರುವ ಸರ್ವೆ ವರದಿ ಹಾಗೂ ನಕ್ಷೆಯನ್ನು ರದ್ದುಪಡಿಸಿ, ಎಲ್ಲಾ ಖಾತೆದಾರರಿಗೆ ಮುಂಚಿತ ನೋಟಿಸ್ ನೀಡಿ, ಮೂಲ ದಾಖಲೆಗಳ ಆಧಾರದ ಮೇಲೆ ಜಂಟಿ ಮರು ಸರ್ವೆ ನಡೆಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಸರ್ವೆ ನಂ.245ರಲ್ಲಿರುವ ಸರ್ಕಾರಿ ಜಾಗದಲ್ಲಿ ನಿಜವಾಗಿಯೂ ಯಾವುದೇ ಅತಿಕ್ರಮಣ ಇದೆಯೇ ಎಂಬುದನ್ನು ಸಮಗ್ರವಾಗಿ ಪರಿಶೀಲಿಸಿ ನಂತರವೇ ಮುಂದಿನ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಇದೇ ವೇಳೆ, ಈ ವಿವಾದಕ್ಕೆ ಸಂಬಂಧಿಸಿದಂತೆ ಆನಂದ ರಾಜ್ ಎಂ. (73) ಹಾಗೂ ಎ. ಹೆನ್ರಿ ಮೈಕಲ್ (39) ಅವರು ಕೋಲಾರ ಜಿಲ್ಲಾ ನ್ಯಾಯಾಲಯದಲ್ಲಿ ದಾವೆ ದಾಖಲಿಸಿದ್ದಾರೆ. ಪ್ರಕರಣದಲ್ಲಿ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ, ಕೋಲಾರ ಜಿಲ್ಲಾಧಿಕಾರಿ, ಕೋಲಾರ ಸಹಾಯಕ ಆಯುಕ್ತರು, ಬಂಗಾರಪೇಟೆ ತಹಸೀಲ್ದಾರರು ಹಾಗೂ ಬಂಗಾರಪೇಟೆ ಎಡಿಎಲ್‌ಆರ್ ಅವರನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದ್ದು, ದೂರುದಾರ ಪ್ರೇಮ್ ಕುಮಾರ್ ಅವರನ್ನು ಸಹ ಪ್ರತಿವಾದಿಯಾಗಿ ಸೇರಿಸಲಾಗಿದೆ.

ಕಾಲುವೆ ಒತ್ತುವರಿ, ಸರ್ವೆ ಕಾರ್ಯದ ಪಾರದರ್ಶಕತೆ ಹಾಗೂ ನ್ಯಾಯಾಲಯದ ವ್ಯಾಜ್ಯಗಳ ಹಿನ್ನೆಲೆಯಲ್ಲಿ ಈ ಪ್ರಕರಣವು ಬಂಗಾರಪೇಟೆ ತಾಲ್ಲೂಕಿನಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದು, ಕಂದಾಯ ಇಲಾಖೆಯ ಮುಂದಿನ ಕ್ರಮದತ್ತ ಸಾರ್ವಜನಿಕರ ಗಮನ ನೆಟ್ಟಿದೆ.

# ಪೊಲೀಸ್ ಕ್ವಾರ್ಟರ್ಸ್ ಜಾಗ ಖಾಸಗಿಯವರಿಗೆ ಮಾರಾಟ ಆಘಾತಕಾರಿ: ಹೈಕೋರ್ಟ್

ಬೆಂಗಳೂರು

ಬೆಂಗಳೂರಿನ ಮಲ್ಲೇಶ್ವರಂನಲ್ಲಿ ಪೊಲೀಸ್ ಕ್ವಾರ್ಟರ್ಸ್‌ನ್ನು ಖಾಸಗಿಯವರಿಗೆ ಮಾರಾಟ ಮಾಡಿರುವುದಕ್ಕೆ ಆಘಾತ ವ್ಯಕ್ತಪಡಿಸಿರುವ ಹೈಕೋರ್ಟ್, "ಇದಕ್ಕೆ ಅವಕಾಶ ಮಾಡಿಕೊಟ್ಟರೆ ಹೈಕೋರ್ಟ್ ಕಟ್ಟಡವೂ ಸುರಕ್ಷಿತವಾಗಿರುವುದಿಲ್ಲ" ಎಂದು ಮೌಖಿಕವಾಗಿ ಹೇಳಿದೆ.

ಶಿವಮೊಗ್ಗದ ಶ್ರೀನಾಥ್ ನಗರಗದ್ದೆ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು.

ಅರ್ಜಿದಾರರನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಎಂ ಅರುಣ್ ಶ್ಯಾಮ್ ಅವರು "ಮೊದಲನೇ ಆರೋಪಿ ಎಂ ಆರ್ ಮಹಾಲಕ್ಷ್ಮಿ ಅವರಿಗೆ ಪೊಲೀಸ್ ಕ್ವಾರ್ಟರ್ಸ್ ಇರುವ ಜಾಗ ಸೇರಿದೆ. ಇದು ತನ್ನ ಆಸ್ತಿ ಎಂದು ಅವರು ಮಾರಾಟ ಮಾಡಿದ್ದು, ಅವರನ್ನೂ ಪ್ರಕರಣದಲ್ಲಿ ಆರೋಪಿಗಳನ್ನಾಗಿ ಸಲಾಗಿದೆ. ಇದು ಮಹಾಲಕ್ಷ್ಮಿ ಅವರಿಗೆ ಸೇರಿದ ಜಾಗ ಎಂಬುದಕ್ಕೆ ಪೂರಕವಾಗಿ ಹೆಚ್ಚುವರಿ ದಾಖಲೆಗಳನ್ನು ಸಲ್ಲಿಸಲಾಗಿದೆ. ಎನ್ಕಂಬರೆನ್ಸ್ ಸರ್ಟಿಫಿಕೇಟ್ನೂ (ಋಣಭಾರ ಪ್ರಮಾಣಪತ್ರ) ಆರೋಪಿ ಹೆಸರಿನಲ್ಲಿದೆ. ಆಕ್ಷೇಪಾರ್ಹವಾದ ಜಾಗವು ಪೊಲೀಸ್ ಇಲಾಖೆಗೆ ಸೇರಿದ್ದು ಎಂಬುದನ್ನು ಸಾಬೀತುಪಡಿಸುವ ಯಾವುದೇ ದಾಖಲೆಯನ್ನು ಪ್ರಾಸಿಕ್ಯೂಷನ್ ಹಾಜರುಪಡಿಸಿಲ್ಲ" ಎಂದರು.

ಆಗ ಪೀಠವು "ಇದಕ್ಕಾಗಿಯೇ ನಾನು ಹೇಳಿದ್ದು, ಇದಕ್ಕೆ ಅವಕಾಶ ನೀಡಿದರೆ ಈ (ಹೈಕೋರ್ಟ್) ಕಟ್ಟಡವೂ ಸುರಕ್ಷಿತವಾಗಿರುವುದಿಲ್ಲ" ಎಂದಿದ್ದಲ್ಲದೇ, ಪೊಲೀಸರೇ ಒತ್ತುವರಿದಾರರೇ?" ಎಂದು ಪ್ರಶ್ನಿಸಿತು. ಇದಕ್ಕೆ ಅರುಣ್ ಶ್ಯಾಮ್ ಅವರು "ಈ ವಿವಾದಕ್ಕೆ ಸಂಬಂಧಿಸಿದಂತೆ ಸಿವಿಲ್ ಕೋರ್ಟ್‌ನಲ್ಲಿ ಎರಡು ದಾವೆಗಳು ದಾಖಲಾಗಿದ್ದು, ಒಂದರಲ್ಲಿ ಪೊಲೀಸರು ಪಕ್ಷಕಾರರಾಗಿದ್ದಾರೆ. ಜಾಗಕ್ಕೆ ಸಂಬಂಧಿಸಿದಂತೆ ಸರ್ಕಾರವು ಒಂದೇ ಒಂದು ದಾಖಲೆ ಹಾಜರುಪಡಿಸಿದರೂ ಅರ್ಜಿ ಹಿಂಪಡೆಯಲಾಗುವುದು" ಎಂದರು.

ಹೆಚ್ಚುವರಿ ವಿಶೇಷ ಸರ್ಕಾರಿ ಅಭಿಯೋಜಕ ಬಿ ಎನ್ ಜಗದೀಶ್ ಅವರು "ಆಕ್ಷೇಪಾರ್ಹವಾದ ಜಾಗವು 1930ರಿಂದಲೂ ಪೊಲೀಸ್ ಇಲಾಖೆಗೆ ಸೇರಿದೆ" ಎಂದರು. ಈ ಹಂತದಲ್ಲಿ ಪೀಠವು "ನಿಮ್ಮ ಧೈರ್ಯವನ್ನು ಮೆಚ್ಚಬೇಕು. ಪೊಲೀಸ್ ಕ್ವಾರ್ಟರ್ಸ್ ಅನ್ನು ನೀವು ಮಾರಾಟ ಮಾಡಿದ್ದೀರಿ. ಕಳೆದ 15 ವರ್ಷಗಳಿಂದ ಪೊಲೀಸ್ ಕ್ವಾರ್ಟರ್ಸ್ ಇರುವ ಪೊಲೀಸರು ನೆಲೆಸಿರುವ ಜಾಗವನ್ನು ನೀವು ಮಾರಾಟ ಮಾಡಿದ್ದೀರಿ" ಎಂದಿತು.

ಆಗ ಅರುಣ್ ಶ್ಯಾಮ್ ಅವರು "ಅಗ್ರಿಮೆಂಟ್ ಮಾಡಿಸಿಕೊಂಡಿರುವವರನ್ನು ಪ್ರತ್ಯೇಕಿಸಿ ಪ್ರಕರಣ ದಾಖಲಿಸಲಾಗಿದೆ. ಮಾಲೀಕರು ಎಂದು ಹೇಳಿಕೊಂಡಿರುವವರ ವಿರುದ್ಧ ಯಾವುದೇ ಕ್ರಮಕೈಗೊಂಡಿಲ್ಲ" ಎಂದರು. ಇದನ್ನು ಆಲಿಸಿದ ಪೀಠವು ವಿಚಾರಣೆಯನ್ನು ಜೂನ್ 9ಕ್ಕೆ ನಡೆಸುವುದಾಗಿ ತಿಳಿಸಿತು.

# "ಬಜೆಟ್ ಟು ಆಕ್ಷನ್" ಯೋಜನೆಗಳಿಗೆ ವೇಗ: ನಗರ ತಜ್ಞರೊಂದಿಗೆ ಸಮನ್ವಯ ಸಭೆ

ಬೆಂಗಳೂರು

ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತರಾದ ಶ್ರೀ ಪೊಮ್ಮಲ ಸುನೀಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಇಂದು ಆಯುಕ್ತರ ಕಚೇರಿಯ ಸಭಾಂಗಣದಲ್ಲಿ "ಬಜೆಟ್ ಟು ಆಕ್ಷನ್" ಯೋಜನೆಗಳ ಅನುಷ್ಠಾನ, ಪ್ರಗತಿ ಪರಿಶೀಲನೆ ಹಾಗೂ ಮುಂದಿನ ಕಾರ್ಯತಂತ್ರಗಳ ಕುರಿತು ಮಹತ್ವದ ಸಮನ್ವಯ ಸಭೆ ನಡೆಯಿತು.

ನಗರಾಭಿವೃದ್ಧಿ ಮತ್ತು ನಾಗರಿಕ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಸಂಸ್ಥೆಗಳ ತಜ್ಞರು ಸಭೆಯಲ್ಲಿ ಭಾಗವಹಿಸಿ, ನಗರದ ಸುಸ್ಥಿರ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಯೋಜನಾ ಪ್ರಸ್ತಾವನೆಗಳನ್ನು ಮಂಡಿಸಿದರು. ಸಭೆಯಲ್ಲಿ ವರ್ಲ್ಡ್ ರಿಸೋರ್ಸಸ್ ಇನ್‌ಸ್ಟಿಟ್ಯೂಟ್ ಇಂಡಿಯಾ, ಬಯೋಮ್, ವೆಲ್ ಲ್ಯಾಬ್ಸ್, ಸೆನ್ಸಿಂಗ್ ಲೋಕಲ್, ಸಿ–40, ಬೆಂಗಳೂರು ರಾಜಕೀಯ ಕ್ರಿಯಾ ಸಮಿತಿ, ವಾಕಲೂರು, ಹಸಿರು ದಳ, ಜನಸಹಾಸ್, ಐಯುಡಿಐ ಹಾಗೂ ಅಲ್ಕಾನ್ ಆರ್ಕಿಟೆಕ್ಟ್ ಸೇರಿದಂತೆ ಅನೇಕ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.



ಸಭೆಯಲ್ಲಿ ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಸಿದ್ಧಪಡಿಸಿರುವ ಕಾರ್ಯಯೋಜನೆ, ಕಾಲಮಿತಿ, ಡಿಜಿಟಲ್ ಡ್ಯಾಶ್‌ಬೋರ್ಡ್ ವ್ಯವಸ್ಥೆ ಹಾಗೂ ಪ್ರಗತಿ ಮೇಲ್ವಿಚಾರಣಾ ವಿಧಾನಗಳ ಕುರಿತು ತಜ್ಞರು ಪ್ರಸ್ತುತಿ ನೀಡಿದರು.

ಈ ವೇಳೆ ಮಾತನಾಡಿದ ಆಯುಕ್ತರು, "ಬಜೆಟ್ ಟು ಆಕ್ಷನ್" ಯೋಜನೆಗಳ ಕುರಿತು ಈಗಾಗಲೇ ಪಾಲಿಕೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಅಗತ್ಯ ಅರಿವು ಮೂಡಿಸಲಾಗಿದೆ. ಮುಂದಿನ ಹಂತದಲ್ಲಿ ಸಂಬಂಧಿತ ಕ್ಷೇತ್ರಗಳ ಶಾಸಕರು ಹಾಗೂ ಸಚಿವರೊಂದಿಗೆ ಸಮಾಲೋಚನೆ ನಡೆಸಿ ಯೋಜನೆಗಳ ಕುರಿತು ವಿವರವಾಗಿ ಮಾಹಿತಿ ನೀಡಬೇಕು. ಅವರ ಸಲಹೆಗಳನ್ನು ಒಳಗೊಂಡು ಯೋಜನೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಸೂಚಿಸಿದರು.

ಕೆಲವು ಯೋಜನೆಗಳನ್ನು ಪಾಲಿಕೆಯ ಸ್ವಂತ ಅನುದಾನದಿಂದಲೇ ಅನುಷ್ಠಾನಗೊಳಿಸಬಹುದಾದರೆ, ಇನ್ನೂ ಕೆಲವು ಯೋಜನೆಗಳಿಗೆ ಸಚಿವರು ಹಾಗೂ ಶಾಸಕರ ವಿಶೇಷ ಅನುದಾನದ ಅಗತ್ಯವಿದೆ. ಬೃಹತ್ ಮಟ್ಟದ ಯೋಜನೆಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಸಹಕಾರ ಹಾಗೂ ಅನುದಾನ ಅತ್ಯವಶ್ಯಕವಾಗಲಿದೆ ಎಂದು ಅವರು ತಿಳಿಸಿದರು.

ನಗರದಲ್ಲಿ ಪಾದಚಾರಿ ಮಾರ್ಗಗಳ ಅಭಿವೃದ್ಧಿ, ಸೈಕಲ್ ಹಾದಿಗಳು, ಕೆರೆಗಳ ಪುನಶ್ಚೇತನ, ಹವಾಮಾನ ಬದಲಾವಣೆ ನಿರ್ವಹಣೆ, ಸಂಚಾರ ಜಂಕ್ಷನ್ ಅಭಿವೃದ್ಧಿ ಹಾಗೂ ಯಲಹಂಕ ಪ್ರದೇಶದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ಅನೇಕ ಯೋಜನೆಗಳ ಕುರಿತು ಸಭೆಯಲ್ಲಿ ಸವಿಸ್ತಾರ ಚರ್ಚೆ ನಡೆಯಿತು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
09/06/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಕೋಲಾರ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯವರು ವಿಶ್ವ ವಿಕಲಚೇತನರ ದಿನಾಚರಣೆ–2026ರ ಪ್ರಯುಕ್ತ ವಿಕಲಚೇತನರ ವಿವಿಧ ಕ್ಷೇತ್ರದಲ್ಲಿ (ಸಬಲೀಕರಣ, ಪುನರ್ವಸತಿ, ಶಿಕ್ಷಣ, ಕೌಶಲ್ಯ ಅಭಿವೃದ್ಧಿ, ಉದ್ಯೋಗ ಸೃಷ್ಟಿ, ತಡೆರಹಿತ ವಾತಾವರಣ, ಸಂಶೋಧನೆ, ನಾವಿನ್ಯತೆ, ಕ್ರೀಡೆ, ಕಲೆ, ಸಾಹಿತ್ಯ ಇತರೆ) ರಾಷ್ಟ್ರ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರ ಪ್ರಶಸ್ತಿ–2026ರ ಸಂಬಂಧ ಅರ್ಜಿಗಳನ್ನು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಲಾಯ, ನವದೆಹಲಿ ಇವರ ಜಾಲತಾಣ www.depwd.gov.in ಮತ್ತು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ www.awards.gov.in ಗಳಲ್ಲಿ ಜುಲೈ 31 ರೊಳಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂ.ಸಂ. 08152–200010 ಯನ್ನು ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಂ.ಆರ್.ಡ್ಬ್ಲ್ಯ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿ.ಆರ್.ಡ್ಬ್ಲ್ಯ ರವರನ್ನು ಸಂಪರ್ಕಿಸಬಹುದೆಂದು ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವೇಶಾತಿಗಾಗಿ ಅರ್ಜಿಆಹ್ವಾನ


ಕೋಲಾರ

2026–27ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಎ.ಎಲ್.ಬಿ ಕಾನೂನು ಪದವಿಗೆ ಪ್ರವೇಶಾತಿಗಾಗಿ ಕಾಲೇಜಿನ ಕಛೇರಿ ಮೂಲಕ ನೇರವಾಗಿ ಉಚಿತ ಅರ್ಜಿಗಳನ್ನು ಜೂನ್ 15 ರೊಳಗೆ ಸಲ್ಲಿಸಬಹುದು. ಸ್ವೀಕೃತವಾದ ಅರ್ಜಿಗಳ ಮೇರೆಗೆ ವಿಶ್ವವಿದ್ಯಾಲಯವು ವಿದ್ಯಾರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ. ಯಾವುದೇ ಡೊನೇಷನ್ ಇಲ್ಲದೆ ಸರ್ಕಾರಿ ಶುಲ್ಕ ಮಾತ್ರ ಇರುತ್ತದೆಂದು ಸರ್ಕಾರಿ ಕಾನೂನು ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಬಿಎ, ಸ್ಥಳೀಯ ಸಂಸ್ಥೆ ಚುನಾವಣೆ ಜೊತೆಗೆ ವಿಧಾನಸಭೆ ಚುನಾವಣೆ ಎದುರಿಸಿ: ವಿಜಯೇಂದ್ರ ಸವಾಲು

ಬೆಂಗಳೂರು

ರಾಜ್ಯದಲ್ಲಿ ಭ್ರಷ್ಟಾಚಾರ ರಹಿತ ಆಡಳಿತ ನೀಡಲು ಸರ್ಕಾರಕ್ಕೆ ಸಾಧ್ಯವಿಲ್ಲ ಎಂದಾದರೆ ಜಿಬಿಎ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆ ಜೊತೆಗೆ ವಿಧಾನಸಭೆ ವಿಸರ್ಜನೆ ಮಾಡಿ ಚುನಾವಣೆ ಎದುರಿಸಿ ಎಂದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸವಾಲು ಎಸೆದಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎರಡು ವರ್ಷದಿಂದ ಸಿಎಂ ಕುರ್ಚಿಗೆ ಹಗ್ಗ ಜಗ್ಗಾಟ ನಡಿತಾ ಇತ್ತು. ಸಿಎಂ ಆಗಿ ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕರಿಸಿದ 48 ಗಂಟೆಗಳ ಒಳಗೆ ಸಚಿವ ಸ್ಥಾನಕ್ಕೆ ರಾಮಲಿಂಗಾ ರೆಡ್ಡಿ ಅವರು ರಾಜೀನಾಮೆ ನೀಡಿದ್ದಾರೆ. ಇನ್ನೂ ಈ ಕಾಂಗ್ರೆಸ್ ಸರ್ಕಾರ ಕಚ್ಚಾಟದಿಂದ ಹೊರಗೆ ಬರುವ ಲಕ್ಷಣ ಇಲ್ಲ ಎಂದು ವಿಶ್ಲೇಷಿಸಿದರು.

ರಾಜ್ಯದಲ್ಲಿ ಏನೇನೂ ಅಭಿವೃದ್ಧಿ ಕಾರ್ಯ ಮಾಡದ ಕಾಂಗ್ರೆಸ್ ಸರ್ಕಾರ ಇನ್ನೂ ಕಚ್ಚಾಟದಿಂದ ಹೊರಗೆ ಬಂದಿಲ್ಲ. ಈ ಸರ್ಕಾರದ ಬಗ್ಗೆ ಜನ ಬೇಸತ್ತಿದ್ದಾರೆ. ರೈತರು ಬೀದಿದಿಳಿದು ಹೋರಾಟ ಮಾಡುತ್ತಿದ್ದಾರೆ. ಎಲ್ಲರನ್ನೂ ಸರಿದೂಗಿಸಿಕೊಂಡು ಹೋಗುವಲ್ಲಿ ಸಿಎಂ ಶಿವಕುಮಾರ್ ಅವರು ವಿಫಲರಾಗಿದ್ದಾರೆ. ಡಿಕೆಶಿ, ಬಿ.ಕೆ ಹರಿಪ್ರಸಾದ್, ಮಲ್ಲಿಕಾರ್ಜುನ ಖರ್ಗೆ ಮತ್ತು ಸಿದ್ದರಾಮಯ್ಯ ಹೀಗೆ ನಾಲ್ಕು ಪವರ್ ಸೆಂಟರ್ ನಡುವೆ ಕಾಂಗ್ರೆಸ್ ಒದ್ದಾಡುತ್ತಿದೆ. ಈ ಪವರ್ ಸೆಂಟರ್‌ಗಳು ಶಿವಕುಮಾರ್ ಅವರ ನಿದ್ದೆಗೆಡಿಸುತ್ತವೆ ಎಂದರು.

ಜನರಿಗಾಗಿ, ಬಡವರಿಗಾಗಿ, ರೈತರಿಗಾಗಿ ಏನೂ ಒಳಿತು ಮಾಡಲು ಆಗದ ಕಾಂಗ್ರೆಸ್ ಸರ್ಕಾರ ರಾಜ್ಯವನ್ನು ಗಾಂಧಿ ಕುಟುಂಬಕ್ಕೆ ಮಾರುವ, ಅಡ ಇಡುವ ಹಾಗೂ ಬೊಕ್ಕಸದಿಂದ ಲೂಟಿ ಮಾಡುವ ಕೆಲಸವನ್ನು ಕಳೆದ ಮೂರು ವರ್ಷದಿಂದ ಮಾಡುತ್ತಾ ಇತ್ತು. ಅದು ಈಗ ಮುಂದುವರಿಯಲಿದೆ. ಅದಕ್ಕೆ ಬೇಕಾದ ಷಡ್ಯಂತ್ರ ನಡೆಯುತ್ತಿದೆ ಎಂದು ಹೇಳಿದರು.

ಇಂದು ರಾಮಲಿಂಗಾ ರೆಡ್ಡಿ ರಾಜೀನಾಮೆ ನೀಡಿದ್ದಾರೆ. ಕೆ ಎಚ್ ಮುನಿಯಪ್ಪ, ಕೆ ಜೆ ಜಾರ್ಜ್ ಸಹ ತಮ್ಮ ಖಾತೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಭಿವೃದ್ಧಿಗಿಂತ ಇವರಿಗೆ ಅಧಿಕಾರದ ಹಪಾಹಪಿ ಹೆಚ್ಚಾಗಿದೆ. ಇದರಿಂದ ಬೇಸತ್ತ ಜನ ವಿಧಾನಸಭಾ ಚುನಾವಣೆ ಆಗಿ ದರಿದ್ರ ಕಾಂಗ್ರೆಸ್ ಸರ್ಕಾರ ತೊಲಗಬೇಕು ಎಂದು ಬಯಸಿದ್ದಾರೆ. ಕಾಂಗ್ರೆಸ್‌ನವರಿಗೆ ಮಾನ ಮರ್ಯಾದೆ ಇಲ್ಲ ಎಂದು ರಾಜ್ಯದ ಜನ ಮಾತನಾಡುತ್ತಿದ್ದಾರೆ ಎಂದರು. ಮುಖ್ಯಮಂತ್ರಿ ಶಿವಕುಮಾರ್ ಅವರಿಗೆ ಸಾಕಷ್ಟು ಅನುಭವ ಇದೆ. ಅವರು ಕಸದಿಂದ ರಸ ತೆಗೆಯುವ ಕಲೆಯನ್ನು ಕರಗತ ಮಾಡಿಕೊಂಡಿದ್ದಾರೆ. ಹಿರಿಯ ಸಚಿವರನ್ನು ಕಡೆಗಣಿಸಿದ್ದಾರೆ ಎಂಬ ಚರ್ಚೆ ಆರಂಭವಾಗಿದೆ.

## ಹೋಂ ಮಿನಿಸ್ಟರ್ ಪ್ರಿಯಾಂಕ್ ಖರ್ಗೆ ಪ್ರಥಮ ಸಭೆ

ಬೆಂಗಳೂರು

ಡಿಕೆ ನೂತನ ಸರ್ಕಾರದ ಸಂಪುಟದಲ್ಲಿ ಗೃಹ ಸಚಿವರಾಗಿರುವ ಪ್ರಿಯಾಂಕ್ ಖರ್ಗೆ ಇದೇ ಮೊದಲ ಬಾರಿಗೆ ಪೊಲೀಸ್ ಇಲಾಖೆ ಹಿರಿಯ ಅಧಿಕಾರಿಗಳ ಸಭೆ ನಡೆಸಿದರು.



ಪೊಲೀಸ್ ಅಧಿಕಾರಿಗಳೊಂದಿಗಿನ ತಮ್ಮ ಮೊದಲ ಸಭೆಯಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕೆಲ ಮಹತ್ವದ ವಿಚಾರಗಳನ್ನು ಹಂಚಿಕೊಂಡಿದ್ದಾರೆ.

ರಾಜ್ಯದಲ್ಲಿ ಮಹಿಳಾ ಸುರಕ್ಷತೆಯ ಕುರಿತು ಹೆಚ್ಚಿನ ಆದ್ಯತೆ ನೀಡುವಂತೆ ಪೊಲೀಸ್ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

"ಮಹಿಳೆಯರಿಗೆ ಏನು ಧರಿಸಬೇಕೆಂದು ಹೇಳುವುದಕ್ಕಿಂತ, ಪುರುಷರಿಗೆ ಹೇಗೆ ವರ್ತಿಸಬೇಕೆನ್ನುವುದನ್ನು ತಿಳಿಸಿ ಹೇಳಬೇಕಾಗಿದೆ ಎಂದು ಅವರು ಪೊಲೀಸ್ ಅಧಿಕಾರಿಗಳಿಗೆ ಸಲಹೆಗಳನ್ನು ನೀಡಿದ್ದಾರೆ.

# ಜಮೀನಿಗೆ ದಾರಿಕೊಟ್ಟ ಮಾನವೀಯತೆ ಮೆರೆದ ರೈತ

ಮಾಲೂರು

ತಾಲೂಕಿನ ಕುಡಿಯನೂರು ಗ್ರಾಮದ ಬಳಿ ದಲಿತ ಸಮಾಜಕ್ಕೆ ಸೇರಿದ ಸ್ಮಶಾನಕ್ಕೆ ಪಕ್ಕದ ಜಮೀನಿನ ರೈತರಾದ ಲೋಕೇಶ್ ಹಾಗೂ ಗಣೇಶ್ ಅವರು ಸ್ವಯಂ ಪ್ರೇರಣೆಯಿಂದ 12 ಅಡಿಗಳಷ್ಟು ದಾರಿಯನ್ನು ಬಿಟ್ಟುಕೊಡುವುದರ ಮೂಲಕ ಮಾನವೀಯತೆಯನ್ನು ಮೆರೆದು ಜಿಲ್ಲೆಯಲ್ಲಿ ಮಾದರಿಯಾದರು. ದಾರಿ ಬಿಡಿಸಿ ಕೊಡುವಲ್ಲಿ ಹಸಿರು ರೈತ ಸೇನೆ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಯಶಸ್ವಿಯಾದರು.



ಕುಡಿಯನೂರು ಗ್ರಾಮದ ದಲಿತ ಸಮಾಜಕ್ಕೆ ಸೇರಿದ ಸ್ಮಶಾನಕ್ಕೆ ಹೋಗಲು ಹಲವಾರು ವರ್ಷಗಳಿಂದ ದಾರಿ ಇರಲಿಲ್ಲ ಈ ವಿಚಾರವಾಗಿ ಸಾಕಷ್ಟು ಬಾರಿ ಅಧಿಕಾರಿಗಳಿಗೆ ಹಾಗೂ ಚುನಾಯಿತ ಪ್ರತಿನಿಧಿಗಳಿಗೆ ಮನವಿ ಸಲ್ಲಿಸಿದರು, ಯಾವುದೇ ಪ್ರಯೋಜನವಾಗಿರಲಿಲ್ಲ, ಹಸಿರು ಸೇನೆ ರೈತ ಸಂಘವು ದಲಿತರ ಸ್ಮಶಾನಕ್ಕೆ ದಾರಿ ಕಲ್ಪಿಸುವಂತೆ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ ಸ್ಮಶಾನಕ್ಕೆ ತೆರಳುವ ಪಕ್ಕದ ಜಮೀನಿನ ಮಾಲೀಕರನ್ನು ಮನವಲಿಸುವಲ್ಲಿ ವಿಫಲರಾಗಿ ಹಿಂದಿರುಗಿದರು, ಆದರೆ ರೈತ ಸಂಘ ಅಧ್ಯಕ್ಷ ಹರೀಶ್ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಂಬರೀಶ್ ಅವರು ಪಕ್ಕದ ಜಮೀನಿನ ರೈತರ ಮನವೊಲಿಸಿ ಸ್ಮಶಾನಕ್ಕೆ ಹೋಗುವ 12 ಅಡಿಗಳಷ್ಟು ದಾರಿಯನ್ನು ಬಿಡಿಸಿಕೊಟ್ಟರು.

ಸುಮಾರು 50 ವರ್ಷಗಳಿಂದ ದಲಿತರ ಸ್ಮಶಾನಕ್ಕೆ ಹೋಗಲು ದಾರಿ ಇಲ್ಲದೆ ಪರದಾಡುತ್ತಿದ್ದರು ಖಾಸಗಿ ಜಮೀನಿನಲ್ಲಿ ಶವವನ್ನು ಹೊತ್ತು ಹೋಗಿ ಅಂತ್ಯ ಸಂಸ್ಕಾರ ಮಾಡಿ ಬರುತ್ತಿದ್ದರು.

ಆದರೆ ಇತ್ತೀಚಿಗೆ ಭೂಮಿಯ ಬೆಲೆ ಏರುತ್ತಿದೆ ಕೆರೆ ಅಂಗಳ ಕಾಲುವೆ ಕಟ್ಟೆ ಕೆಲವು ಜಮೀನಿನ ರೈತರು ಕಾಂಪೌಂಡ್‌ಗಳು ನಿರ್ಮಿಸಿಕೊಂಡಿದ್ದಾರೆ.

ದಲಿತರ ಸ್ಮಶಾನಕ್ಕೆ ಹೋಗಲು ಯಾವುದೇ ದಾರಿ ಇಲ್ಲದಂತಾಗಿ ದಾರಿ ಮಾಡಿ ಕೊಡುವಂತೆ ಸಂಸದರು, ಶಾಸಕರು, ತಾಲೂಕು ಆಡಳಿತಕ್ಕೆ ದಲಿತರು ಮನವಿ ಪತ್ರಗಳನ್ನು ಸಲ್ಲಿಸಿದ್ದರು.

ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ದಾರಿ ಕಲ್ಪಿಸುವಲ್ಲಿ ವಿಫಲರಾಗಿದ್ದರು, ತದನಂತರ ದಲಿತ ಸಮುದಾಯದವರು ರೈತ ಸಂಘದ ಮೊರೆ ಹೋಗಿ ಅಕ್ಕಪಕ್ಕದ ರೈತರ ಮನವೊಲಿಸಿ ಸ್ಮಶಾನಕ್ಕೆ ಹೋಗಲು ದಾರಿ ಬಿಡಿಸಿ ಕೊಡುವಂತೆ ಕೋರಿದರು, ಗುರುವಾರ ಸ್ಥಳಕ್ಕೆ ಆಗಮಿಸಿದ ರಾಜಸ್ವನಿರೀಕ್ಷಕ ಅರುಣ್ ಕುಮಾರ್ ಹಾಗೂ ಗ್ರಾಮ ಆಡಳಿತ ಅಧಿಕಾರಿ ದಿನೇಶ್, ಪಿ ಡಿ ಓ ಅಂಬರೀಶ್ ಭೇಟಿ ನೀಡಿ ಅಕ್ಕಪಕ್ಕದ ರೈತರ ಜಮೀನು ಪರಿಶೀಲನೆ ನಡೆಸಿ ದಲಿತರ ಸ್ಮಶಾನಕ್ಕೆ ದಾರಿ ಕೊಡಿಸಲು ಪ್ರಯತ್ನ ಪಟ್ಟರು, ಆದರೆ ರಾಜಸ್ವ ನಿರೀಕ್ಷಕ ಹಾಗೂ ದಲಿತರ ನಡುವೆ ದಾರಿ ವಿಚಾರದಲ್ಲಿ ಮಾತಿನ ಚಕಮಕಿ ನಡೆದು ಅಲ್ಲಿಂದ ಹೊರಟು ಹೋದರು.

ಸ್ಥಳದಲ್ಲಿಯೇ ಇದ್ದ ರೈತ ಸಂಘದ ಅಧ್ಯಕ್ಷ ವೆಂಕಟೇಶ್ ಹಾಗೂ ಪಿಡಿಒ ಅಂಬರೀಶ್ ಅವರು ದಲಿತರನ್ನು ಹಾಗೂ ಪಕ್ಕದ ಜಮೀನಿನ ಮಾಲೀಕರ ಬಳಿ ಮಾತುಕತೆ ನಡೆಸಿ ಮನವೊಲಿಸುವುದರ ಮೂಲಕ ದಾರಿ ಬಿಡುವಂತೆ ಮನವಿ ಮಾಡಿದರು ಅದೇ ಗ್ರಾಮದ ಮೇಲ್ಜಾತಿಯ ಭೂ ಮಾಲೀಕರಾದ ಲೋಕೇಶ್ ಹಾಗೂ ಗಣೇಶ ಅವರು ಮನವಿಗೆ ಸ್ಪಂದಿಸಿ ಸ್ವಯಂ ಪ್ರೇರಣೆಯಾಗಿ ತಮ್ಮ ಜಮೀನಿನಲ್ಲಿ 12 ಅಡಿಗಳಷ್ಟು ಖುದ್ದಾಗಿ ಅಳತೆ ಮಾಡಿ ದಲಿತರ ಸ್ಮಶಾನಕ್ಕೆ ಹೋಗಲು ದಾರಿ ಮಾಡಿಕೊಟ್ಟಿರುವುದು ಜಿಲ್ಲೆಯಲ್ಲಿ ಮಾದರಿಯಾಗಿದೆ ಅಸ್ಪೃಶ್ಯತೆ ಮುಕ್ತ ಅವಕಾಶ ಕಲ್ಪಿಸಿರುವುದು ಪ್ರಶಂಸಿನಿಯವಾದದ್ದು.

ಈ ಸಂದರ್ಭದಲ್ಲಿ ಗ್ರಾ.ಪಂ. ಮಾಜಿ ಸದಸ್ಯ ರವಿ, ದಲಿತ ಸಮಾಜದ ನಾಗರಾಜ್, ಅಂಜಲಿ ನಾಗರಾಜು., ಗುಂಡಪ್ಪ, ಶ್ರೀನಿವಾಸ್ ಇನ್ನಿತರರು ಹಾಜರಿದ್ದರು.

# ಎಸ್.ಐ.ಆರ್ ಬಗ್ಗೆ ಗೊಂದಲ, ಭಯ ಬೇಡ

ದೊಡ್ಡಬಳ್ಳಾಪುರ

ತಾಲ್ಲೂಕಿನಲ್ಲಿ ಜೂನ್ 20ರಿಂದ ಎಸ್‌ಐಆರ್ ಪ್ರಕ್ರಿಯೆ ಅಧಿಕೃತವಾಗಿ ಆರಂಭವಾಗಲಿದ್ದು, ಈ ಕುರಿತು ಸಾರ್ವಜನಿಕರು ಯಾವುದೇ ಗೊಂದಲ ಅಥವಾ ಭಯಪಡಬೇಕಾದ ಅಗತ್ಯವಿಲ್ಲ ಎಂದು ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿ ಹಾಗೂ ಚುನಾವಣಾಧಿಕಾರಿಯಾದ ಟಿ.ಆರ್. ಮಂಜುನಾಥ ತಿಳಿಸಿದ್ದಾರೆ.



ನಗರದ ಉಪವಿಭಾಗಾಧಿಕಾರಿ ಕಚೇರಿಯಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಒಟ್ಟು 2,23,457 ಮಂದಿ ಮತದಾರರಿದ್ದು, ಈ ಪೈಕಿ ಯಾರೆಲ್ಲಾ ಮತದಾನಕ್ಕೆ ಅರ್ಹರು ಎಂಬುದನ್ನು ಎಸ್‌ಐಆರ್ ಪ್ರಕ್ರಿಯೆ ಮೂಲಕ ನಿರ್ಧರಿಸಲಾಗುತ್ತದೆ ಎಂದರು.

ಈಗಾಗಲೇ ಶೇ.90ರಷ್ಟು ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದ್ದು, 276 ಮಂದಿ ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಪರಿಷ್ಕರಣೆ ಕಾರ್ಯದಲ್ಲಿ ತೊಡಗಿಸಿಕೊಳ್ಳಲಿದ್ದಾರೆ. ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆ (ಎನುಮೆರೇಷನ್ ಫಾರ್ಮ್) ವಿತರಣೆ ಹಾಗೂ ಸಂಗ್ರಹಣೆ ಕಾರ್ಯ ನಡೆಸಲಿದ್ದಾರೆ ಎಂದು ಹೇಳಿದರು. ಮೃತರ ಹೆಸರುಗಳನ್ನು ಪಟ್ಟಿಯಿಂದ ತೆಗೆಯುವುದು ಸೇರಿದಂತೆ ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಎಲ್ಲಾ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು.

ಜೂನ್ 20ರಿಂದ 29ರವರೆಗೆ ಎಸ್‌ಐಆರ್‌ಗೆ ಸಿದ್ಧತೆ, ಬಿಎಲ್‌ಒಗಳ ತರಬೇತಿ ಹಾಗೂ ಮುದ್ರಣ ಕಾರ್ಯ ನಡೆಯಲಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಇದೇ ಅವಧಿಯಲ್ಲಿ ಮತಗಟ್ಟೆಗಳ ತಾರ್ಕಿಕ ಮರು ಹೊಂದಾಣಿಕೆ ಕಾರ್ಯವೂ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆ, ನಮೂನೆಗಳು ಹಾಗೂ ವೇಳಾಪಟ್ಟಿಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಯನ್ನು ಜಿಲ್ಲಾ ಚುನಾವಣಾಧಿಕಾರಿಗಳ ಅಧಿಕೃತ ಜಾಲತಾಣ, ಮುಖ್ಯ ಚುನಾವಣಾಧಿಕಾರಿ ಹಾಗೂ ಕೇಂದ್ರ ಚುನಾವಣಾ ಆಯೋಗದ ಅಧಿಕೃತ ಜಾಲತಾಣಗಳಲ್ಲಿ ಪ್ರಕಟಿಸಲಾಗುತ್ತದೆ. ಮತದಾರರ ಅನುಕೂಲಕ್ಕಾಗಿ ಗ್ರಾಮ ಪಂಚಾಯಿತಿ ಹಾಗೂ ನಗರ ವಾರ್ಡ್ ಮಟ್ಟದಲ್ಲಿ ಮತದಾರರ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಹೇಳಿದರು.

ಎನುಮೆರೇಷನ್ ಫಾರ್ಮ್ ಕುರಿತು ವಿವರಿಸಿದ ಅವರು, ಪ್ರತಿ ಮತದಾರರಿಗೂ ದ್ವಿಪತ್ರಿಯಲ್ಲಿ ಗಣತಿ ನಮೂನೆಗಳನ್ನು ಬಿಎಲ್‌ಒಗಳು ಮನೆ ಮನೆಗೆ ತಲುಪಿಸಲಿದ್ದಾರೆ. ಬಿಎಲ್‌ಒ ಸಹಿ ಇರುವ ಒಂದು ಪ್ರತಿಯನ್ನು ಮತದಾರರು ತಮ್ಮ ಬಳಿ ಇಟ್ಟುಕೊಂಡು, ಮತ್ತೊಂದು ಪ್ರತಿಯಲ್ಲಿ ಅಗತ್ಯ ಮಾಹಿತಿಯನ್ನು ಭರ್ತಿ ಮಾಡಿ ಹಿಂದಿರುಗಿಸಬೇಕು ಎಂದರು.

ಅರ್ಜಿಯಲ್ಲಿ ಮತದಾರರ ಭಾವಚಿತ್ರ, ಹೆಸರು, ಮತಗಟ್ಟೆ ಸಂಖ್ಯೆ ಹಾಗೂ ವಿಧಾನಸಭಾ ಕ್ಷೇತ್ರದ ಹೆಸರು ಮುದ್ರಿತವಾಗಿರುತ್ತದೆ. ಪ್ರತಿ ಅರ್ಜಿಗೂ ಪ್ರತ್ಯೇಕ ಕ್ಯೂಆರ್ ಕೋಡ್ ಇರುತ್ತದೆ. ಬಿಎಲ್‌ಒ ಆಪ್ ಮೂಲಕ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿದರೆ ಮತದಾರರ ಮಾಹಿತಿ ಲಭ್ಯವಾಗುತ್ತದೆ ಎಂದು ತಿಳಿಸಿದರು.

ಮತದಾರರ ಭಾವಚಿತ್ರ ಹಳೆಯದಾಗಿದ್ದರೆ ಹೊಸ ಭಾವಚಿತ್ರವನ್ನು ಅರ್ಜಿಯೊಂದಿಗೆ ನೀಡಬಹುದು. ಇಲ್ಲವಾದರೆ ಬಿಎಲ್‌ಒಗಳೇ ಆಪ್ ಮೂಲಕ ಹೊಸ ಭಾವಚಿತ್ರ ಪಡೆದುಕೊಳ್ಳಲಿದ್ದಾರೆ. 2002ರ ಮತದಾರರ ಪಟ್ಟಿಯಲ್ಲಿ ಹೆಸರು ಇದ್ದರೆ ಅದರ ವಿವರ ನೀಡಬೇಕು. ಇಲ್ಲದಿದ್ದರೆ ತಂದೆ, ತಾತ ಸೇರಿದಂತೆ ಸಂಬಂಧಿಕರ ಮಾಹಿತಿಯನ್ನು ಒದಗಿಸಬೇಕು ಎಂದು ಹೇಳಿದರು. ಅರ್ಜಿಯಲ್ಲಿ ಮತದಾರರು ಸಹಿ ಅಥವಾ ಎಡಗೈ ಹೆಬ್ಬೆರಳಿನ ಗುರುತು ಹಾಕಬಹುದು. ಮತದಾರರು ಆ ಸಂದರ್ಭದಲ್ಲಿ ಲಭ್ಯವಿಲ್ಲದಿದ್ದರೆ ಕುಟುಂಬದ ವಯಸ್ಕ ಸದಸ್ಯರು ಸಹಿ ಮಾಡಿ ಅರ್ಜಿ ಹಸ್ತಾಂತರಿಸಬಹುದಾಗಿದೆ. ಅಂತಿಮ ಮತದಾರರ ಪಟ್ಟಿ ಅಕ್ಟೋಬರ್ 7ರಂದು ಪ್ರಕಟಿಸಲಾಗುವುದು ಎಂದು ಟಿ.ಆರ್. ಮಂಜುನಾಥ ಮಾಹಿತಿ ನೀಡಿದರು.

## ಕುಂದೂರಿನಲ್ಲಿ ವಿಶ್ವ ಪರಿಸರ ದಿನಾಚರಣೆ

ತುಮಕೂರು

ತಾಲ್ಲೂಕಿನ ಬೆಳಗುಂಬ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಂದೂರು ಗ್ರಾಮದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಸಾರ್ವಜನಿಕರ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಕಸ ವಿಲೇವಾರಿ ಮಾಡುತ್ತಿದ್ದ ಸ್ಥಳವನ್ನು ಸ್ವಚ್ಛಗೊಳಿಸಿ, ಆ ಜಾಗದಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸಣ್ಣ ಮಸಿಯಪ್ಪ, "ಸ್ವಚ್ಛ ಪರಿಸರ ನಿರ್ಮಾಣ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಮೊದಲು ನಮ್ಮ ಸುತ್ತಮುತ್ತಲಿನ ವಾತಾವರಣವನ್ನು ಶುಚಿಗೊಳಿಸಬೇಕು. ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು" ಎಂದು ಹೇಳಿದರು.

ಮನೆ ತ್ಯಾಜ್ಯವನ್ನು ಸಾರ್ವಜನಿಕ ಸ್ಥಳಗಳಲ್ಲಿ ಎಸೆಯದೆ, ಸ್ವಚ್ಛ ವಾಹಿನಿಗೆ ನೀಡಬೇಕು. ಪರಿಸರ ಸಂರಕ್ಷಣೆಯ ಬದಲಾವಣೆ ಮೊದಲು ನಮ್ಮ ಮನೆಯಿಂದಲೇ ಆರಂಭವಾಗಬೇಕು. ಆಗ ಮಾತ್ರ ಸ್ವಚ್ಛ ಮತ್ತು ಸುಂದರ ಪರಿಸರ ನಿರ್ಮಾಣ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತುಮಕೂರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀನಾರಾಯಣ, ಸಹಾಯಕ ನಿರ್ದೇಶಕ ಮಂಜುನಾಥ್, ಜಿಲ್ಲಾ ಪಂಚಾಯಿತಿ ವ್ಯವಸ್ಥಾಪಕಿ ಚಂದ್ರಕಲಾ, ಬೆಳಗುಂಬ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಯೋಗಾನಂದ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

### 8ರವರೆಗೆ ಗುಡುಗು, ಸಿಡುಲು ಸಹಿತ

## ಭಾರೀ ಮಳೆ

ಬೆಂಗಳೂರು

ರಾಜ್ಯಾದ್ಯಂತ ಜೂನ್ 8ರವರೆಗೆ ಅಲ್ಲಲ್ಲಿ ಗುಡುಗು, ಸಿಡಿಲು ಬಿರುಗಾಳಿ ಸಹಿತ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇಂದಿನಿಂದ ಮುಂದಿನ ಹಲವು ದಿನಗಳವರೆಗೆ ಮಲೆನಾಡು ಜಿಲ್ಲೆಗಳು ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮುಂಗಾರು ಜೂನ್ 4ರಂದು ಕೇರಳ ಮೂಲಕ ಪ್ರವೇಶಿಸಿದ್ದು, ನೈಋತ್ಯ ಮತ್ತು ಆಗ್ನೇಯ ಅರೇಬಿಯನ್ ಸಮುದ್ರದ ಉಳಿದ ಭಾಗಗಳು, ಪಶ್ಚಿಮ ಮಧ್ಯ ಮತ್ತು ಪೂರ್ವ ಮಧ್ಯ ಅರೇಬಿಯನ್ ಸಮುದ್ರದ ಕೆಲವು ಕರ್ನಾಟಕದ ಕೆಲವು ಭಾಗಗಳು, ತಮಿಳುನಾಡ, ಕೊಮೊರಿನ್ ಪ್ರದೇಶದ ಉಳಿದ ಭಾಗಗಳು, ಬಂಗಾಳ ಕೊಲ್ಲಿಯ ಆಗ್ನೇಯ, ಬಂಗಾಳ ಕೊಲ್ಲಿಯ ನೈಋತ್ಯ, ಪಶ್ಚಿಮ ಮಧ್ಯ, ಪೂರ್ವ ಮಧ್ಯ, ಈಶಾನ್ಯ ಕೆಲವು ಭಾಗಗಳಿಗೆ ಮುಂದುವರೆದಿದೆ.

ಜೂನ್ 10ರವರೆಗೂ ಕರಾವಳಿಯ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡಿನ ಬೆಳಗಾವಿ, ವಿಜಯಪುರ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಬಿರುಗಾಳಿ, ಗುಡುಗು ಸಹಿತ ಭಾರೀ ಮಳೆಯಾಗಲಿದೆ. ಧಾರವಾಡ, ಗದಗ ಮತ್ತು ಕೊಪ್ಪಳದ ಒಂದೆರಡು ಸ್ಥಳಗಳಲ್ಲಿ ಗಂಟೆಗೆ 40–50 ಕಿ.ಮೀ. ವೇಗದಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಬಾಗಲಕೋಟೆ, ಬೀದರ್, ಹಾವೇರಿ, ರಾಯಚೂರು, ಯಾದಗಿರಿ ಜಿಲ್ಲೆಗಳ ಹೆಚ್ಚಿನ ಸ್ಥಳಗಳಲ್ಲಿ ಗಂಟೆಗೆ 40–50 ಕಿ.ಮೀ. ವೇಗದ ಗಾಳಿ ಸಹಿತ ಗುಡುಗು ಸಹಿತ ಮಳೆಯಾಗಲಿದೆ ಎಂದು ಐಎಂಡಿ ಹೇಳಿದೆ.

ಇನ್ನು ದಕ್ಷಿಣ ಒಳನಾಡಿನ ಬಳ್ಳಾರಿ, ವಿಜಯನಗರ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ದಾವಣಗೆರೆ ಜಿಲ್ಲೆಗಳ ಒಂದೆರಡು ಸ್ಥಳಗಳಲ್ಲಿ 30–40 ಕಿ.ಮೀ.

# ಕಾಂಗ್ರೆಸ್ ಕಾರ್ಯಕರ್ತರ ಸಂಭ್ರಮಾಚರಣೆ

ದೊಡ್ಡಬಳ್ಳಾಪುರ

ಕರ್ನಾಟಕ ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ತಾಲೂಕಿನ ರಾಜಘಟ್ಟ ಗ್ರಾಮದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು.



ಈ ವೇಳೆ ಸ್ಥಳೀಯ ಕಾಂಗ್ರೆಸ್ ಮುಖಂಡ ನಾರಾಯಣಸ್ವಾಮಿ ಮಾತನಾಡಿ, ಪಕ್ಷದ ರಾಷ್ಟ್ರೀಯ ವರಿಷ್ಠರ ಆದೇಶದಂತೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ನುಡಿದಂತೆ ನಡೆದಿದ್ದಾರೆ. ಇದೀಗ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸಿರುವುದು ರಾಜ್ಯ ರಾಜಕೀಯದಲ್ಲಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಲಿದೆ ಎಂದು ಹೇಳಿದರು.

ಡಿ.ಕೆ. ಶಿವಕುಮಾರ್ ಅವರೊಂದಿಗೆ ಡಾ. ಜಿ. ಪರಮೇಶ್ವರ್, ಕೆ.ಹೆಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಎಂ.ಬಿ. ಪಾಟೀಲ್, ರಾಮಲಿಂಗಾ ರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ. ಖಾದರ್, ಈಶ್ವರ್ ಖಂಡ್ರೆ, ಯತೀಂದ್ರ ಸಿದ್ದರಾಮಯ್ಯ, ಭೈರತಿ ಸುರೇಶ್ ಹಾಗೂ ಶರಣ ಪ್ರಕಾಶ್ ಪಾಟೀಲ್ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ವಿಶೇಷವಾಗಿ ನಮ್ಮ ಜಿಲ್ಲೆಯ ನಾಯಕ ಕೆ.ಹೆಚ್. ಮುನಿಯಪ್ಪ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಪ್ರಮಾಣವಚನ ಪಡೆದ ಕೆಲವೇ ಕ್ಷಣಗಳಲ್ಲಿ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜ್ಯದ ಜನತೆಗೆ ಹಲವು ಘೋಷಣೆಗಳ ಮೂಲಕ ಉಡುಗೊರೆ ನೀಡಿದ್ದಾರೆ. ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪ್ರಯಾಣ ಘೋಷಣೆ ಮಾಡಿರುವುದು ಹಾಗೂ ರೈತರಿಗೆ ನೆರವು ನೀಡುವ ಭರವಸೆ ನೀಡಿರುವುದು ಕಾಂಗ್ರೆಸ್ ಪಕ್ಷ ಸದಾ ಜನಪರ ಮತ್ತು ರೈತಪರವಾಗಿದೆ ಎಂಬುದಕ್ಕೆ ಉದಾಹರಣೆಯಾಗಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇನ್ನಷ್ಟು ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೆ ತಂದು ರಾಜ್ಯವನ್ನು ಪ್ರಗತಿಯ ದಾರಿಗೆ ಕೊಂಡೊಯ್ಯಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ದೊಡ್ಡಬಳ್ಳಾಪುರ ತಾಲೂಕಿನ ನಿಕಟಪೂರ್ವ ಶಾಸಕ ಟಿ. ವೆಂಕಟರಮಣಯ್ಯ ಅವರಿಗೆ ರಾಜ್ಯಮಟ್ಟದ ನಿಗಮ ಮಂಡಳಿಯಲ್ಲಿ ಅಧ್ಯಕ್ಷ ಸ್ಥಾನ ನೀಡುವಂತೆ ಮುಖಂಡರು ನೂತನ ಮುಖ್ಯಮಂತ್ರಿಗೆ ಮನವಿ ಮಾಡಿದರು. ಕಳೆದ ಮೂರು ವರ್ಷಗಳಿಂದ ಅವರಿಗೆ ಯಾವುದೇ ಅಧಿಕಾರ ನೀಡಲಾಗಿಲ್ಲ. ಮುಂದಿನ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಪಕ್ಷ ಸಂಘಟನೆಗೆ ಬಲ ತುಂಬಲು ಅವರಿಗೆ ಸೂಕ್ತ ಸ್ಥಾನಮಾನ ನೀಡಬೇಕು ಎಂದು ಆಗ್ರಹಿಸಿದರು.

ರಾಜಘಟ್ಟ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಜಗದೀಶ್ ಮಾತನಾಡಿ, ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಆಗಿರುವುದು ಸಂತಸ ತಂದಿದೆ. ಅವರು ರಾಜ್ಯದ ಭವಿಷ್ಯದ ಉತ್ತಮ ನಾಯಕರಾಗಿ ಹೊರಹೊಮ್ಮಲಿದ್ದು, ಅಭಿವೃದ್ಧಿಗಾಗಿ ವಿನೂತನ ಕಾರ್ಯಕ್ರಮಗಳನ್ನು ರೂಪಿಸಲಿದ್ದಾರೆ ಎಂಬ ನಿರೀಕ್ಷೆ ಇದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜಘಟ್ಟ ಕಾಂಗ್ರೆಸ್ ಮುಖಂಡ ನಾರಾಯಣಸ್ವಾಮಿ, ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಜಗನ್ನಾಥ್, ಹಿರಿಯ ಮುಖಂಡ ಆರ್.ಎ. ಚನ್ನಪ್ಪ, ಮುಖಂಡರಾದ ಆರ್.ಎಸ್. ರಾಜು, ಅಂಬರೀಷ್, ಚೇತನ್, ರಂಜಿತ್, ಆಂಜಿ, ಬಾಬಣ್ಣ, ಗೋವಿಂದಪ್ಪ, ರವಿ, ರಮೇಶ್, ಹಾಲು ಉತ್ಪಾದಕರ ಸಂಘದ ನಿರ್ದೇಶಕ ನಾರಾಯಣಪ್ಪ ಸೇರಿದಂತೆ ಹಲವು

# 'ನಾಲ್ವಡಿ ಕೃಷ್ಣರಾಜೇಂದ್ರ ಒಡೆಯರ್ ಅವರ ಆಡಳಿತಾವಧಿ ಮೈಸೂರು ಇತಿಹಾಸದ ಸುವರ್ಣಯುಗ'

ದೊಡ್ಡಬಳ್ಳಾಪುರ

ಕನ್ನಡಿಗರ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ನಾಲ್ವಡಿ ಕೃಷ್ಣರಾಜೇಂದ್ರ ಒಡೆಯರ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಸಿಹಿ ಹಂಚುವ ಮೂಲಕ ಆಚರಿಸಲಾಯಿತು.



ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ರಮೇಶ್ ಮಾತನಾಡಿ, ನಾಲ್ವಡಿ ಕೃಷ್ಣರಾಜೇಂದ್ರ ಒಡೆಯರು 1884ರ ಜೂನ್ 4ರಂದು ಮೈಸೂರಿನಲ್ಲಿ ಜನಿಸಿದರು. ಅವರು ಮೈಸೂರು ಸಂಸ್ಥಾನದ 24ನೇ ರಾಜರಾಗಿ ಆಳ್ವಿಕೆಗೆ ಬಂದ ಮಹಾನ್ ವ್ಯಕ್ತಿಯಾಗಿದ್ದು, ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವನ್ನಾಗಿ ರೂಪಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಅವರು ಅನೇಕ ಶಿಕ್ಷಣ ಸಂಸ್ಥೆಗಳು ಹಾಗೂ ಕಾಲೇಜುಗಳನ್ನು ಸ್ಥಾಪನೆ ಮಾಡಿ ಮೈಸೂರು ರಾಜ್ಯವನ್ನು ವಿದ್ಯಾವಂತ ರಾಜ್ಯವನ್ನಾಗಿ ಪರಿವರ್ತಿಸಿದರು. ಭಾರತದಲ್ಲೇ ಮೊದಲ ಬಾರಿಗೆ ಜನಪ್ರತಿನಿಧಿ ಸಭೆಯನ್ನು ಸ್ಥಾಪಿಸಿ, ಮಹಿಳೆಯರಿಗೆ ಮತದಾನದ ಹಕ್ಕು ನೀಡಿದ ದೂರದೃಷ್ಟಿಯ ರಾಜನಾಗಿದ್ದರು ಎಂದು ಹೇಳಿದರು.

ಮೈಸೂರು ವಿಶ್ವವಿದ್ಯಾನಿಲಯ, ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್‌ಸಿ) ಸೇರಿದಂತೆ ಹಲವು ಶೈಕ್ಷಣಿಕ ಸಂಸ್ಥೆಗಳ ಸ್ಥಾಪನೆಗೆ ಭೂಮಿ ಹಾಗೂ ಧನಸಹಾಯ ನೀಡಿ ಪ್ರೋತ್ಸಾಹ ನೀಡಿದರು. ಕೈಗಾರಿಕಾ ಮತ್ತು ನೀರಾವರಿ ಅಭಿವೃದ್ಧಿಗಾಗಿ ಭದ್ರಾವತಿ ಕಬ್ಬಿಣ ಮತ್ತು ಉಕ್ಕಿನ ಕಾರ್ಖಾನೆ ಹಾಗೂ ಕೃಷ್ಣರಾಜ ಸಾಗರ (ಕೆಆರ್‌ಎಸ್) ಅಣೆಕಟ್ಟು ನಿರ್ಮಾಣಕ್ಕೆ ಕಾರಣಕರ್ತರಾಗಿದ್ದರು ಎಂದು ತಿಳಿಸಿದರು.

ಅಲ್ಲದೆ ಮೈಸೂರು ನಗರದಲ್ಲಿ ಭಾರತದಲ್ಲೇ ಮೊದಲ ಬಾರಿಗೆ ಒಳಚರಂಡಿ ವ್ಯವಸ್ಥೆ ಹಾಗೂ ಕಾವೇರಿ ವಿದ್ಯುತ್ ಪೂರೈಕೆಯನ್ನು ಜಾರಿಗೆ ತಂದವರು ನಾಲ್ವಡಿ ಕೃಷ್ಣರಾಜೇಂದ್ರ ಒಡೆಯರು. ಅವರ ಆಡಳಿತಾವಧಿ (1902 ರಿಂದ 1940) ಮೈಸೂರು ಇತಿಹಾಸದ 'ಸುವರ್ಣಯುಗ' ಎಂದು ಕರೆಯಲಾಗುತ್ತದೆ ಎಂದರು.

ಮುಖ್ಯವಾಗಿ ದೊಡ್ಡಬಳ್ಳಾಪುರಕ್ಕೆ ವಿದ್ಯುತ್ ಶಕ್ತಿ ತಂದುಕೊಟ್ಟ ಗೌರವವೂ ಅವರಿಗೆ ಸಲ್ಲುತ್ತದೆ. ಆದ್ದರಿಂದ ಅವರ ಜಯಂತಿಯನ್ನು ನಮ್ಮ ಸಂಘಟನೆ ವತಿಯಿಂದ ಆಚರಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಅರವಿಂದಪ್ಪ, ರಾಜ್ಯ ಮುಖಂಡ ಪಿ. ವಾಸು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ತಾಯೇಗೌಡ, ಜಿಲ್ಲಾ ಯುವ ಘಟಕದ ಅಧ್ಯಕ್ಷ ರಂಜಿತ್ ಗೌಡ, ಜಿಲ್ಲಾ ಕಾರ್ಯದರ್ಶಿ ಪ್ರದೀಪ್ ಕುಮಾರ್, ತಾಲೂಕು ಉಪಾಧ್ಯಕ್ಷ ಅಂಬರೀಶ್, ತಾಲೂಕು ಕಾರ್ಯಘಟಕದ ಅಧ್ಯಕ್ಷ ಶಿವಶಂಕರ್ ರೆಡ್ಡಿ ಸೇರಿದಂತೆ ವೇದಿಕೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# “ಯುಬಿ೧೦೦” ಅಭಿಯಾನಕ್ಕೆ ಚಾಲನೆ



ಬೆಂಗಳೂರು

ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಕರ್ನಾಟಕ ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ “ಯುಬಿ100” ವಿಶೇಷ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಬ್ಯಾಟರಾಯನಪುರ ವಾರ್ಡ್ ಸಂಖ್ಯೆ-07ರ ಔಟರ್ ರಿಂಗ್ ರಸ್ತೆಯ ವೆಂಕಟಂ ಕಫೆ ಸಮೀಪದ ರಾಜಕಾಲುವೆ ಪ್ರದೇಶದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ನಗರ ಪಾಲಿಕೆಯ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರು ಗಿಡ ನೆಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಬಳಿಕ ನಡೆದ ಸಿಗ್ನೇಚರ್ ಕ್ಯಾಂಪೇನ್‌ನಲ್ಲಿ ಸ್ಥಳೀಯ ನಿವಾಸಿಗಳೊಂದಿಗೆ ಸಹಿ ಹಾಕುವ ಮೂಲಕ ಅಭಿಯಾನಕ್ಕೆ ಬೆಂಬಲ ಸೂಚಿಸಿದ ಅವರು, ಸ್ಥಳ ಪರಿಶೀಲನೆಯನ್ನೂ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಆಯುಕ್ತರು, “ನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಕಸ ವಿಲೇವಾರಿ ಸಮಸ್ಯೆ ಇರುವ ಪ್ರದೇಶಗಳನ್ನು ಶಾಶ್ವತವಾಗಿ ನಿವಾರಣೆ ಮಾಡುವ ಉದ್ದೇಶದಿಂದ ಈ ವಿಶೇಷ ಅಭಿಯಾನ ರೂಪಿಸಲಾಗಿದೆ. ಕಳೆದ ಹಲವು ದಿನಗಳಿಂದ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳೊಂದಿಗೆ ಸಮಾಲೋಚನೆ ನಡೆಸಿ ಯೋಜನೆ ಸಿದ್ಧಪಡಿಸಲಾಗಿದೆ” ಎಂದು ತಿಳಿಸಿದರು.

ಮುಂದಿನ 45 ದಿನಗಳಲ್ಲಿ 100 ಕಸ ಹಾಟ್‌ಸ್ಪಾಟ್‌ಗಳನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸಿ, ಅವುಗಳನ್ನು ಸ್ವಚ್ಛ ಹಾಗೂ ಸುಂದರ ಸಾರ್ವಜನಿಕ ಸ್ಥಳಗಳಾಗಿ ಪರಿವರ್ತಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಅಭಿಯಾನದ ಯಶಸ್ಸಿಗೆ ಸಹಕರಿಸುತ್ತಿರುವ ಪಾಲಿಕೆಯ ಅಧಿಕಾರಿಗಳು, ಸಿಬ್ಬಂದಿಗಳು, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು, ಸ್ವಯಂಸೇವಾ ಸಂಸ್ಥೆಗಳು ಹಾಗೂ ವಿವಿಧ ನಾಗರಿಕ ಸಂಘಟನೆಗಳಿಗೆ ಅವರು ಕೃತಜ್ಞತೆ ಸಲ್ಲಿಸಿದರು.

“ಯುಬಿ100” ಅಭಿಯಾನದಡಿ ನಗರದಲ್ಲಿನ 100 ಕಸ ಹಾಟ್‌ಸ್ಪಾಟ್‌ಗಳನ್ನು ಗುರುತಿಸಿ, ಅವುಗಳನ್ನು ಸಂಪೂರ್ಣ ಸ್ವಚ್ಛಗೊಳಿಸಿ ಸಾರ್ವಜನಿಕ ಸ್ನೇಹಿ ಹಾಗೂ ಪರಿಸರ ಸ್ನೇಹಿ ಸ್ಥಳಗಳಾಗಿ ಅಭಿವೃದ್ಧಿಪಡಿಸುವ ಕಾರ್ಯ ಕೈಗೊಳ್ಳಲಾಗುತ್ತದೆ.

# ಆಟೋ ಮಗುಚಿ ಇಬ್ಬರು ಸಾವು

ಚಾಮರಾಜನಗರ

ಆಟೋ ಮಗುಚಿ ಸ್ಥಳದಲ್ಲೇ ಇಬ್ಬರು ಸಾವನ್ನಪ್ಪಿದ ಘಟನೆ ಕೊಳ್ಳೇಗಾಲ ತಾಲೂಕಿನ ನರಿಪುರ-ಮಧುವನಹಳ್ಳಿ ಬೈಪಾಸ್ ಮುಖ್ಯರಸ್ತೆಯಲ್ಲಿ ನಡೆದಿದೆ.

ಮೃತ ವ್ಯಕ್ತಿಯನ್ನು ಬೆಂಗಳೂರು ರಾಜಗೋಪಾಲನಗರ ನಿವಾಸಿ ಮನೋಜ್ ಎಂದು ಗುರುತಿಸಲಾಗಿದೆ. ಮತ್ತೊಬ್ಬರ ಗುರುತು ಪತ್ತೆಯಾಗಿಲ್ಲ. ಲಕ್ಷ್ಮಿಕಾಂತ್ ಎಂಬ ವ್ಯಕ್ತಿಗೆ ಸಣ್ಣಪುಟ್ಟ ಗಾಯಗಳಾಗಿದೆ ಎಂದು ತಿಳಿದು ಬಂದಿದೆ.

ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ನರಿಪುರ-ಮಧುವನಹಳ್ಳಿ ಬೈಪಾಸ್ ಮುಖ್ಯ ರಸ್ತೆಯಲ್ಲಿರುವ ಮಧುವನಹಳ್ಳಿ ಪ್ರದೀಪ್ ಎಂಬವರ ಜಮೀನಿನ ಹತ್ತಿರ ಘಟನೆ ನಡೆದಿದೆ.

ಅಪಘಾತದ ವಿಷಯ ತಿಳಿಯುತ್ತಿದ್ದಂತೆ ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಯ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಗಾಯಗೊಂಡ ಲಕ್ಷ್ಮಿಕಾಂತ್ ಎಂಬ ವ್ಯಕ್ತಿಯನ್ನು ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ಸೇರಿಸಲಾದೆ.

ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಯ ಪಿಎಸ್‌ಐ ಚೆಲುವರಾಜು ಹಾಗೂ ಸರ್ಕಲ್ ಇನ್‌ಸ್ಪೆಕ್ಟರ್ ರವೀಂದ್ರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ‘ಗಿಡ ಬೆಳೆಸೋಣ ಪರಿಸರ ಸಂರಕ್ಷಣೆಗೆ ಪಣತೊಡೋಣ’

ಕೋಲಾರ

ಪ್ರತಿ ವಿದ್ಯಾರ್ಥಿಗೊಂದು ಗಿಡ ಎಂಬ ಧ್ಯೇಯವಾಕ್ಯದೊಂದಿಗೆ ಪರಿಸರ ಸಂರಕ್ಷಣೆಗೆ ಮಕ್ಕಳು ಪಣತೊಡಬೇಕು, ಶಾಲೆಯ ಪರಿಸರವನ್ನು ಮತ್ತಷ್ಟು ಹಸಿರಾಗಿಸಬೇಕು ಎಂದು ತಾಲ್ಲೂಕಿನ ಅರಾಭಿಕೊತ್ತನೂರು ಸರ್ಕಾರಿ ಪ್ರೌಢಶಾಲೆ ಮುಖ್ಯಶಿಕ್ಷಕಿ ತಾಹೇರಾ ನುಸ್ರತ್ ಕರೆ ನೀಡಿದರು.

ಶಾಲೆಯ ಆವರಣದಲ್ಲಿ ಶಾಲೆಯ ಪರಿಸರ ಕ್ಲಬ್ ವತಿಯಿಂದ ಗಿಡಗಳನ್ನು ನೆಡುವ ಮೂಲಕ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಂತರ ಅವರು ಮಾತನಾಡುತ್ತಿದ್ದರು.

ಪರಿಸರ ಸಂರಕ್ಷಣೆ ಯಾರೋ ಮಾಡಲಿ ಎಂದು ಯೋಚಿಸುವುದು ತಪ್ಪು, ಜೀವನ ಮತ್ತು ನೆಮ್ಮದಿ ನಾಶ ತಪ್ಪಿಸಲು ಪರಿಸರ ಸಂರಕ್ಷಿಸುವ ಸಂಕಲ್ಪ ಮಾಡೋಣ, ಗಿಡಮರಗಳನ್ನು ಪೋಷಿಸೋಣ ಎಂದು



ಕಿವಿಮಾತು ಹೇಳಿದರು.

ಪರಿಸರ ಎಂದರೆ ಗಿಡ,ಮರ ಮಾತ್ರವಲ್ಲ, ಭೂಮಿ, ಜೀವಿಗಳು ಎಲ್ಲವೂ ಪರಿಸರದ ಭಾಗವೇ ಎಂದ ಅವರು, ಮುಂದಿನ ಪೀಳಿಗೆಗೆ ಪರಿಸರ,ಭೂಮಿ ಉಳಿಸಲು ಪರಿಸರಮಾಲಿನ್ಯ ಮುಕ್ತ ನವಸಮಾಜದ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು, ಪ್ಲಾಸ್ಟಿಕ್ ಬಳಕೆ ನಿಲ್ಲಿಸಬೇಕು ಎಂದರು.

ಪ್ಲಾಸ್ಟಿಕ್ ಅತಿಯಾದ ಬಳಕೆಯಿಂದಾಗಿ ಅದು ಭೂಮಿಯಲ್ಲಿ ಕೊಳೆಯದ ಕಾರಣ ಭೂಮಿ ಮಾಲಿನ್ಯವಾಗುತ್ತಿದೆ, ಅದನ್ನು ತಿಂದ ದನಕರು, ಪ್ರಾಣಿಗಳಿಗೂ ಮಾರಕವಾಗುತ್ತಿದೆ ಆದ್ದರಿಂದ ಪ್ರತಿಯೊಬ್ಬರೂ ಮನೆಯಿಂದ ಹೊರ ಹೋಗುವಾಗ ಬಟ್ಟೆಯ ಕೈಚೀಲ ಬಳಸುವ ಮೂಲಕ ಪ್ಲಾಸ್ಟಿಕ್‌ಅನ್ನು ಸಾಧ್ಯವಾದಷ್ಟು ಬಳಸದಿರಲು ಪ್ರತಿಜ್ಞೆ ಸ್ವೀಕರಿಸಿ ಎಂದು ಸಲಹೆ ನೀಡಿದರು.

ಶಾಲೆಯ ಪರಿಸರ ಕ್ಲಬ್ ಅಧ್ಯಕ್ಷೆ ಶಿಕ್ಷಕಿ ಶ್ವೇತಾ ಮಾತನಾಡಿ, ಪರಿಸರ ನಾಶ ಮುಂದುವರೆದರೆ ಮುಂದೊಂದು ದಿನ ಆಮ್ಲಜನಕ ಸಿಗದೇ ಉಸಿರಾಡಲು ತೊಂದರೆಯಾದೀತು ಎಂದು ಎಚ್ಚರಿಸಿದ ಅವರು, ಶಾಲೆಯ ಆವರಣದಲ್ಲಿ ಸ್ವಚ್ಛತೆ ಕಪಾಡುವುದು ಸಹಾ ಪರಿಸರ ಸಂರಕ್ಷಣೆಯ ಒಂದು ಭಾಗವೇ ಎಂದರು.

ಶಿಸ್ತು ಇರುವೆಡೆ ಸ್ವಚ್ಛತೆಯೂ ಇರುತ್ತದೆ, ಮಕ್ಕಳಿಗೆ ಪ್ರತಿನಿತ್ಯ ಐದು ನಿಮಿಷ ಪರಿಸರದ ಪ್ರಾಮುಖ್ಯತೆ ಕುರಿತು ತಿಳಿ ಹೇಳಿದರೆ ಅವರಿಂದ ಪರಿಸರ ವೈವಿಧ್ಯತೆ ಉಳಿಸುವ ನಿಟ್ಟಿನಲ್ಲಿ ಮನಃಪರಿವರ್ತನೆಯಾಗಿ ಅವರಿಂದಲೇ ಮನೆ,ಹಳ್ಳಿಯಲ್ಲೂ ಪರಿಸರ ರಕ್ಷಣೆಗೆ ಮಾರ್ಗದರ್ಶನವಾಗುತ್ತದೆ ಆದ್ದರಿಂದ ಮಕ್ಕಳು ಶಾಲೆ, ಮನೆ, ಮನಸ್ಸು ಸ್ವಚ್ಛತೆಯ ಸಂಕಲ್ಪ ಮಾಡಬೇಕು ಎಂದರು.

ನಮ್ಮ ಅರಾಭಿಕೊತ್ತನೂರು ಶಾಲೆ ಬೆಟ್ಟದ ತಪ್ಪಲಲ್ಲಿ ಹಸಿರು ಸಿರಿಯ ನಡುವೆ ಇದ್ದು, ಪರಿಸರ ರಕ್ಷಣೆಗೆ ಮಾದರಿಯಾಗಿದೆ ಎಂದು ತಿಳಿಸಿ, ಪರಿಸರ ಜಾಗೃತಿ ಹಾಗೂ ಸಂರಕ್ಷಣೆಯ ಪ್ರತಿಜ್ಞಾವಿಧಿ ಬೋಧಿಸಿ, ಪರಿಸರ ಉಳಿಸುವ ಕಾಯಕದಲ್ಲಿ ಪ್ರತಿಯೊಬ್ಬರೂ ಕೈಜೋಡಿಸೋಣ ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಸಿದ್ದೇಶ್ವರಿ, ಎಂ.ಆರ್.ಗೋಪಾಲಕೃಷ್ಣ, ಭವಾನಿ, ವೆಂಕಟರೆಡ್ಡಿ, ಶ್ವೇತಾ, ಸುಗುಣಾ, ಶ್ರೀನಿವಾಸಲು ರಮಾದೇವಿ, ಚೈತ್ರಾ ಸೇರಿದಂತೆ ಪೋಷಕರು ಹಾಜರಿದ್ದರು.

# ‘ಹಸಿರೇ ಉಸಿರು; ಉಸಿರಿಗಾಗಿ ಹಸಿರು ಪರಿಸರ ಸಂರಕ್ಷಿಸಿ’

ತುಮಕೂರು

ಪ್ರತಿ ವರ್ಷ ಜೂನ್ 5ರಂದು ಆಚರಿಸಲಾಗುವ ವಿಶ್ವ ಪರಿಸರ ದಿನವು ಪ್ರಕೃತಿ ಸಂರಕ್ಷಣೆ ಮತ್ತು ಪರಿಸರ ಜಾಗೃತಿಯನ್ನು ಹೆಚ್ಚಿಸುವ ವಿಶ್ವ ಸಂಸ್ಥೆಯ ಅತಿ ದೊಡ್ಡ ಅಂತರಾಷ್ಟ್ರೀಯ ಅಭಿಯಾನವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಹಾಗೂ ಜಿಲ್ಲಾ ಬಾಲಭವನ ಸಮಿತಿ ಕಾರ್ಯದರ್ಶಿಗಳಾದ ಡಾ. ಎಸ್. ಸಿದ್ದರಾಮಣ್ಣ ತಿಳಿಸಿದರು.

ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸಮಿತಿ ತುಮಕೂರು ಇವರ ಸಹಯೋಗದಲ್ಲಿ ಜಿಲ್ಲಾ ಬಾಲಭವನದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು.

ಮಾಲಿನ್ಯ ನಿಯಂತ್ರಣ ಮತ್ತು ಜೀವವೈವಿಧ್ಯ ಸಂರಕ್ಷಣೆಗಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ಹವಾಮಾನ ಬದಲಾವಣೆ, ಪ್ಲಾಸ್ಟಿಕ್ ಮಾಲಿನ್ಯ ಹಾಗೂ



ಅರಣ್ಯ ನಾಶದಂತಹ ಗಂಭೀರ ಸಮಸ್ಯೆಗಳ ಕುರಿತು ಮಕ್ಕಳಿಗೆ ಅರಿವು ಮೂಡಿಸಬೇಕು. ಗಿಡಗಳನ್ನು ನೆಡುವುದರ ಜೊತೆಗೆ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ ಹಾಗೂ ಪರಿಸರ ಸ್ನೇಹಿ ಜೀವನಶೈಲಿಯನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ದಿನೇಶ್ ಆರ್.ಎಂ ಮಾತನಾಡಿ, ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ಮತ್ತು ಪ್ರಮಾಣ ಪತ್ರ ನೀಡಲಾಗುತ್ತಿದ್ದು, ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಪ್ರಶಂಸನಾ ಪತ್ರಗಳನ್ನು ವಿತರಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಶುಭ ಹಾರೈಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ರಘುಚಂದ್ರ ಕೆ. ಮಾತನಾಡಿ, ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಮಕ್ಕಳಿಗೆ ಚಿತ್ರಕಲೆ ಸ್ಪರ್ಧೆ ಆಯೋಜಿಸಿರುವುದು ಪರಿಸರ ಜಾಗೃತಿ ಮೂಡಿಸುವ ಉತ್ತಮ ವೇದಿಕೆಯಾಗಿದೆ. ಮಕ್ಕಳು ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಬಾಲಭವನ ವತಿಯಿಂದ ಮುಂದಿನ ತಿಂಗಳುಗಳಲ್ಲಿಯೂ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸಬೇಕು ಎಂದು ಕರೆ ನೀಡಿದರು.

ಚಿತ್ರಕಲೆ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ, ತೃತೀಯ ಹಾಗೂ ಸಮಾಧಾನಕರ ಸ್ಥಾನ ಪಡೆದ ಮಕ್ಕಳಿಗೆ ಬಹುಮಾನ ಮತ್ತು ಪ್ರಮಾಣ ಪತ್ರ ವಿತರಿಸಲಾಯಿತು. ಜೊತೆಗೆ ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಪ್ರಶಂಸನಾ ಪತ್ರ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಾದ ಅಂಬಿಕಾ, ಜಿಲ್ಲಾ ನಿರೂಪಣಾಧಿಕಾರಿ ಅನುಷ, ಜಿಲ್ಲಾ ಬಾಲಭವನ ಸಮಿತಿ ವ್ಯವಸ್ಥಾಪಕ ಚಿದಾನಂದ ಮೂರ್ತಿ, ತೀರ್ಪುಗಾರರಾದ ಸೌಮ್ಯ, ಹರಿಣಿ, ಮಮತಾ ಪಿ., ಕಾರ್ಯಕ್ರಮ ಸಂಯೋಜಕಿ ಶಿಲ್ಪ ಜಿ.ಎಸ್., ಕಾರ್ಯಕ್ರಮ ಸಹಾಯಕರು ಹಾಗೂ ವಿವಿಧ ಶಾಲೆಗಳ ಮಕ್ಕಳು, ಶಿಕ್ಷಕರು ಮತ್ತು ಪೋಷಕರು ಉಪಸ್ಥಿತರಿದ್ದರು.



ವಿಶ್ವ ಪರಿಸರ ದಿನಾಚರಣೆ"ಯ ಪ್ರಯುಕ್ತ, ಡಾ.ಪ್ರವೀಣ್.ಪಿ. ಬಾಗೇವಾಡಿ ಐ.ಎ.ಎಸ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್, ಕೋಲಾರ ರವರ ಅಧ್ಯಕ್ಷತೆಯಲ್ಲಿ ಬಂಗಾರಪೇಟೆ ತಾಲೂಕಿನ ಚಿಕ್ಕಅಂಕಂಡಹಳ್ಳಿ ಗ್ರಾಮ ಪಂಚಾಯತಿಯ ಹುದುಕುಳ ಗ್ರಾಮದ ಪ್ರೌಢಶಾಲೆ ಆವರಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಗಿಡ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಭಾಗವಹಿಸಿದ್ದರು.

# ಡಿಪ್ಲೋಮಾ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಕೋಲಾರ

ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಥಮ ಸೆಮಿಸ್ಟರ್‌ನ ಡಿಪ್ಲೋಮಾ ಕೋರ್ಸಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕೆ.ಜಿ.ಎಫ್ ಕೋರಮಂಡಲ ಪಾಲಿಟೆಕ್ನಿಕ್ ಸರ್ಕಾರಿ ಗಣಿ ಶಿಕ್ಷಣ ಶಾಲೆಯಲ್ಲಿ (ಕಾಲೇಜ್ ಕೋಡ್: 131) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸಗಳಿಗೆ (ಮೈನಿಂಗ್ ಇಂಜಿನಿಯರಿಂಗ್, ಮೆಕ್ಯಾನಿಕಲ್ ಇಂಜಿನಿಯರಿಂಗ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಹಾಗೂ ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್) ಅರ್ಹ ಅಭ್ಯರ್ಥಿಗಳಿಂದ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಆಫ್‌ಲೈನ್ ಮುಖಾಂತರ ಸೀಟು ಹಂಚಿಕೆ ಪ್ರವೇಶಾತಿ ಪಡೆಯಬಹುದು.

ಅರ್ಹ ಅಭ್ಯರ್ಥಿಗಲು ಜೂನ್ 30 ರೊಳಗೆ ಸೂಕ್ತ ದಾಖಲಾತಿಗಳೊಂದಿಗೆ ಈ ಸಂಸ್ಥೆಗೆ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದು. ಅರ್ಜಿ ನಮೂನೆ ಮತ್ತು ಹೆಚ್ಚಿನ ಮಾಹಿತಿಗಾಗಿ ಈ ಸಂಸ್ಥೆಯ ಸಿಬ್ಬಂದಿ ವರ್ಗದ ಲಕ್ಷ್ಮಿಕಾಂತ ಸಿ.ಹೆಚ್-9019630841, ಎಲ್.ರಾಜನ್-9449527575, ಚಂದನ್ ಜೆ-9738241333, ಮುನಿಕೃಷ್ಣಪ್ಪ ಎಂ.ಇ-9740500194, ರಾಜೇಂದ್ರ ಕುಮಾರ್ ಕೆ.ಎನ್-9448182696 ಹಾಗೂ ಕೆ.ಶಿವಶಂಕರ್-9902722822ಯನ್ನು ಸಂಪರ್ಕಿಸಬಹುದೆಂದು ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಮಲಿಂಗಾರೆಡ್ಡಿ ಮನವೊಲಿಸಲು ಯತ್ನ

ಬೆಂಗಳೂರು

ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವ ರಾಮಲಿಂಗಾರೆಡ್ಡಿ ಅವರನ್ನು ಸಿಎಂ ಡಿ.ಕೆ.ಶಿವಕುಮಾರ್ ಭೇಟಿಯಾಗಿದ್ದಾರೆ.

ಕೋರಮಂಗಲದ ಖಾಸಗಿ ಹೋಟೆಲ್‌ನಲ್ಲಿ ರಾಮಲಿಂಗಾರೆಡ್ಡಿಯನ್ನು ಸಿಎಂ ಭೇಟಿ ಮಾಡಿದ್ದಾರೆ. ಖುದ್ದು ಮನವೊಲಿಕೆಗೆ ಪ್ರಯತ್ನಿದ್ದಾರೆ.

ಇದಕ್ಕೂ ಮೊದಲು ಮಾಧ್ಯಮದವರೊಂದಿಗೆ ಮಾತನಾಡಿದ ರಾಮಲಿಂಗಾರೆಡ್ಡಿ, ಹೈಕಮಾಂಡ್ ಅವರು ಯಾರೂ ನನ್ನನ್ನು ಸಂಪರ್ಕ ಮಾಡಿಲ್ಲ. ನಾನು ಸಿಗೋಕೆ ಊರಲ್ಲಿ ಇರಲಿಲ್ಲ. ತಮಿಳುನಾಡಿನ ಧರ್ಮಪುರಿಗೆ ಸಮಾರಂಭಕ್ಕೆ ಹೋಗಿದ್ದೆ. ಖಾತೆ ವಿಚಾರವಾಗಿ ನನಗೆ ಗೊತ್ತಿಲ್ಲ ಎಂದು ಪ್ರತಿಕ್ರಿಯಿಸಿದ್ದರು.

ತಾವು ಬಯಸಿದ ಖಾತೆಯನ್ನು ಬಿಟ್ಟು ಬೇರೆ ಖಾತೆ ಕೊಟ್ಟಿದ್ದಾರೆಂದು ಬೇಸರಗೊಂಡು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

# ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ನ್ಯಾಯಾಲಯ ಆವರಣದಲ್ಲಿ ಗಿಡ ನಾಟಿ

ಮುಳಬಾಗಿಲು

ವಿಶ್ವ ಪರಿಸರ ದಿನವನ್ನು ಪ್ರತಿವರ್ಷ ಜೂನ್ 5ರಂದು ಆಚರಿಸಲಾಗುತ್ತಿದ್ದು, ಪರಿಸರ ಸಂರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಗೌಡ ಜಗದೀಶ್ ರುದ್ರೆ ಹೇಳಿದರು.

ನಗರದ ನ್ಯಾಯಾಲಯ ಆವರಣದಲ್ಲಿ ಶುಕ್ರವಾರ ತಾಲೂಕು ಕಾನೂನು ಸೇವೆಗಳ ಸಮಿತಿ, ತಾಲೂಕು ವಕೀಲರ ಸಂಘ ಹಾಗೂ ವಲಯ ಅರಣ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ




ಪರಿಸರ ದಿನಾಚರಣೆ ಅಂಗವಾಗಿ ಗಿಡ ನಾಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿಶ್ವ ಪರಿಸರ ದಿನವು ಪರಿಸರ ಕ್ರಿಯಾಶೀಲತೆಗೆ ಅತ್ಯಂತ ಮಹತ್ವದ ದಿನವಾಗಿದ್ದು, ಜಿನೀವಾ ಪರಿಸರ ಜಾಲ ಒಪ್ಪಂದದಂತೆ 1973ರಿಂದ ಪ್ರತಿ ವರ್ಷ ಜೂನ್ 5ರಂದು ಆಚರಿಸಲಾಗುತ್ತಿದೆ. ಪರಿಸರ ಸಂರಕ್ಷಣೆ ಮತ್ತು ನೈಸರ್ಗಿಕ ಸಂಪನ್ಮೂಲಗಳ ಉಳಿವಿನ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಅಗತ್ಯ ಇಂದಿನ ದಿನಗಳಲ್ಲಿ ಹೆಚ್ಚಾಗಿದೆ ಎಂದು ತಿಳಿಸಿದರು.

ಉಸಿರಾಡುವ ಗಾಳಿ, ಕುಡಿಯುವ ನೀರು ಭೂಮಿಯನ್ನು ಹಸಿರುಗೊಳಿಸುವ ಸಸಿಗಳನ್ನು ನೆಟ್ಟು ಸಂರಕ್ಷಿಸುವ ಮೂಲಕ ಪರಿಸರ ಉಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು.

ತಾಲೂಕು ವಕೀಲರ ಸಂಘದ ಅಧ್ಯಕ್ಷ ಪಿ. ಸದಾಶಿವಯ್ಯ ಮಾತನಾಡಿ, ಪರಿಸರ ಸಂರಕ್ಷಣೆಗಾಗಿ ಗಿಡಮರಗಳನ್ನು ಅನಾವಶ್ಯಕವಾಗಿ ಕಡಿದು ಹಾಳು ಮಾಡುವ ಪ್ರವೃತ್ತಿ ನಿಲ್ಲಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಲಯ ಅರಣ್ಯಾಧಿಕಾರಿ ಶಾಲಿನಿ, ತಾಲೂಕು ವಕೀಲರ ಸಂಘದ ಉಪಾಧ್ಯಕ್ಷ ಡಿ.ವಿ. ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ಎಂ. ರಮೇಶ್, ಕಾರ್ಯಕಾರಿ ಸಮಿತಿ ಸದಸ್ಯ ಸಿ. ಸುಬ್ರಮಣ್ಯಂ, ವಕೀಲರಾದ ನಟರಾಜ್, ಜಯರಾಂ, ವೆಂಕಟೇಶ್, ರಂಜಿತ್, ರಾಜಕುಮಾರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಲೋಪ ಇಲ್ಲದಂತೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸೂಚನೆ

ತುಮಕೂರು

ಮುಖ್ಯ ಚುನಾವಣಾ ಆಯೋಗದ ಆದೇಶದಂತೆ ಮತದಾರರ ಪಟ್ಟಿ ವಿಶೇಷ ಸಮಗ್ರ ತೀವ್ರ ಪರಿಷ್ಕರಣೆ-2026 (ಎಸ್‌ಐಆರ್) ಕಾರ್ಯ ನಡೆಯುತ್ತಿದ್ದು, ಮತಗಟ್ಟೆ ಅಧಿಕಾರಿಗಳು (ಬಿಎಲ್‌ಓ) ಯಾವುದೇ ಲೋಪದೋಷ ಇಲ್ಲದಂತೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಮಾಡಬೇಕು ಎಂದು ಉಪವಿಭಾಗಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿ ನಹೀದಾ ಜಮ್ ಜಮ್ ಸೂಚನೆ ನೀಡಿದರು.

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಸಬಾ ಪೂರ್ವ, ಕಸಬಾ ಪಶ್ಚಿಮ, ಕಸಬಾ, ಉತ್ತರ, ಗೂಳೂರು ಹೋಬಳಿ, ಹೆಬ್ಬೂರು, ಊರ್ಡಿಗೆರೆ, ಬೆಳ್ಳಾವಿ ಹೋಬಳಿವಾರು ಮತಗಟ್ಟೆ ಅಧಿಕಾರಿಗಳು (ಬಿಎಲ್‌ಓ) ಹಾಗೂ ಮತಗಟ್ಟೆ ಅಧಿಕಾರಿಗಳ ಮೇಲ್ವಿಚಾರಕರಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಈ ಪ್ರಕ್ರಿಯೆ ದೇಶದಲ್ಲಿ ಇದೇ ಮೊದಲಲ್ಲ.



ಕರ್ನಾಟಕದಲ್ಲಿ ಕೂಡ 2002ರಲ್ಲಿ ಸಮಗ್ರ ಪರಿಷ್ಕರಣೆ ಆಗಿದ್ದು, ಈಗ 2026ರಲ್ಲಿ ಮಾಡಲಾಗುತ್ತಿದೆ. ಇದು ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ರಾಜ್ಯದ ಎಲ್ಲ ಜಿಲ್ಲಾ ಚುನಾವಣಾಧಿಕಾರಿಗಳಿಗೆ ತರಬೇತಿ ನೀಡಿದ್ದು, ಅದರಂತೆ ತುಮಕೂರು ಜಿಲ್ಲೆಯಲ್ಲಿ ಕೂಡ ಈ ಪ್ರಕ್ರಿಯೆ ನಡೆಯುತ್ತಿದೆ ಎಂದರು.

ಮತಗಟ್ಟೆ ಅಧಿಕಾರಿಗಳು ಪ್ರತಿ ಮನೆ ಮನೆಗೂ ಭೇಟಿ ನೀಡಿ ಗಣತಿ ನಮೂನೆಯನ್ನು ಕೊಟ್ಟು ಭರ್ತಿ ಮಾಡಿಸಬೇಕು.

ನಂತರ ಆ ಮನೆಯವರು ಭರ್ತಿ ಮಾಡಿದ ಬಳಿಕ ನಮೂನೆಯನ್ನು ಪಡೆದು ಅಪ್‌ಲೋಡ್ ಮಾಡಬೇಕು ಎಂದು ತಿಳಿಸಿದರು.

ಯಾವುದೇ ಒಬ್ಬ ಅರ್ಹ ಮತದಾರರು ಮತಪಟ್ಟಿಯಿಂದ ಹೊರ ಗುಳಿಯಬಾರದು, ಅನರ್ಹರ ಹೆಸರು ಮತಪಟ್ಟಿಯಲ್ಲಿ ಸೇರಿರಬಾರದು ಎಂಬುದು ಎಸ್‌ಐಆರ್ ಪ್ರಮುಖ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಜನಸಾಮಾನ್ಯರಲ್ಲಿ ಎಸ್‌ಐಆರ್ ಮಾಡಿದರೆ ನಮ್ಮ ಮತದಾನದ ಹಕ್ಕು ಹೋಗುತ್ತದೆ ಎಂಬ ಭಯ ಇದೆ. ಅವರಿಗೆ ಎಸ್‌ಐಆರ್ ಉದ್ದೇಶವನ್ನು ಮನವರಿಕೆ ಮಾಡಿಕೊಟ್ಟು ಎಸ್‌ಐಆರ್ ಬಗ್ಗೆ ಇರುವ ಭಯವನ್ನು ಅವರ ಮನಸ್ಸಿನಿಂದ ತೆಗೆದು ಹಾಕಬೇಕು ಎಂದರು.

2026ರ ವಿಶೇಷ ಸಮಗ್ರ ತೀವ್ರ ಪರಿಷ್ಕರಣೆ ಕುರಿತು 2002ರ ಮತದಾರರ ಪಟ್ಟಿಯಲ್ಲಿರುವ ಮತದಾರರನ್ನು 2005ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮಾಡಬೇಕು ಎಂದು ಅವರು ತಿಳಿಸಿದರು.

2002ರ ಮತದಾರರ ಪಟ್ಟಿಗೆ ಮತದಾರರು ಮ್ಯಾಪಿಂಗ್ ಆಗಿದ್ದಾರೆ ಎಂಬುದನ್ನು ಮೊದಲು ಖಚಿತಪಡಿಸಿಕೊಳ್ಳಬೇಕು. ಯಾರು ಮ್ಯಾಪಿಂಗ್ ಆಗಿಲ್ಲವೋ ಅಂತಹವರನ್ನು ಮೊದಲು ಮ್ಯಾಪಿಂಗ್ ಮಾಡುವುದು ಬಹಳ ಮುಖ್ಯವಾಗಿರುತ್ತದೆ ಎಂದು ತಿಳಿಸಿದರು.

ಪ್ರತಿ ಮತಗಟ್ಟೆ ಅಧಿಕಾರಿಗಳು (ಬಿಎಲ್‌ಓ) ತಮ್ಮ ವ್ಯಾಪ್ತಿಯಲ್ಲಿ ಎಷ್ಟು ಮತದಾರರಿದ್ದಾರೆ. ಎಷ್ಟು ಮನೆಗಳು ಬರುತ್ತವೆ ಎಂಬ ಮಾಹಿತಿಗಳನ್ನು ಕಲೆ ಹಾಕಬೇಕು. ನಂತರ ಪ್ರತಿ ಮನೆಗಳಿಗೆ ಭೇಟಿ ನೀಡಿ ಅರ್ಜಿ ನಮೂನೆಯನ್ನು ನೀಡಿ ಭರ್ತಿ ಮಾಡಿಸಿ ಪಡೆದುಕೊಳ್ಳಬೇಕು ಎಂದು ಹೇಳಿದರು.

ಹೊಸ ಮತದಾರರ ನೋಂದಣಿ ಅಥವಾ ವರ್ಗಾವಣೆ ಸಂದರ್ಭದಲ್ಲಿ ನಮೂನೆ 6/8 ತುಂಬುವುದಾದಲ್ಲಿ ಚುನಾವಣಾ ಆಯೋಗ ನಿರ್ದಿಷ್ಟಪಡಿಸಿರುವ 12 ದಾಖಲೆಗಳಲ್ಲಿ ಒಂದನ್ನು ಘೋಷಣಾ ನಮೂನೆಯೊಂದಿಗೆ ಸ್ವಯಂ ದೃಢೀಕರಿಸಿ ಸಲ್ಲಿಸುವುದು ಕಡ್ಡಾಯವಾಗಿದೆ ಎಂದರು.

ಒಂದು ಬಾರಿ ಮತದಾರರ ಮನೆಗೆ ಭೇಟಿ ನೀಡಿ ನಮೂನೆ ಕೊಟ್ಟ ನಂತರ ಮತ್ತೆ ಆ ಮನೆಗೆ ನಮೂನೆ ಕೊಡಲು ಅವಕಾಶ ಇರುವುದಿಲ್ಲ. ಹಾಗಾಗಿ ನಮೂನೆಯನ್ನು ಕೊಡುವಾಗಲೇ ಮತದಾರರಿಗೆ ನಮೂನೆ ಕಳೆಯದಂತೆ ಅಥವಾ ಹರಿಯದಂತೆ ನೋಡಿಕೊಳ್ಳುವಂತೆ ತಿಳಿಸಬೇಕು ಎಂದು ಹೇಳಿದರು.

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ 211799 ಮತದಾರರಿದ್ದು, ಇದುವರೆಗೂ 20,2658 ಮತದಾರರನ್ನು ಬಿಎಲ್‌ಓ ಆಪ್ ಮೂಲಕ ಮ್ಯಾಪಿಂಗ್ ಮಾಡಲಾಗಿದೆ.

ಈವರೆವಿಗೆ ಶೇ. 95.68 ರಷ್ಟು ಪ್ರಗತಿಯಾಗಿದೆ. ಬಾಕಿ ಇರುವ ಮತದಾರರ ಹೆಸರುಗಳನ್ನು ಮ್ಯಾಪಿಂಗ್ ಮಾಡಬೇಕಾಗಿದೆ ಎಂದು ತಿಳಿಸಿದರು.

ಈಗಾಗಲೇ ಚುನಾವಣಾ ಆಯೋಗ ಎಲ್ಲಾ ಬಿಎಲ್‌ಓ ಗಳ ಮಾಹಿತಿಯನ್ನು ಪಡೆದುಕೊಂಡಿದೆ. ಆದ್ದರಿಂದ ಯಾರೂ ಸಹ ನಿರ್ಲಕ್ಷ್ಯ ವಹಿಸದೆ ಪ್ರಾಮಾಣಿಕವಾಗಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಮಾಡಬೇಕು. ಒಂದು ವೇಳೆ ಏನಾದರೂ ಲೋಪವಾದರೆ ಅಂತಹ ಅಧಿಕಾರಿಗಳ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಲಿದೆ ಎಂದು ಎಚ್ಚರಿಕೆ ನೀಡಿದರು.

ತರಬೇತಿ ಕಾರ್ಯಾಗಾರದಲ್ಲಿ ಬಿಎಲ್‌ಓಗಳು ಹಾಗೂ ಬಿಎಲ್‌ಓಗಳ ಮೇಲ್ವಿಚಾರಕರು ಪಾಲ್ಗೊಂಡಿದ್ದರು.

09/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಶ್ರೀ ವೇದ ಮಾತೆ ತ್ರಿಪಾದ ಗಾಯತ್ರಿ ದೇವಿಗೆ ವಿಶೇಷ ಅಲಂಕಾರ



ಮಾಲೂರು

ನಗರದ ಮಾಲೂರು ಬೆಂಗಳೂರು ರಸ್ತೆಯ ರಿಲಯನ್ಸ್ ಪೆಟ್ರೋಲ್ ಬಂಕ್ ಬಳಿ ಇರುವ ಶ್ರೀ ಶ್ರೀ ಶ್ರೀ ತ್ರಿಪಾದ ಗಾಯತ್ರಿದೇವಿ ದೇವಾಲಯದಲ್ಲಿ 20ನೇ ವರ್ಷದ ವಾರ್ಷಿಕೋತ್ಸವದ ಪ್ರಯುಕ್ತ ಶ್ರೀ ವೇದ ಮಾತೆ ತ್ರಿಪಾದ ಗಾಯತ್ರಿ ದೇವಿಗೆ ವಿಶೇಷ ಆಭರಣ ಸಮೇತ ಹೂವಿನ ಅಲಂಕಾರ ಮಾಡಲಾಗಿತ್ತು ಭಕ್ತಾದಿಗಳು ದೇವಾಲಯಕ್ಕೆ ಆಗಮಿಸಿ ದೇವಿಯ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸಿದರು.

ನಗರದ ಮಾಲೂರು ಬೆಂಗಳೂರು ರಸ್ತೆಯ ರಿಲಯನ್ಸ್ ಪೆಟ್ರೋಲ್ ಬಂಕ್ ಬಳಿ ಇರುವ ಗಾಯತ್ರಿ ದೇವಿ ದೇವಾಲಯದಲ್ಲಿ 20ನೇ ವರ್ಷದ ವಾರ್ಷಿಕೋತ್ಸವ ಪ್ರಯುಕ್ತ ಬುಧುವಾರ ದೇವಾಲಯದ ಪ್ರಧಾನ ಅರ್ಚಕ ಚೇತನ್ ಆಚಾರ್ಯ ಅವರ ಅರ್ಚಕತ್ವದಲ್ಲಿ ವಿವಿಧ ಪೂಜಾ ಕೈಕಾರ್ಯಗಳೊಂದಿಗೆ ಆರಂಭವಾಗಿ ಗುರುವಾರ ಬೆಳಗ್ಗೆ ಸುಪ್ರಭಾತ ಸೇವೆ, ವೇದಪಾರಾಯಣ, ಗಣಪತಿ ಹೋಮ, ಗಾಯತ್ರಿ ದೇವಿಯ ಪ್ರಧಾನ ಹೋಮ, ಶಾಂತಿ ಹೋಮ, ಮಹಾ ಪೂರ್ಣಾವತಿ, ಮಹಾಸಂಕಲ್ಪ ಸಮೇತ ಕುಂಕುಮರ್ಚನೆ, ಕಳಶಗಳ ಉದ್ಘಾಟನೆ ಕಳಶಗಳ ಪ್ರದಕ್ಷಿಣೆ, ಮಹಾಕುಂಭಾಭಿಷೇಕ, ಹಾಲಿನ ಅಭಿಷೇಕ, ಪಂಚಾಮೃತ ಅಭಿಷೇಕ, ಅಷ್ಟಾವಧಾನ ಸೇವೆ ಮಹಾನೈವದ್ಯ, ಮಹಾಮಂಗಳಾರತಿ ನಂತರ ತೀರ್ಥ ಪ್ರಸಾದ ವಿನಿಯೋಗಿಸಲಾಯಿತು.

ಬೆಳಗ್ಗೆ ಸುಮಂಗಲರಿಂದ ಲಲಿತ ಸಹಸ್ರನಾಮ ಪಾರಾಯಣ, ಮಧ್ಯಾಹ್ನ 12 ಗಂಟೆಗೆ ಅನ್ನ ಪ್ರಸಾದವನ್ನು ಸಹ ಏರ್ಪಡಿಸಲಾಗಿತ್ತು ಸಂಜೆ ಅಮ್ಮನವರ ಗ್ರಾಮ ಪ್ರದಕ್ಷಿಣೆ ನಡೆಯಿತು.

ವಾರ್ಷಿಕೋತ್ಸವ ಪ್ರಯುಕ್ತ ಭಕ್ತಾದಿಗಳು ದೇವಾಲಯಕ್ಕೆ ಆಗಮಿಸಿ ದೇವರ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸಿದರು.

### ಹಸ್ತ ಪ್ರತಿಗಳ ಸಂರಕ್ಷಣೆ, ಡಿಜಿಟಲೀಕರಣ

# ಕಾರ್ಯ ಯೋಜನೆಗೆ ಸಹಕರಿಸಲು ಸೂಚನೆ

ರಾಮನಗರ

ಕೇಂದ್ರ ಸರ್ಕಾರದ ಜ್ಞಾನನ ಭಾರತಂ ಮಿಷನ್ ಯೋಜನೆಯಡಿ ಇಡೀ ದೇಶದಲ್ಲಿರುವ ಹಸ್ತಪ್ರತಿಗಳ ಮಾಹಿತಿಯನ್ನು ಕೇಂದ್ರ ಸರ್ಕಾರವು ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್‌ನಲ್ಲಿ ಅಪ್ಲೋಡ್ ಮಾಡುವ ಮೂಲಕ ಸಂಗ್ರಹಣೆಗೊಳ್ಳುವ ರಾಷ್ಟ್ರೀಯ ಭಂಡಾರವು ದತ್ತಾಂಶದ ಮಾಹಿತಿಯನ್ನು ವಿಶ್ವಕ್ಕೆ ಹಂಚಿಕೊಳ್ಳುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ತಿಳಿಸಿದರು.



ಅವರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಹಸ್ತ ಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕಾರ್ಯ ಯೋಜನೆ ಕುರಿತು ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ರಾಷ್ಟ್ರದಾದ್ಯಂತ ಶತಮಾನಗಳಷ್ಟು ಹಳೆಯ ಕೈಬರಹ ಪತ್ಯಗಳು, ಹಸ್ತ ಪ್ರತಿಗಳು ಮತ್ತು ದಾಖಲೆಗಳ ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಇವುಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಮತ್ತು ಪ್ರಕಟಣೆಯನ್ನು ಮಾಡುವ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಸಾರ್ವಜನಿಕ ಪ್ರವೇಶವನ್ನು ಒದಗಿಸಿ ಭವಿಷ್ಯದ ಪೀಳಿಗೆಗೆ ಅವುಗಳ ಜ್ಞಾನ ಸಂಪತ್ತಿನ ಸಂರಕ್ಷಣೆ ಮತ್ತು ಬಳಕೆಗೆ ಹಸ್ತಪ್ರತಿಗಳ ಸಂರಕ್ಷಣೆ ಹಾಗೂ ಡಿಜಿಟಲೀಕರಣ ಯೋಜನೆಯನ್ನು ಹಮ್ಮಿಕೊಂಡಿದೆ ಎಂದರು.

ಈ ಯೋಜನೆಗೆ ಸಂಬಂಧಿಸಿದಂತೆ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ವತಿಯಿಂದ ಹಾಜರಿದ್ದ ಸಿಬ್ಬಂದಿಗಳಿಗೆ ಹಸ್ತ ಪ್ರತಿಗಳನ್ನು ಪತ್ತೆ ಹಚ್ಚಲು ಹಾಗೂ ತಮ್ಮ ಸಂಸ್ಥೆಯಲ್ಲಿ ಯಾವುದೇ ದಾಖಲೆಗಳು ಇದ್ದರೆ ಮಾಹಿತಿ ನೀಡಲು ಸೂಚಿಸಿದರು. ಈ ಸಂಬಂಧ ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಪ್ರತಿನಿಧಿಯಾದ ಪ್ರೇಮಪುರಿ ಶಿವಂ ಅವರು ಮಾತನಾಡುತ್ತಾ ನಮ್ಮ ಬಳಿ ಕೆಲವು ಹಸ್ತ ಪ್ರತಿಗಳು ಇರಬಹುದು ಇದರ ಬಗ್ಗೆ ಕೂಡಲೇ ಪರಿಶೀಲಿಸಿ ಮಾಹಿತಿಯನ್ನು ಪ್ರವಾಸೋದ್ಯಮ ಇಲಾಖೆಗೆ ತಿಳಿಸಲಾಗುದು ಎಂದು ಮಾಹಿತಿ ನೀಡಿದರು.

ಆಡಳಿತ ಅಧಿಕಾರಿಗಳು ಚುಂಚನಗಿರಿ ಮಠ ರಾಮನಗರ ಹಾಗೂ ದೇಗುಲ ಮಠ ಕನಕಪುರ ಅವರು ತಮ್ಮ ಬಳಿ ಯಾವುದೇ ರೀತಿಯ ಹಸ್ತ ಪ್ರತಿಗಳು ಇರುವುದಿಲ್ಲ ಎಂದು ಸಭೆಗೆ ಮಾಹಿತಿ ನೀಡಿದರು ಹಾಗೂ ಚುಂಚನಗಿರಿ ಮಠದವರು ಹಸ್ತ ಪ್ರತಿಗಳನ್ನು ಮಂಡ್ಯ ಜಿಲ್ಲೆಯ ಆದಿ ಚುಂಚನಗಿರಿ ಮಠದಲ್ಲಿ ಸಂಗ್ರಹಿಸಲಾಗಿದೆ ಎಂದು ತಿಳಿಸಿದಾಗ ಅಪರ ಜಿಲ್ಲಾಧಿಕಾರಿಗಳು ಯಾವುದಾದರೂ ಹಸ್ತ ಪ್ರತಿಗಳು ಲಭ್ಯವಾದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಾಹಿತಿ ನೀಡುವಂತೆ ಸೂಚಿಸಿದರು.

# ‘ಶಿಕ್ಷಕ ವೃತ್ತಿ ಸಮಾಜದಲ್ಲಿ ಎಲ್ಲಾ ವೃತ್ತಿಗಳಿಗೂ ಪವಿತ್ರವಾದ ವೃತ್ತಿ’

ಮಾಲೂರು

ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು ಶಿಕ್ಷಕರಾಗಿ ಉತ್ತಮ ಸೇವೆ ಸಲ್ಲಿಸಿದವರು ಅಪಾರ ಶಿಷ್ಯರ ಪ್ರೀತಿಯನ್ನು ಗಳಿಸಿರುತ್ತಾರೆ ನಿವೃತ್ತಿಯ ನಂತರ ಜೀವನವು ಆರೋಗ್ಯ ಮತ್ತು ಸುಖಕರವಾಗಿರಲಿ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಬಿಪಿ ಕೆಂಪಯ್ಯ ಹೇಳಿದರು.

ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ವಯೋ ಸಹಜ ನಿವೃತ್ತಿ ಹೊಂದಿದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ದೈಹಿಕ ಶಿಕ್ಷಕ ಸುಧಾಕರ್, ಸೊಣಪನಟ್ಟಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಆರ್ ಕೆ ನಾಗರಾಜ್, ಆನೆಪುರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಹನುಮಂತಪ್ಪ,, ತೊರ್ನಹಳ್ಳಿ ಗ್ರಾಮದ ಉರ್ದು ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ವನಜಮ್ಮ, ಅವರಿಗೆ ಹಮ್ಮಿಕೊಳ್ಳಲಾಗಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಅಭಿನಂದಿಸಿ ಮಾತನಾಡಿದರು.

ಶಿಕ್ಷಕ ವೃತ್ತಿ ಸಮಾಜದಲ್ಲಿ ಎಲ್ಲಾ ವೃತ್ತಿಗಳಿಗೂ ಪವಿತ್ರವಾದ ವೃತ್ತಿಯಾಗಿದೆ ಶಿಕ್ಷಕ ವೃತ್ತಿಯನ್ನು ನಿರ್ವಹಿಸುವವರು ಅಪಾರ ಮಕ್ಕಳ ಪ್ರೀತಿ ವಿಶ್ವಾಸವನ್ನು ಗಳಿಸಿರುತ್ತಾರೆ. ಮುಂದಿನ ಭವಿಷ್ಯದ ಪ್ರಜೆಗಳಾದ ವಿದ್ಯಾರ್ಥಿಗಳಿಗೆ ಶಿಕ್ಷಕರು ಮಾರ್ಗದರ್ಶಕರಾಗಿ ಮೌಲ್ಯ ದಾರಿತ ಶಿಕ್ಷಣವನ್ನು ನೀಡುತ್ತಾರೆ ಸರ್ಕಾರಿ ಶಾಲೆಗಳಲ್ಲಿ ಇತ್ತೀಚಿನ ದಿನಗಳಲ್ಲಿ ಮಕ್ಕಳ ದಾಖಲಾತಿ ಸಂಖ್ಯೆ ಕಡಿಮೆಯಾಗುತ್ತಿದ್ದು, ಶಿಕ್ಷಕರು ಶಿಸ್ತು, ಸಮಯಪ್ರಜ್ಞೆ, ಸತತವಾಗಿ ಓದುವ ಹವ್ಯಾಸ ಅಳವಡಿಸಿಕೊಂಡು, ತಮ್ಮ ಪರಿಸರವ ಶುಚಿತ್ವವನ್ನು ಕಾಪಾಡಿಕೊಳ್ಳಬೇಕು ಖಾಸಗಿ ಶಾಲೆಗಳಲ್ಲಿ ಸಿಗುವ ಶಿಕ್ಷಣಕ್ಕೆ ಪೈಪೋಟಿ ನೀಡುವಂತಹ ಸರ್ಕಾರಿ ಸುತ್ತೋಲೆಯನ್ವಯ ಗುಣಾತ್ಮಕವಾದ ಮೌಲ್ಯ ದಾರಿತ ಶಿಕ್ಷಣವನ್ನು ನೀಡಿದಾಗ ಸಾರ್ವಜನಿಕರು ಪ್ರಶಂಶಿಸುತ್ತಾರೆ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ನೀಡುವ ಪ್ರಶಂಸೆಗೆ ಯಾವುದೇ ರೀತಿಯ ಬಿರುದು ಸನ್ಮಾನಗಳಿಲ್ಲ, ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಹಿರಿಯ ಪ್ರೌಢಶಾಲೆಗಳಲ್ಲಿ ಶಿಕ್ಷಕರು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ಪ್ರಸಕ್ತ ವರ್ಷದಲ್ಲಿ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇಕಡ 97 ರಷ್ಟು ಫಲಿತಾಂಶ ಬಂದಿರುವುದು ತಾಲೂಕಿಗೆ ಕೀರ್ತಿಯನ್ನು ಹೆಚ್ಚಿಸಿದೆ.



ನಗರದ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕ ಸುಧಾಕರ್ ಅವರು ಹೊಸಕೋಟೆ ತಾಲೂಕಿನ ಎಡಕನಹಳ್ಳಿ ಗ್ರಾಮದಲ್ಲಿ ತಮ್ಮ ಶಿಕ್ಷಕ ವೃತ್ತಿಯನ್ನು ಆರಂಭಿಸಿ ನರಸಾಪುರ, ಕೆಜಿಹಳ್ಳಿ, ಕುಡಿಯನೂರು, ಬೂದಿಕೋಟೆ, ದೊಡ್ಡ ಶಿವಾರ ಪ್ರೌಢಶಾಲೆಗಳಲ್ಲಿ ಉತ್ತಮ ರೀತಿಯಲ್ಲಿ 39 ವರ್ಷಗಳ ಕಾಲ ಸೇವೆಯನ್ನು ಸಲ್ಲಿಸುವುದರ ಮೂಲಕ ಅಪಾರ ಶಿಷ್ಯರು ಹಾಗೂ ಪೋಷಕರ ಪ್ರೀತಿಯನ್ನು ಗಳಿಸಿದ್ದಾರೆ.

30ಕ್ಕೂ ಹೆಚ್ಚು ವರ್ಷಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಶಿಕ್ಷಕರಿಗೆ ದೇವರು ಉತ್ತಮ ರೀತಿಯ ಆರೋಗ್ಯ ಮತ್ತು ಆಯಸ್ಸು ನೀಡುವುದರ ಮೂಲಕ ತಮ್ಮ ಕುಟುಂಬದೊಂದಿಗೆ ಸುಖಕರವಾದ ಜೀವನ ನಡೆಸುವಂತೆ ಹೇಳಿದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಷಣ್ಮುಖಯ್ಯ ಮಾತನಾಡಿ 30ಕ್ಕೂ ಹೆಚ್ಚು ವರ್ಷಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿ ವಯೋ ಸಹಜ ನಿವೃತ್ತಿ ಹೊಂದುತ್ತಿರುವ ಶಿಕ್ಷಕರನ್ನು ಸಂಘದ ವತಿಯಿಂದ ಅಭಿನಂದಿಸುತ್ತ ಬರಲಾಗಿದೆ ಪ್ರಸಕ್ತ ವರ್ಷ ನಿವೃತ್ತಿ ಹೊಂದುತ್ತಿರುವ ಶಿಕ್ಷಕರ ಜೀವನ ಸುಖಕರವಾಗಿರಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಬಿಆರ್‌ಸಿ ಸಮನ್ವಯ ಅಧಿಕಾರಿ ಟಿ.ವೆಂಕಟಸ್ವಾಮಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಪಿ.ರಮೇಶ್, ಖಜಾಂಚಿ ಅರ್ಜುನ್, ಪ್ರೌಢಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ರಾಮಯ್ಯ, ಶಿಕ್ಷಣಾಧಿಕಾರಿಗಳಾದ ಶಶಿಧರ್, ಅಶೋಕ್, ಕೃಷ್ಣೇಗೌಡ, ಮಂಜಪ್ಪ, ಬಿಆರ್‌ಪಿ ಮೋಹನ್, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಸಿಬ್ಬಂದಿ ಬಿಆರ್‌ಸಿ ಕಛೇರಿಯ ಸಿಬ್ಬಂದಿ ಹಾಜರಿದ್ದರು.

# ‘ಶಾಸಕರ ಬಗ್ಗೆ ಮಾತನಾಡುವ ನೈತಿಕತೆಯಿಲ್ಲ’

ಗುಡಿಬಂಡೆ

ಚುನಾವಣಾ ಸಮಯ ಹತ್ತಿರವಾಗುತ್ತಿದ್ದಂತೆ ಕೆಲ ರಾಜಕಾರಣಿಗಳು ಟೂರ್‌ಗೆ ಬಂದಂತೆ ಕ್ಷೇತ್ರಕ್ಕೆ ಬರುತ್ತಿದ್ದು, ಇಂತಹವರಿಗೆ ಜನಮನ ಗೆದ್ದ ಶಾಸಕರ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಕಾಂಗ್ರೆಸ್ ಮುಖಂಡ ಲಕ್ಷ್ಮೀನಾರಾಯಣ ತೀವ್ರ ಟೀಕೆ ಮಾಡಿದ್ದಾರೆ.

ಪಟ್ಟಣದ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಮುಖಂಡ ಡಿ.ಜೆ. ನಾಗರಾಜರೆಡ್ಡಿ ಅವರು ಶಾಸಕ ಸುಬ್ಬಾರೆಡ್ಡಿಯವರ ವಿರುದ್ಧ ನೀಡಿದ ಹೇಳಿಕೆಗಳಿಗೆ ತಿರುಗೇಟು ನೀಡಿದರು. “ಗುಡಿಬಂಡೆ ತಾಲೂಕಿನವರೇ ಆದ ನೀವು ರಾಜಕೀಯ ಮಾಡುವುದು ತಪ್ಪಲ್ಲ, ಆದರೆ ಚುನಾವಣೆ ಹತ್ತಿರ ಬಂದಾಗ ಕ್ಷೇತ್ರಕ್ಕೆ ಬಂದು ಸತತ ಮೂರು ಬಾರಿ ಗೆದ್ದ ಶಾಸಕರ ವಿರುದ್ಧ ಆಧಾರವಿಲ್ಲದ ಆರೋಪ ಮಾಡುವುದು ಸರಿಯಲ್ಲ” ಎಂದು ಹೇಳಿದರು.



ಇನ್ನೂ ಮುಂದೆ ಮಾತನಾಡಿದ ಅವರು, “ಶಾಸಕರನ್ನು ಚರ್ಚೆಗೆ ಆಹ್ವಾನಿಸಲು ನೀವು ಸೂಕ್ತರಲ್ಲ. ನಿಮಗೆ ಉತ್ತರ ಕೊಡಲು ನಾವು ಸಾಕು. ಗುಡಿಬಂಡೆಗೆ ನೀವು ಕೊಟ್ಟ ಕೊಡುಗೆ ಏನು ಎಂಬುದನ್ನು ಜನರಿಗೆ ಹೇಳಿ. ಶಾಸಕರು ಕಾನೂನಿನಂತೆ ಭೂಮಿ ಖರೀದಿ ಮಾಡಿದ್ದಾರೆ. ಇದರಲ್ಲಿ ತಪ್ಪೇನಿಲ್ಲ” ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಮುಖಂಡ ಪ್ರಕಾಶ್ ಮಾತನಾಡಿ, “ಬಾಗೇಪಲ್ಲಿ–ಗುಡಿಬಂಡೆ ಕ್ಷೇತ್ರದಲ್ಲಿ ಒಮ್ಮೆ ಗೆದ್ದವರು ಮತ್ತೊಮ್ಮೆ ಗೆಲ್ಲದ ಇತಿಹಾಸವಿದೆ. ಆದರೆ ಸುಬ್ಬಾರೆಡ್ಡಿಯವರು ಸತತ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿರುವುದು ಅವರ ಕಾರ್ಯಕ್ಷಮತೆಯ ಸಾಕ್ಷಿ. ಜನರ ಪರ ಕೆಲಸ ಮಾಡದೇ ಇದ್ದರೆ ಜನರು ಅವರನ್ನು ಮತ್ತೆ ಮತ್ತೆ ಆಯ್ಕೆ ಮಾಡುವುದಿಲ್ಲ” ಎಂದರು.

“ಚುನಾವಣೆ ಹತ್ತಿರ ಬಂದಂತೆ ಶಾಸಕರ ವಿರುದ್ಧ ಆಧಾರವಿಲ್ಲದ ಆರೋಪಗಳು ಸಾಮಾನ್ಯವಾಗಿವೆ. ಇಂತಹ ಆರೋಪಗಳು ಮುಂದುವರಿದರೆ ತಕ್ಕ ಪಾಠ ಕಲಿಸುತ್ತೇವೆ” ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಮುಖಂಡರಾದ ದಪ್ಪರ್ತಿ ನಂಜುಂಡ, ಕೆಡಿಪಿ ಸದಸ್ಯ ರಿಯಾಜ್ ಪಾಷಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆದಿರೆಡ್ಡಿ, ಆನಂದರೆಡ್ಡಿ, ರಮೇಶ್, ಮಂಜುನಾಥ್, ನವೀನ್ ರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 25ವರ್ಷದ ದಾಖಲೆ ಮುರಿದ ಮಳೆ

ಬೆಂಗಳೂರು

ನಿನ್ನೆ ಒಂದೆರಡು ಗಂಟೆಗಳ ಮಳೆಯು ಈ ಶತಮಾನದಲ್ಲಿ ಎಪ್ರಿಲ್‌ನಲ್ಲಿ ಸುರಿದ ದಾಖಲೆಯ ಮಳೆಯಾಗಿದೆ. ಇದು ಹವಾಮಾನ ವೈಪರಿತ್ಯ ಸೂಚಿಸುತ್ತದೆ ಎಂದು ಐಎಂಡಿ ಅಧಿಕಾರಿಗಳು ತಿಳಿಸಿದ್ದಾರೆ.

ಗುರುವಾರ ಬೆಳಗ್ಗೆ 8.30ಕ್ಕೆ ಕೊನೆಗೊಂಡಂತೆ ದಕ್ಷಿಣ ಒಳನಾಡಿನ ಕೆಲವಡೆ, ಕರಾವಳಿ ಕರ್ನಾಟಕ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ದಕ್ಷಿಣ ಒಳನಾಡಿನ ಕೆಲವಡೆ, ಕರಾವಳಿ ಕರ್ನಾಟಕ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಬೆಂಗಳೂರು ನಗರದಲ್ಲಿ 11 ಸೆಂಟಿ ಮೀಟರ್ ಮಳೆಯಾಗಿದೆ. ಚಿತ್ರದುರ್ಗ 7, ಚಿಂತಾಮಣಿ 4, ಮಂಡ್ಯ 3, ಹೊಸಕೋಟೆಯಲ್ಲಿ 2 ಸೆಂಟಿ ಮೀಟರ್ ಮಳೆಯಾಗಿದೆ.

ಮುಂದಿನ 48 ಗಂಟೆ ಈ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆ: ಮುಂದಿನ 48 ಗಂಟೆಗಳಲ್ಲಿ ಬೆಂಗಳೂರು, ಹಾಸನ, ಮೈಸೂರು, ಚಿಕ್ಕಬಳ್ಳಾಪುರ, ತುಮಕೂರು ಸೇರಿದಂತೆ ರಾಜ್ಯದ ಕೆಲವೆಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ಉಷ್ಣಾಂಶ 35 ಡಿಗ್ರಿಗೆ ಸೀಮಿತವಾಗಿರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ

# ಜೆಡಿಎಸ್ ಬೂತ್ ಮಟ್ಟದ ಏಜೆಂಟರ ಕಾರ್ಯಾಗಾರ

ಚಿಂತಾಮಣಿ

ನಗರದ ಹೊರವಲಯದ ಬೈಪಾಸ್ ರಸ್ತೆಯಲ್ಲಿರುವ ಜೆಕೆ ಭವನದಲ್ಲಿ ಜೆಡಿಎಸ್ ಪಕ್ಷದ ಬೂತ್ ಮಟ್ಟದ ಏಜೆಂಟರ ಕಾರ್ಯಾಗಾರ ಯಶಸ್ವಿಯಾಗಿ ನಡೆಯಿತು.

ಕಾರ್ಯಾಗಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಖಖಖ) ಪ್ರಕ್ರಿಯೆಯ ಮಹತ್ವ, ಹೊಸ ಮತದಾರರ ಸೇರ್ಪಡೆ ಹಾಗೂ ಹೆಸರು ತಿದ್ದುಪಡಿ ಕುರಿತಾಗಿ ಸಮಗ್ರ ಮಾಹಿತಿ ನೀಡಲಾಯಿತು.

ಜೊತೆಗೆ, ಮತದಾರರ ಪಟ್ಟಿಯ ನಿಖರತೆ ಸಾಧಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿವರವಾದ ಚರ್ಚೆ ನಡೆಯಿತು.




ಪ್ರತಿ ಬೂತ್ ಮಟ್ಟದಲ್ಲೂ ಅರ್ಹ ಮತದಾರರನ್ನು ಪಟ್ಟಿಗೆ ಸೇರಿಸುವುದು ಹಾಗೂ ಅನರ್ಹ ಹೆಸರುಗಳನ್ನು ತೆರವುಗೊಳಿಸುವ ಕಾರ್ಯದಲ್ಲಿ ಬೂತ್ ಮಟ್ಟದ ಏಜೆಂಟರು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂಬುದನ್ನು ಒತ್ತಿಹೇಳಲಾಯಿತು.

ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಜೆಡಿಎಸ್ ರಾಜ್ಯ ವಕ್ತಾರ ಹೆಚ್. ಎನ್ ದೇವರಾಜ್ ಹಾಗೂ ಜೆ.ಡಿ ಅಶ್ವಿನ್ ಕುಮಾರ್ ಭಾಗವಹಿಸಿ ಕಾರ್ಯಕರ್ತರಿಗೆ ಅಗತ್ಯ ಮಾರ್ಗದರ್ಶನ ನೀಡಿದರು.

ಇದೇ ವೇಳೆ ವಿಧಾನಸಭಾ ಮಾಜಿ ಉಪಾಧ್ಯಕ್ಷರು ಹಾಗೂ ಕ್ಷೇತ್ರದ ಮಾಜಿ ಶಾಸಕರಾದ ಜೆಕೆ ಕೃಷ್ಣಾರೆಡ್ಡಿ ಸೇರಿದಂತೆ ಜೆಡಿಎಸ್ ಪಕ್ಷದ ಹಲವಾರು ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಳೆಹಾನಿ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಭೇಟಿ; ಸಂತ್ರಸ್ತರಿಗೆ ಸಾಂತ್ವನ, ಪರಿಹಾರಕ್ಕೆ ಸೂಚನೆ

ತುಮಕೂರು

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಇತ್ತೀಚಿನ ಭಾರಿ ಮಳೆ ಹಾಗೂ ಬಿರುಗಾಳಿಯಿಂದ ಹಾನಿಗೊಳಗಾದ ವಿವಿಧ ಪ್ರದೇಶಗಳಿಗೆ ಗುರುವಾರ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು. ಪ್ರಕೃತಿ ವಿಕೋಪದಿಂದ ಮಾನವ ಜೀವಹಾನಿ, ಬೆಳೆ ನಷ್ಟ ಹಾಗೂ ಮೂಲಸೌಕರ್ಯ ಹಾನಿಯ ಕುರಿತು ಸಮಗ್ರ ಮಾಹಿತಿ ಪಡೆದು ಸಂಬಂಧಪಟ್ಟ ಅಧಿಕಾರಿಗಳಿಗೆ ತಕ್ಷಣದ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಚಿಕ್ಕನಾಯಕನಹಳ್ಳಿ ಪಟ್ಟಣದ ನಿವಾಸಿ ಪುಟ್ಟಯ್ಯ (70 ವರ್ಷ) ಅವರು ಏಪ್ರಿಲ್ 28ರಂದು ಸಂಜೆ ತೋಟದಿಂದ ಮನೆಗೆ ತೆರಳುವ ವೇಳೆ ಆಕಸ್ಮಿಕ ಗಾಳಿ–ಮಳೆಯ ಪರಿಣಾಮ ಮರದ ಕೊಂಬೆ ತಲೆಯ ಮೇಲೆ ಬಿದ್ದು ಮೃತಪಟ್ಟ ಘಟನೆ ಹಿನ್ನೆಲೆ, ಜಿಲ್ಲಾಧಿಕಾರಿಗಳು ಮೃತರ ನಿವಾಸಕ್ಕೆ ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಂತಾಪ ಸೂಚಿಸಿ ಸಾಂತ್ವನ ಹೇಳಿದರು.

ಈ ವೇಳೆ ತಹಶೀಲ್ದಾರ್, ಮುಖ್ಯಾಧಿಕಾರಿ ಹಾಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಮೃತರ ಕುಟುಂಬಕ್ಕೆ ತಕ್ಷಣ ಮರಣ ಪ್ರಮಾಣ ಪತ್ರ ವಿತರಿಸುವುದು, ಹಕ್ಕುಪತ್ರ ಸಂಬಂಧಿತ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವುದು ಹಾಗೂ ಅರ್ಹ ಪಿಂಚಣಿ ಸೇರಿದಂತೆ ಸರ್ಕಾರದ ಸೌಲಭ್ಯಗಳನ್ನು ವಿಳಂಬವಿಲ್ಲದೆ ಮಂಜೂರು ಮಾಡುವಂತೆ ನಿರ್ದೇಶನ ನೀಡಿದರು.

ಸರ್ಕಾರದಿಂದ ಲಭ್ಯವಿರುವ ಪರಿಹಾರ ಧನ ಮತ್ತು ಅಗತ್ಯ ನೆರವುಗಳನ್ನು ಶೀಘ್ರ ಕುಟುಂಬಕ್ಕೆ ತಲುಪಿಸಲು ಕ್ರಮವಹಿಸುವಂತೆ ಸೂಚಿಸಿದರು.

ತಿಪಟೂರು ತಾಲ್ಲೂಕಿನ ಹಟ್ನ ಗ್ರಾಮದ ಸರ್ವೆ ನಂ. 97 ಪ್ರದೇಶಕ್ಕೆ ಭೇಟಿ ನೀಡಿ ಭಾರಿ ಮಳೆಯಿಂದ ಉಂಟಾದ ಬೆಳೆ ಹಾಗೂ ಭೂ ಹಾನಿಯನ್ನು ಪರಿಶೀಲಿಸಿದ ಅವರು, ರೈತರಿಗೆ ಸಂಭವಿಸಿದ ನಷ್ಟ, ಭೂಮಿಯ ಸ್ಥಿತಿ ಹಾಗೂ ಬೆಳೆ ಹಾನಿಯ ಕುರಿತು ಅಧಿಕಾರಿಗಳಿಂದ ವಿವರವಾದ ಮಾಹಿತಿ ಪಡೆದು, ಸರ್ಕಾರದ ನಿಯಮಾನುಸಾರ ಭೂ ಆಧಾರಿತ ಮೌಲ್ಯಮಾಪನದಲ್ಲಿ ಶೇ.33 ಕ್ಕಿಂತ ಹೆಚ್ಚು ಹಾನಿಗೊಳಗಾದ ರೈತರಿಗೆ ಪ್ರತಿ ಎಕರೆಗೆ 22,000 ರೂ.ಪರಿಹಾರ ಮಂಜೂರು ಮಾಡುವುದಾಗಿ ತಿಳಿಸಿದರು.

ಅರ್ಹ ರೈತರ ಸಂಪೂರ್ಣ ವಿವರಗಳನ್ನು ತ್ವರಿತವಾಗಿ ಸಂಗ್ರಹಿಸಿ ಪರಿಹಾರ ವಿತರಣೆಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಅದೇ ರೀತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಶೆಟ್ಟಿಕೆರೆ ಹೋಬಳಿ ವ್ಯಾಪ್ತಿಯ ಹಾಲುಗೊಣ ಗ್ರಾಮಕ್ಕೆ ಭೇಟಿ ನೀಡಿ ಗಾಳಿ–ಮಳೆಯಿಂದ ತೆಂಗು, ಬಾಳೆ ಹಾಗೂ ಅಡಿಕೆ ಬೆಳೆಗಳಿಗೆ ಉಂಟಾದ ಹಾನಿಯನ್ನು ಪರಿಶೀಲಿಸಿದರು. ಅನೇಕ ಮರಗಳು ಉರುಳಿ ಬೆಳೆ ನಷ್ಟವಾಗಿರುವುದು ಹಾಗೂ ಬೆಸ್ಕಾಂ ವಿದ್ಯುತ್ ಲೈನ್‌ಗಳ ಮೇಲೆ ಮರಗಳು ಮತ್ತು ಕೊಂಬೆಗಳು ಬಿದ್ದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುವುದನ್ನು ಗಮನಿಸಿದ ಜಿಲ್ಲಾಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳಿಗೆ ಬೆಳೆ ಹಾನಿಯ ಸಮಗ್ರ ದಾಖಲೆ ಸಿದ್ಧಪಡಿಸುವುದು, ಪ್ರತಿ ರೈತನ ನಷ್ಟವನ್ನು ನಿಖರವಾಗಿ ದಾಖಲಿಸುವುದು ಹಾಗೂ ತ್ವರಿತ ವರದಿ ಸಲ್ಲಿಸುವಂತೆ ಸೂಚಿಸಿದರಲ್ಲದೆ, ಜೊತೆಗೆ ಉರುಳಿದ ಮರಗಳು ಮತ್ತು ಕೊಂಬೆಗಳನ್ನು ತಕ್ಷಣ ತೆರವುಗೊಳಿಸಿ ಬೆಸ್ಕಾಂ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ವಿದ್ಯುತ್ ಸರಬರಾಜನ್ನು ಶೀಘ್ರ ಪುನಃಸ್ಥಾಪಿಸುವಂತೆ ನಿರ್ದೇಶನ ನೀಡಿದರು. ಅರ್ಹ ರೈತರ ಸಂಪೂರ್ಣ ವಿವರಗಳನ್ನು ತ್ವರಿತವಾಗಿ ಸಂಗ್ರಹಿಸಿ ಪರಿಹಾರ ವಿತರಣೆಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅರ್ಹ ರೈತರಿಗೆ ಸರ್ಕಾರದ ಮಾರ್ಗಸೂಚಿಗಳಂತೆ ಪರಿಹಾರ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಲು, ಹಾನಿ ಮೌಲ್ಯಮಾಪನ ಕಾರ್ಯಗಳನ್ನು ಆದ್ಯತೆಯಿಂದ ಪೂರ್ಣಗೊಳಿಸಲು ಹಾಗೂ ಎಲ್ಲಾ ವರದಿಗಳನ್ನು ಶೀಘ್ರ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳುಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪರಿಶೀಲನಾ ಸಂದರ್ಭದಲ್ಲಿ ತಿಪಟೂರು ಹಾಗೂ ಚಿಕ್ಕನಾಯಕನಹಳ್ಳಿ ತಹಶೀಲ್ದಾರ್, ಚಿಕ್ಕನಾಯಕನಹಳ್ಳಿ ಮುಖ್ಯಾಧಿಕಾರಿ, ಜಿಲ್ಲಾ ತೋಟಗಾರಿಕೆ ಉಪ ನಿರ್ದೇಶಕಿ ಶಾರದಮ್ಮ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಂದಿ ಸಾಕಾಣಿಕಾ ಕೇಂದ್ರ ತೆರವಿಗೆ ಗ್ರಾಮಸ್ಥರ ಆಗ್ರಹ

ದೊಡ್ಡಬಳ್ಳಾಪುರ

ಬೈರಸಂದ್ರ ಗ್ರಾಮದಲ್ಲಿ ದುರ್ವಾಸನೆ ಬೀರುತ್ತಿರುವ ಹಂದಿ ಸಾಕಾಣಿಕಾ ಕೇಂದ್ರವನ್ನು ತಕ್ಷಣ ತೆರವುಗೊಳಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಹೈಕೋರ್ಟ್ ಆದೇಶ ಇದ್ದರೂ ಅಧಿಕಾರಿಗಳು ಕ್ರಮ ಕೈಗೊಳ್ಳದಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ.

ನಗರದ ತಾಲ್ಲೂಕು ಪಂಚಾಯತಿ ಆವರಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಗ್ರಾಮದ ನಿವಾಸಿ ಲಕ್ಷೀ ಸಾಗರ್, “ಗ್ರಾಮದಲ್ಲಿ ತೀವ್ರ ದುರ್ವಾಸನೆ ವ್ಯಾಪಿಸುತ್ತಿದ್ದು ಜನರು ಸಂಕಷ್ಟದಲ್ಲಿ ಬದುಕುತ್ತಿದ್ದಾರೆ. ಸಮಸ್ಯೆ ಕುರಿತು ಹಲವಾರು ಬಾರಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ” ಎಂದು ಆರೋಪಿಸಿದರು.



ಅವರು ಮುಂದುವರೆದು, “ಹಂದಿ ಸಾಕಾಣಿಕೆ ಕೇಂದ್ರದ ವಿರುದ್ಧ ನ್ಯಾಯಾಲಯದ ಮೊರೆ ಹೋಗಿದ್ದೇವೆ. ಮಾಲಿನ್ಯ ನಿಯಂತ್ರಣ ಮಂಡಳಿಯ ವರದಿ ಆಧರಿಸಿ ಹೈಕೋರ್ಟ್ ಕೇಂದ್ರವನ್ನು ತೆರವುಗೊಳಿಸಲು ಆದೇಶಿಸಿದೆ. ಆದೇಶ ನೀಡಿ ಒಂದು ತಿಂಗಳು ಕಳೆದರೂ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ. ತಕ್ಷಣ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕ್ರಮ ಕೈಗೊಳ್ಳಬೇಕು, ಇಲ್ಲವಾದರೆ ಲೋಕಾಯುಕ್ತಕ್ಕೆ ದೂರು ನೀಡಲಾಗುವುದು” ಎಂದು ಎಚ್ಚರಿಸಿದರು.

ಗ್ರಾಮಸ್ಥ ಮುನಿಓಬಳಯ್ಯ ಮಾತನಾಡಿ, “ಗ್ರಾಮದಲ್ಲಿ ದುರ್ವಾಸನೆ ಮಿತಿಮೀರಿದ್ದು ಊಟ ಮಾಡಲೂ ಆಗದ ಪರಿಸ್ಥಿತಿ ಇದೆ. ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಕೇಂದ್ರವನ್ನು ಸ್ಥಳಾಂತರಿಸಬೇಕು” ಎಂದು ಒತ್ತಾಯಿಸಿದರು.

ಯುವ ಮುಖಂಡ ಸಿದ್ದರಾಜು ಮಾತನಾಡಿ, “ಬೈರಸಂದ್ರದಲ್ಲಿ ದಲಿತರ ಜಮೀನು ಒತ್ತುವರಿ ಮಾಡಲಾಗಿದೆ. ಸ್ಮಶಾನದ ಜಾಗದಲ್ಲಿ ತ್ಯಾಜ್ಯ ಹಾಕಿ ಪರಿಸರ ಹಾಳು ಮಾಡುತ್ತಿದ್ದಾರೆ. ಅಧಿಕಾರಿಗಳು ಗಮನ ಹರಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು” ಎಂದು ಎಚ್ಚರಿಸಿದರು.

ಘಟನೆಯ ತೀವ್ರತೆಯನ್ನು ಗಮನಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವೀಂದ್ರ ಸ್ಥಳಕ್ಕೆ ಭೇಟಿ ನೀಡಿ, “ಒಂದು ವಾರದೊಳಗೆ ಸಮಸ್ಯೆಗೆ ಪರಿಹಾರ ನೀಡಲಾಗುವುದು” ಎಂದು ಭರವಸೆ ನೀಡಿದ್ದಾರೆ.

ಈ ಭರವಸೆಯನ್ನು ಗ್ರಾಮಸ್ಥರು ಸ್ವಾಗತಿಸಿದ್ದು, ಕ್ರಮ ಕೈಗೊಳ್ಳದಿದ್ದರೆ ತಾವೇ ಹಂದಿ ಸಾಕಾಣಿಕಾ ಕೇಂದ್ರ ತೆರವುಗೊಳಿಸಲು ಮುಂದಾಗುವುದಾಗಿ ತಿಳಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy